ದಶಮಾನ ಕಂಡ ಜಿಲ್ಲೆಯ ಮೊದಲ ಪ್ರಾದೇಶಿಕ ದಿನ ಪತ್ರಿಕೆ

ದಾವಣಗೆರೆ, ಉಡುಪಿ, ಶಿವಮೊಗ್ಗ, ಹಾಸನ, ಚಿಕ್ಕಮಗಳೂರು, ಗದಗ, ಬೆಂಗಳೂರು , ಬೆಂಗಳೂರು ಗ್ರಾಮಾಂತರ

# ಕನ್ನಡ ಭಾರತಿ

ನೊಂದವರ ನೈಜ ಕನ್ನಡಿ

ಸಂಪಾದಕರು : ಮಲ್ಲಿಕಾರ್ಜುನ್ ಕಬ್ಬೂರು

ಸಂಪುಟ : 13 ಸಂಚಿಕೆ : 155

2-12-2025 ಮಂಗಳವಾರ

₹1 KA/SK/DVG-006/2023-2025 KARKAN/2013/50807 KANNADA BHARATHI REGIONAL DALIY DAVANAGERE dvgkanndabharathi@gmail.com Page : 6 VOLUME : 13 ISSUE : 155

## ಸಿದ್ದರಾಮಯ್ಯ ಅವರೇ ಪೂರ್ಣಾವಧಿ ಸಿಎಂ: ಹೆಚ್.ಸಿ.ಮಹಾದೇವಪ್ಪ



**ದಾವಣಗೆರೆ.ಡಿ.1:** ಸಿಎಂ ಸ್ಥಾನದಲ್ಲಿ ಸಿದ್ದರಾಮಯ್ಯನವರು ಗಟ್ಟಿಯಾಗಿದ್ದಾ–ರೆ ಅವರೇ ಮುಂದುವರೆಯುತ್ತಾರೆ ಎಂದು ಸಮಾಜ ಕಲ್ಯಾಣ ಇಲಾಖೆ ಸಚಿವ ಹೆಚ್.ಸಿ. ಮಹಾದೇವಪ್ಪ ಪವರ್ ಶೇರಿಂಗ್ ಗೊಂದಲಕ್ಕೆ ತೆರೆ ಎಳೆದರು.

ನಗರದಲ್ಲಿ ಸುದ್ದಿಗಾರರೊಂದಿಗೆ ಮಾತ ನಾಡಿದ ಅವರು, ಸಿಎಂ ಬದಲಾವಣೆ ವಿಚಾರ ಪಕ್ಷದ ಮುಂದೆಯೇ ಇಲ್ಲ. ಅಂತೆ ಕಂತೆ ಮಾತುಗಳು ಯಾಕೆ? ಇಂತಹ ಗೊಂದಲಗಳು ಇರಬಾರದು ಎಂದೇ ಸಿಎಂ, ಡಿಸಿಎಂ ಬ್ರೇಕ್ ಫಾಸ್ಟ್ ಮೀಟಿಂಗ್ ಮಾಡಿದ್ದಾರೆ. ನಮಗೆ ಹೈಕಮಾಂಡ್ ಹೇಗೆ ಹೇಳುತ್ತೋ ಹಾಗೇ ಐದು ವರ್ಷ ಸರ್ಕಾರ ನಡೆಸುತ್ತೇವೆ ಎಂದು ಹೇಳಿದರು.


## ಪ್ರಗತಿ ಪರಿಶೀಲನಾ ಸಭೆ

**ದಾವಣಗೆರೆ:** ಪ್ರಧಾನ ಮಂತ್ರಿಗಳ ಹೊಸ 15 ಅಂಶಗಳ ಕಾರ್ಯಕ್ರಮ ಅನುಷ್ಠಾನದ ಕುರಿತು ಪ್ರಸಕ್ತ ಸಾಲಿನ ಜಿಲ್ಲಾ ಮಟ್ಟದ ಇಲಾಖೆಗಳ ಎರಡನೇ ತ್ರೈಮಾಸಿಕ ಪ್ರಗತಿ ಪರಿಶೀಲನಾ ಸಭೆಯನ್ನು ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ಡಿಸೆಂಬರ್ 2 ರಂದು ಬೆಳಿಗ್ಗೆ 11 ಗಂಟೆಗೆ ಜಿಲ್ಲಾಧಿಕಾರಿಗಳ ಕಚೇರಿಯಲ್ಲಿ ಆಯೋಜಿಸಲಾಗಿದೆ ಎಂದು ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಅಧಿಕಾರಿ ತಿಳಿಸಿದ್ದಾರೆ.

## ಡಿ. 5 ರಂದು ಕಾರ್ತಿಕೋತ್ಸವ

**ನ್ಯಾಮತಿ :** ನ್ಯಾಮತಿ ತಾಲೂಕಿನ ಕುರುವ – ಗೋವಿನಕೋವಿ – ರಾಂಪುರ ಗ್ರಾಮಗಳ ಮಧ್ಯೆ ಹರಿಯುವ ತುಂಗ ಭದ್ರಾ ನದಿಯ ನಡುಗಡ್ಡೆಯಲ್ಲಿರುವ ಗಡ್ಡೆ ಶ್ರೀರಾಮೇಶ್ವರ ದೇವರ ಹಾಗೂ ಶ್ರೀ ಗವಿ ಹಾಲಸಿದ್ದೇಶ್ವರ ದೇವರ ಕಾರ್ತಿಕ ದೀಪೋತ್ಸವ ಡಿಸೆಂಬರ್ 5 ಶುಕ್ರವಾರ ಸಂಜೆ ನಡೆಯಲಿದೆ ಎಂದು ಕುರುವ ಗಡ್ಡೆ ರಾಮೇಶ್ವರ ದೇಗುಲ ಜೀರ್ಣೋದ್ದಾರ ಸಮಿತಿಯ ಅಧ್ಯಕ್ಷ ಸುರೇಶ್ ನವುಲೇ ತಿಳಿಸಿದ್ದಾರೆ.
ಕಾರ್ತಿಕ ದೀಪೋತ್ಸವದ ಅಂಗವಾಗಿ ಡಿಸೆಂಬರ್ 5 ಶುಕ್ರವಾರ ಗಡ್ಡೆ ರಾಮೇಶ್ವರ ಸ್ವಾಮಿ ಹಾಗೂ ಪರಿವಾರ ದೇವರುಗಳ ಶಿಲಾಮೂರ್ತಿಗಳಿಗೆ , ರಾಂಪುರ ಶ್ರೀ ಹಾಲಸ್ವಾಮೀಜಿಯ ಮೂಲ ಸ್ಥಾನ ಶ್ರೀ ಗವಿ ಹಾಲಸಿದ್ದೇಶ್ವರ ಸ್ವಾಮೀಜಿ ಗದ್ದುಗೆಗೆ ವಿಶೇಷ ಧಾರ್ಮಿಕ ಪೂಜಾ ಕೈಂಕರ್ಯಗಳು ದೇವರುಗಳು ಸಾನಿಧ್ಯದಲ್ಲಿ ಕಾರ್ತೀಕ ದೀಪೋತ್ಸವ ನಡೆದ ಬಳಿಕ ಭಾಗವಹಿಸಿದ ಭಕ್ತ ಸಮೂಹಕ್ಕೆ ಅನ್ನಸಂತರ್ಪಣೆ ನಡೆಯಲಿದೆ ಎಂದು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಪ್ರಜ್ವಲ್ ಅತ್ಯಾಚಾರ ಕೇಸಿಗೆ ಹೊಸ ತಿರುವು ಕೊಟ್ಟ ವಕೀಲ



**ಬೆಂಗಳೂರು :** ಅತ್ಯಾಚಾರ ಪ್ರಕರಣದಲ್ಲಿ ಮಾಜಿ ಸಂಸದ ಪ್ರಜ್ವಲ್ ರೇವಣ್ಣ ಜೀವತಾವಧಿ ಶಿಕ್ಷೆಗೆ ಗು–ರಿಯಾಗಿದ್ದಾರೆ. ಆದ್ರೆ, ಇದೀಗ ಈ ಶಿಕ್ಷೆಯನ್ನು ಅಮಾನತ್ತಿನಲ್ಲಿಟ್ಟು ಜಾಮೀನು ನೀಡುವಂತೆ ಹೈಕೋರ್ಟ್‌ಗೆ ಅರ್ಜಿ ಸಲ್ಲಿಸಿದ್ದು, ಇಂದು (ಡಿಸೆಂಬರ್ 01) ನ್ಯಾಯಮೂರ್ತಿಗಳಾದ ಕೆ.ಎಸ್ ಮುದಗಲ್ ಮತ್ತು ಟಿ ವೆಂಕಟೇಶ್ ನಾಯಕ್ ವಿಭಾಗೀಯ ಪೀಠ ಅರ್ಜಿ ವಿಚಾರಣೆ ನಡೆಯಿತು. ಈ ವೇಳೆ ಪ್ರಜ್ವಲ್ ರೇವಣ್ಣ ಪರ ಹಿರಿಯ ವಕೀಲ ಸಿದ್ಧಾರ್ಥ್ ಲೂಥ್ರಾ ಪ್ರಬಲ ವಾದ ಮಂಡಿಸಿದ್ದು, ಸಂತ್ರಸ್ತೆಯ ಮೌನ, ಸಾಕ್ಷ್ಯಗಳ ಮೇಲಿನ ಸಂಶಯಗಳನ್ನು ಮುಂದಿಟ್ಟು ಶಿಕ್ಷೆ ಅಮಾನತುಗೊಳಿಸಿ ಜಾಮೀನು ನೀಡುವಂತೆ ಮನವಿ ಮಾಡಿದರು.

ಪ್ರಜ್ವಲ್ ಪರ ವಕೀಲರ ವಾದ ಹೇಗಿತ್ತು?

ಪ್ರಜ್ವಲ್ ರೇವಣ್ಣ ಪರವಾಗಿ ಹಿರಿಯ ವಕೀಲ ಸಿದ್ಧಾರ್ಥ್ ಲೂಥ್ರಾ ಪ್ರಬಲ ವಾದ ಮಂಡಿಸಿದ್ದು, ಪ್ರಜ್ವಲ್ 2024 ಏಪ್ರಿಲ್ 24ರಂದು ದೇಶ ತೊರೆಯುವಾಗ ಅವರ ವಿರುದ್ಧ ಯಾವುದೇ ಪ್ರಕರಣ ದಾಖಲಾಗಿರಲಿಲ್ಲ. ಆ್ಯಪಲ್ ಮೊಬೈಲ್ ವಶಕ್ಕೆ ನೀಡಿಲ್ಲವೆಂದು ಪ್ರಾಸಿಕ್ಯೂಷನ್ ಆರೋಪಿಸಿದೆ. ಆಪಲ್ ಮೊಬೈಲ್ ನೀಡುವಂತೆ ಸೆ.91ರ ಅಡಿ ನೋಟಿಸ್ ನೀಡಿಲ್ಲ. ಐಎಂಇಐ ನಂಬರ್ ಆಧರಿಸಿ ಮೊಬೈಲ್ ಕಂಪನಿಯಿಂದ ಮಾಹಿತಿ ಪಡೆಯಲು ಯತ್ನಿಸಿಲ್ಲ. ಸಂತ್ರಸ್ತೆ ದೂರು ದಾಖಲಿಸದೇ 3 ವರ್ಷ ಮೌನವಾಗಿ ಇದ್ದಿದ್ದೇಕೆ? ಒಮ್ಮೆಗೇ ನಾಲ್ಕು ಪ್ರತ್ಯೇಕ ಕ್ರಿಮಿನಲ್ ಕೇಸ್‌ಗಳು ಹೇಗೆ ದಾಖಲಾದವು ಎಂದು ಪ್ರಶ್ನಿಸಿದರು.

ಇನ್ನು ಇದೇ ವೇಳೆ ಎಫ್‌ಎಸ್‌ಎಲ್ ಸಾಕ್ಷಿ ಬಗ್ಗೆ ಸಂಶಯ ವ್ಯಕ್ತಪಡಿಸಿದ ವಕೀಲ ಸಿದ್ಧಾರ್ಥ್ ಲೂಥ್ರಾ, ರಾಜಕೀಯ ದುರುದ್ದೇಶದಿಂದ ಈ ಪ್ರಕರಣಗಳನ್ನು ದಾಖಲಿಸಲಾಗಿದೆ.

### ಬೋವಿ ನಿಗಮದ ಅಧ್ಯಕ್ಷರ ಪ್ರಗತಿ ಪರಿಶೀಲನಾ ಸಭೆ

# ಅರ್ಹ ಫಲಾನುಭವಿಗಳನ್ನು ಆಯ್ಕೆ ಮಾಡಿ: ರಾಮಪ್ಪ



**ದಾವಣಗೆರೆ : :** ಬೋವಿ ಅಭಿವೃದ್ಧಿ ನಿಗಮದ ಸಹಾಯಧನವು ಅರ್ಹರಿಗೆ ಹಾಗೂ ನೇರವಾಗಿ ಫಲಾನುಭವಿಗಳಿಗೆ ತಲುಪಿಸಬೇಕು. ಯಾವುದೇ ಕಾರಣಕ್ಕೂ ಮಧ್ಯವರ್ತಿಗಳು ಪ್ರವೇಶಿಸದಂತೆ ನೋಡಿಕೊಳ್ಳಬೇಕು ಎಂದು ರಾಜ್ಯ ಭೋವಿ ಅಭಿವೃದ್ಧಿ ನಿಗಮದ ಅಧ್ಯಕ್ಷ ಎಂ.ರಾಮಪ್ಪ ಸೂಚನೆ ನೀಡಿದರು.

ಸೋಮವಾರ(ಡಿ.01) ರಂದು ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಬೋವಿ ಅಭಿವೃದ್ಧಿ ನಿಗಮದ ಜಿಲ್ಲಾ ಮಟ್ಟದ ಪ್ರಗತಿ ಪರಿಶೀಲನಾ ಸಭೆ ನಡೆಸಿ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದರು.

ಭೋವಿ ಸಮುದಾಯದವರ ಸ್ವಾವಲಂಬನೆ, ಉದ್ಯೋಗಾವಕಾಶ ಮತ್ತು ಕೃಷಿ ಆಧಾರಿತ ಅಭಿವೃದ್ಧಿಗೆ ನಿಗಮವು ಹೆಚ್ಚಿನ ಒತ್ತು ನೀಡಿದೆ. ಭೋವಿ, ಒಡ್ಡೆ, ಒಡ್ಡರ್, ವಡ್ಡರ್, ಕಲ್ಲು ಒಡ್ಡರ, ಮಣ್ಣುವಡ್ಡರ ಸೇರಿದಂತೆ ಒಟ್ಟು 9 ಉಪಜಾತಿಗಳ ಸಮಗ್ರ ಆರ್ಥಿಕ ಮತ್ತು ಶೈಕ್ಷಣಿಕ ಪ್ರಗತಿಯನ್ನು ಸಾಧಿಸುವುದೇ ನಿಗಮದ ಪ್ರಮುಖ ಗು–ರಿಯಾಗಿದೆ. ರಾಜ್ಯದಲ್ಲಿ 20 ಲಕ್ಷ ಬೋವಿ ಸಮುದಾಯದ ಜನಾಂಗದವರು ಇದ್ದಾರೆ. ನಿಗಮದ ಹಣವು ಬಡವರ ಕೈಗೆ ಸೇರಬೇಕು. ಭೋವಿ ಜನಾಂಗದವರು ಅಧಿಕಾರಿಗಳ ಸಹಕಾರ ತೆಗೆದುಕೊಳ್ಳಬೇಕೇ ಹೊರತು ಅವರ ಮೇಲೆ ದಬ್ಬಾಳಿಕೆ ಮಾಡಬಾರದು.

ಯಾವುದೇ ಬ್ಯಾಂಕಿನವರು ಬಡವರ ಹತ್ತಿರ ಸಿಬಿಲ್ ಸ್ಕೋರ್, ಜಮೀನು ಯಾವುದನ್ನೂ ಕೇಳದೇ ನೇರವಾಗಿ ಸಾಲ ಸೌಲಭ್ಯವನ್ನು ನೀಡಬೇಕು. ಒಂದು ತಿಂಗಳಲ್ಲಿ ಬ್ಯಾಂಕಿನವರು ಉತ್ತರ ನೀಡದಿದ್ದರೆ ಸಿಇಓ ಅವರಿಗೆ ಮಾಹಿತಿ ನೀಡಬೇಕು ಎಂದು ಅಧಿಕಾರಿಗಳಿಗೆ ತಿಳಿಸಿದರು.

ಕಲ್ಲು ಕ್ವಾರಿಗಳಲ್ಲಿ ತಳ್ಳುವ ಗಾಡಿಯಲ್ಲಿ ಕೆಲಸ ಮಾಡುವವರಿಗೆ ತೊಂದರೆಯಾಗದಂತೆ ನೋಡಿಕೊಳ್ಳಿ, ಅವರಿಗೆ ಶೀಘ್ರವಾಗಿ ಸಾಲವನ್ನು ನೀಡಬೇಕು ಎಂದರು. ಸ್ವಯಂ ಉದ್ಯೋಗ ನೇರ ಸಾಲ ಯೋಜನೆಯಡಿ ರೂ. 1 ಲಕ್ಷ ವರೆಗೆ ಸಾಲ ನೀಡಲಾಗುತ್ತದೆ. ಗಂಗಾ ಕಲ್ಯಾಣ ಯೋಜನೆಯಡಿ (ಕೃಷಿ ಭೂಮಿಗೆ ಕೊಳವೆ ಬಾವಿ ಮತ್ತು ಪಂಪ್ ಸೆಟ್) ಘಟಕಕ್ಕೆ ರೂ.3.75 ಲಕ್ಷ ಕೊಡಲಾಗುತ್ತದೆ. ಮಹಿಳಾ ಸ್ವಸಹಾಯ ಗುಂಪುಗಳಿಗೆ 10 ಸದಸ್ಯರಿದ್ದರೆ ರೂ. 5 ಲಕ್ಷ ಕೊಡಲಾಗುವುದು. ಭೂ ಒಡೆತನ ಯೋಜನೆಯಡಿ ಭೂರಹಿತ ಕುಟುಂಬಕ್ಕೆ ರೂ.20 ಲಕ್ಷ ಘಟಕ ವೆಚ್ಚದಲ್ಲಿ ಭೂಮಿ ಖರೀದಿಗೆ ನೆರವು ನೀಡಲಾಗುತ್ತದೆ.

ಹಸು, ಕುರಿ, ಮೇಕೆ ಸಾಕಾಣಿಕೆ ಇತ್ಯಾದಿ ಕಿರುಆರ್ಥಿಕ ಚಟುವಟಿಕೆಗಳಿಗೆ ರೂ. 2.25 ಲಕ್ಷ ಘಟಕ ವೆಚ್ಚದಲ್ಲಿ ಸಹಾಯಧನ ಮತ್ತು ಸಾಲ ಸೌಲಭ್ಯ ಕಲ್ಪಿಸಲಾಗುವುದು.

ಕುರಿ, ಹಸು ಸಾಕಾಣಿಕೆಯವರಿಗೆ ಸಾಲ ಸೌಲಭ್ಯದ ವೆಚ್ಚ ಕಡಿಮೆ ಇರುವುದರಿಂದ ನರೇಗಾ ಯೋಜನೆಯಡಿ ಶೇಡ್ ನಿರ್ಮಾಣ ಮಾಡಲು ಅವಕಾಶ ನೀಡುವಂತೆ ಸಿಇಓ ಅವರಿಗೆ ತಿಳಿಸಿದರು.

ಯೋಜನೆಗಳನ್ನು ಸಮರ್ಪಕವಾಗಿ ಬಳಸಿಕೊಳ್ಳಲು ಸಮುದಾಯದ ಮುಖಂಡರು ಸಾರ್ವಜನಿಕರಿಗೆ ಅರಿವು ಮೂಡಿಸಬೇಕು, ಅರ್ಜಿ ಸಲ್ಲಿಸಲು ಸಹಕರಿಸಬೇಕು ಎಂದರು. ಅರ್ಹರು ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸಿದರೆ ಸಾಕು. ಯಾವುದೇ ಕಾರಣಕ್ಕೂ ಅಧಿಕಾರಿಗಳು ಅರ್ಜಿ ಹಿಂದೆ ಬೀಳುವ ಕೆಲಸ ಮಾಡಬೇಡಿ. ಸಮಾಜ ಕಲ್ಯಾಣ ಇಲಾಖೆಯ ನಿರ್ದೇಶನದಂತೆ ಫಲಾನುಭವಿಗಳ ಆಯ್ಕೆ ಸಮಿತಿ ರಚಿಸಿ ಸೂಕ್ತ ಅರ್ಜಿದಾರರನ್ನು ಆಯ್ಕೆಮಾಡಿದರೆ ನಾವು ಶಿಫಾರಸ್ಸು ಮಾಡಿ ನಿಗಮದಿಂದ ಸೌಲಭ್ಯವನ್ನು ಒದಗಿಸುತ್ತೇವೆ ಎಂದು ತಿಳಿಸಿದರು.

ಸರ್ಕಾರ ಜಾರಿಗೊಳಿಸುವಂತಹ ಯೋಜನೆಗಳನ್ನು ಸಮಾಜದ ಕಟ್ಟಕಡೆ–ಯ ವ್ಯಕ್ತಿಗೆ ತಲುಪಿಸುವ ಕೆಲಸವನ್ನು ಅಧಿಕಾರಿಗಳು ಮಾಡಬೇಕು. ಸ್ವಾವಲಂಬಿ ಸಾರಥಿ ಯೋಜನೆಯಡಿ ಸರಕು ವಾಹನವನ್ನು, ಟ್ಯಾಕ್ಸಿ (ಹಳದಿ ಬೋರ್ಡ್) ಉದ್ದೇಶದಡಿ ಘಟಕ ವೆಚ್ಚದ ಶೇ.75 ರಷ್ಟು ಅಥವಾ ಗರಿಷ್ಠ 4 ಲಕ್ಷಗಳ ಸಹಾಯಧನ ಉಳಿದಂತೆ ಬ್ಯಾಂಕ್ ಸಾಲವನ್ನು ನೀಡಲಾಗುವುದು.

ಅಪರ ಜಿಲ್ಲಾಧಿಕಾರಿ ಶೀಲವಂತ ಶಿವಕುಮಾರ್ ಸಂವಿಧಾನದ ಪೀಠಿಕೆ ಓದಿದರು.

### ಮತ್ತೊಂದು ಬ್ರೇಕ್ ಫಾಸ್ಟ್‌ಗೆ ಆಹ್ವಾನಿಸಿದ ಡಿಕೆಶಿ:

# ಸಿಎಂಗೆ ಇಷ್ಟವಾದ ನಾಟಿ ಕೋಳಿ ರೆಸಿಪಿ



**ಬೆಂಗಳೂರು :** ಸಿಎಂ ಕುರ್ಚಿ ಕದನ ತೀವ್ರ ಸ್ವರೂಪ ಪಡೆದುಕೊಳ್ಳುತ್ತಿದ್ದ ಬೆನ್ನಲ್ಲೇ ಹೈಕಮಾಂಡ್ ಸಿಎಂಗೆ ಕರೆ ಮಾಡಿ ಒಟ್ಟಿಗೆ ಸೇರಿ ಬ್ರೇಕ್ ಫಾಸ್ಟ್ ಮಾಡುವಂತೆ ಕರೆ ನೀಡಿತ್ತು. ಇದರ ಬೆನ್ನಲ್ಲೇ ಸಿದ್ದರಾಮಯ್ಯನವರು ಡಿಸಿಎಂ ಡಿಕೆ ಶಿವಕುಮಾರ್ ಕರೆ ಮಾಡಿ ಬ್ರೇಕ್ ಫಾಸ್ಟ್ ಮೀಟಿಂಗ್ ಮಾಡಿದ್ದರು. ಬಳಿಕ ತಮ್ಮಿಬ್ಬರ ನಡುವೆಯಾವುದೇ ಗೊಂದಲ ಇಲ್ಲ ಎಂದು ಮಾಧ್ಯಮಗಳ ಮುಂದೆ ಒಗ್ಗಟ್ಟಿನ ಪ್ರದರ್ಶಿಸಿದ್ದರು. ಇದರ ಬೆನ್ನಲ್ಲೇ ಇದೀಗ ಡಿಕೆ ಶಿವಕುಮಾರ್, ಸಿದ್ದರಾಮಯ್ಯನವರಿಗೆ ಬ್ರೇಕ್ ಫಾಸ್ಟ್ ಮಾಡಲು ನಾಳೆ(ಡಿಸೆಂಬರ್ 02) ತಮ್ಮ ನಿವಾಸಕ್ಕೆ ಬರುವಂತೆ ಆಹ್ವಾನ ನೀಡಿ–ದ್ದಾರೆ.

ಇಂದು (ಡಿಸೆಂಬರ್ 01) ವಿಧಾನಸೌಧದ ಕಾರ್ಯಕ್ರಮ ವೇಳೆ ತಮ್ಮ ನಿವಾಸಕ್ಕೆ ನಾಳೆ ಬ್ರೇಕ್ ಫಾಸ್ಟ್‌ಗೆ ಬರುವಂತೆ ಆಹ್ವಾನ ನೀಡಿದರು. ಇದಕ್ಕೆ ಸಿಎಂ ಸಹ ಒಪ್ಪಿಗೆ ಸೂಚಿಸಿದ್ದಾರೆ. ಇನ್ನು ಬ್ರೇಕ್ ಫಾಸ್ಟ್‌ಗೆ ಸಿದ್ದರಾಮಯ್ಯನವರಿಗೆ ಇಷ್ಟವಾದ ನಾಟಿ ಕೋಳಿ ರೆಸಿಪಿ ಸಿದ್ಧಪಡಿಸಲು ಡಿಕೆಶಿ ಸೂಚಿಸಿದ್ದಾರೆ. ಮೊದಲ ಮೀಟಿಂಗ್ ಬಳಿಕ ಸಿಎಂ ಹಾಗೂ ಡಿಸಿಎಂ ಡಿಕೆ ಶಿವಕುಮಾರ್ ಒಗ್ಗಟ್ಟಿನ ಸಂದೇಶ ರವಾನಿಸಿ, ಏನೇ ಇದ್ದರೂ ಹೈಕಮಾಂಡ್ ಹೇಳಿದಂತೆ ನಡೆಯುತ್ತೇವೆ ಎಂದಿದ್ದರು. ಆ ಬಳಿಕ ಸಿದ್ದರಾಮಯ್ಯ ಅವರು, ಡಿಕೆಶಿ ಕೂಡ ಮನೆಗೆ ಆಹ್ವಾನಿಸಿದ್ದಾರೆ, ಹೋಗುತ್ತೇನೆ ಎಂದಿದ್ದರು. ಇದೀಗ ಅದಕ್ಕೂ ಮುಹೂರ್ತ ಫಿಕ್ಸ್ ಆಗಿದ್ದು, ಮಂಗಳವಾರ ಬೆಳಗ್ಗೆ 9.30ಕ್ಕೆ ಡಿಕೆಶಿ ನಿವಾಸದಲ್ಲಿ ಮೀಟಿಂಗ್ ನಡೆಯಲಿದೆ.ಈ ಮಧ್ಯೆ, ಅಧಿಕಾರ ಹಂಚಿಕೆ ತಿಕ್ಕಾಟದ ಅಂತಿಮ ನಿರ್ಧಾರ ಈಗ ಹೈಕಮಾಂಡ್ ಅಂಗಳ ತಲುಪಿದೆ. ದೆಹಲಿಯಲ್ಲಿ ಸೋನಿಯಾ ಗಾಂಧಿ ನಿವಾಸದಲ್ಲಿ ಭಾನುವಾರ ಮಹತ್ವದ ಸಭೆ ನಡೆದಿದ್ದು, ಆದಷ್ಟು ಕರ್ನಾಟಕ ಕಾಂಗ್ರೆಸ್ ಅಧಿಕಾರ ಹಂಚಿಕೆ ಬಿಕ್ಕಟ್ಟು ತುಸು ಮಟ್ಟಿಗೆ ಶಮನಗೊಂಡ ಬೆನ್ನಲ್ಲೇ ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಎಚ್ಚರಿಕೆಯ ಹೆಜ್ಜೆ ಇಟ್ಟಿದ್ದಾರೆ. ಖರ್ಗೆ ಕರ್ನಾಟಕದವರೇ ಆಗಿರುವುದರಿಂದ ಯಾವುದೇ ಏಕಪಕ್ಷೀಯ ನಿರ್ಧಾರವಾಗದಂತೆ ನೋಡಿಕೊಳ್ಳಲು ಎಲ್ಲ ಉನ್ನತ ಮಟ್ಟದ ನಾಯಕರನ್ನು ಜತೆ ಕರೆದು ಚರ್ಚಿಸಲು ಮುಂದಾಗಿದ್ದಾರೆ.

## ಶಾಸಕ ಎಸ್ಸೆಸ್ ಆರೋಗ್ಯಕ್ಕೆ ಪ್ರಾರ್ಥಿಸಿ ಅಭಿಷೇಕ



**ದಾವಣಗೆರೆ:** ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ಹಸಿರು ಸೇನೆ ತಾಲ್ಲೂಕು ಸಮಿತಿ ಹಾಗೂ ಗ್ರಾಮ ಘಟಕದ ವತಿಯಿಂದ ಅಖಿಲ ಭಾರತ ವೀರಶೈವ ಲಿಂಗಾಯತ ಮಹಾಸಭಾದ ರಾಷ್ಟ್ರೀಯ ಅಧ್ಯಕ್ಷರು, ಶಾಸಕರು ಆಗಿರುವ ಶಾಮನೂರು ಶಿವಶಂಕರಪ್ಪನವರಿಗೆ ಆರೋಗ್ಯ, ಆಯಸ್ಸಿಗೆ ಪ್ರಾರ್ಥಿಸಿ ಆನಗೋಡು ಮರುಳಸಿದ್ದೇಶ್ವರ ಸ್ವಾಮಿಗೆ ಸೋಮವಾರ ಅಭಿಷೇಕ ಮಾಡಿಸಲಾಯಿತು.

ಈ ಸಂದರ್ಭದಲ್ಲಿ ತಾಲ್ಲೂಕು ಅಧ್ಯಕ್ಷ ಮಂಡಲೂರು ವಿಶ್ವನಾಥ್, ಅಗಸನಕಟ್ಟೆ, ಕೋಡಿಹಳ್ಳಿ, ಸಿದ್ದನೂರು ಗ್ರಾಮದ ರೈತರು, ಸಮಿತಿ ಪದಾಧಿಕಾರಿಗಳು ಹಾಜರಿದ್ದರು.

# ಅಧಿವೇಶನದಲ್ಲಿ ನಾಟಕ ಬೇಡ ; ವಿಪಕ್ಷಗಳಿಗೆ ಪ್ರಧಾನಿ ಮೋದಿ ಮನವಿ



**ನವದೆಹಲಿ :** ಈ ಚಳಿಗಾಲದ ಅಧಿವೇಶನವನ್ನು ಭಾರತದ ಅಭಿವೃದ್ಧಿಯತ್ತ ಪ್ರಮುಖ ಹೆಜ್ಜೆ ಎಂದು ಕರೆದಿರುವ ಪ್ರಧಾನಿ ಮೋದಿ ಅವರು ವಿರೋಧ ಪಕ್ಷಗಳು ಮತ್ತು ಆಡಳಿತಾರೂಢ ಪಕ್ಷದ ಸದಸ್ಯರು ಯಾವುದೇ ನಾಟಕಕ್ಕೆ ಅವಕಾಶ ನೀಡದೆ ಮುಕ್ತ ಅಧಿವೇಶನಕ್ಕೆ ಸಹಕಾರ ನೀಡಬೇಕು ಎಂದು ಮನವಿ ಮಾಡಿಕೊಂಡಿದ್ದಾರೆ.

ಸಂಸತ್ತಿನ ಚಳಿಗಾಲದ ಅಧಿವೇಶನಕ್ಕೆ ಮುಂಚಿತವಾಗಿ ಪ್ರಧಾನಿ ಮೋದಿ ಮಾಧ್ಯಮಗಳನ್ನು ಉದ್ದೇಶಿಸಿ ತಮ್ಮ ಮೊದಲ ಭಾಷಣದಲ್ಲಿ ಈ ಮನವಿ ಮಾಡಿದ್ದಾರೆ.ನಾಟಕ ಮಾಡಲು ಬಯಸುವವರು ಅದನ್ನು ಮಾಡಬಹುದು. ಇಲ್ಲಿ ನಾಟಕವಲ್ಲ, ವಿತರಣೆ ಇರಬೇಕು. ಘೋಷಣೆಗಳಲ್ಲ, ನೀತಿಯ ಮೇಲೆ ಒತ್ತು ನೀಡಬೇಕು ಎಂದು ಮೋದಿ ಹೇಳಿದರು.

ಚಳಿಗಾಲದ ಅಧಿವೇಶನ ಪ್ರಾರಂಭವಾಗುವ ಮುನ್ನ, ಈ ಸಂಸತ್ತಿನ ಅಧಿವೇಶನವು ಒಂದು ಆಚರಣೆಯಾಗಿರುವುದಿಲ್ಲ ಆದರೆ ಭಾರತದ ಅಭಿವೃದ್ಧಿಯತ್ತ ಪ್ರಯತ್ನಗಳನ್ನು ಉತ್ತೇಜಿಸುವ ಅವಿಭಾಜ್ಯ ಅಂಗವಾಗಿರುತ್ತದೆ ಎಂದು ಪ್ರಧಾನಿ ಮೋದಿ ಹೇಳಿದ್ದಾರೆ.

ಅಧಿವೇಶನದಲ್ಲಿ ಪಾಲ್ಗೊಳ್ಳುವ ವಿಪಕ್ಷಗಳು ಖಿನ್ನತೆಯಿಂದ ಹೊರಬರಬೇಕು. ಯುವ ಹಾಗೂ ಮೊದಲ ಬಾರಿಯ ಸಂಸದರಿಗೆ ಪ್ರಶ್ನೆ ಕೇಳಲು ಅವಕಾಶ ನೀಡಬೇಕು ಎಂದು ಪ್ರಧಾನಿ ಹೇಳಿದರು.ಆದರೆ ಚಳಿಗಾಲದ ಅಧಿವೇಶನದಲ್ಲಿ ಉಭಯ ಸದನಗಳ ಕಾರ್ಯನಿರ್ವಹಣೆಗೆ ಯಾರು ಅಡ್ಡಿಪಡಿಸಬಾರದು.ಬಿಹಾರ ಚುನಾವಣೆಯಲ್ಲಿ ಹೆಚ್ಚಿನ ಮತದಾನ ಮತ್ತು ಮಹಿಳೆಯರ ಭಾಗವಹಿಸುವಿಕೆಯು ಭರವಸೆ ಮತ್ತು ನಂಬಿಕೆಯನ್ನು ಸೃಷ್ಟಿಸುತ್ತಿದೆ ಎಂದು ಪ್ರಧಾನಿ ಹೇಳಿದರು.

ಜಗತ್ತು ಇದನ್ನು ಬಹಳ ಎಚ್ಚರಿಕೆಯಿಂದ ನೋಡುತ್ತಿದೆ. ಪ್ರಜಾಪ್ರಭುತ್ವವು ತಲುಪಿಸಬಲ್ಲದು ಎಂದು ಭಾರತ ಸಾಬೀತುಪಡಿಸಿದೆ. ದೇಶವು ಯಾವ ದಿಕ್ಕಿನಲ್ಲಿ ಸಾಗುತ್ತಿದೆ ಎಂಬುದರ ಮೇಲೆ ಸಂಸತ್ತು ಗಮನಹರಿಸಬೇಕು ಎಂದು ಅವರು ಹೇಳಿದರು. ವಿರೋಧ ಪಕ್ಷಗಳು ಸಹ ತನ್ನ ಕರ್ತವ್ಯವನ್ನು ಮಾಡಬೇಕು. ಅವರು ಪ್ರಮುಖ ಸಮಸ್ಯೆಗಳನ್ನು ಎತ್ತಬೇಕು. ಅವರು ಸೋಲಿನ ನಿರಾಶೆಯಿಂದ ಹೊರಬರಬೇಕು.

ದುರದೃಷ್ಟವಶಾತ್, ಕೆಲವು ಪಕ್ಷಗಳು ಸೋಲನ್ನು ಅರಗಿಸಿಕೊಳ್ಳಲು ಸಾಧ್ಯವಾಗುತ್ತಿಲ್ಲ ಎಂದು ಅವರು ಕಾಂಗ್ರೆಸ್ ಅನ್ನು ಸ್ಪಷ್ಟವಾಗಿ ಟೀಕಿಸಿದರು. ಸಂಸತ್ತು ಚುನಾವಣಾ ಸೋಲಿನಿಂದ ಕರಗುವ ಯುದ್ಧಭೂಮಿಯಾಗಿ ಅಥವಾ ಹೆಮ್ಮೆಯನ್ನು ಪ್ರದರ್ಶಿಸುವ ಸ್ಥಳವಾಗಿ ಬದಲಾಗಬಾರದು ಎಂದು ಅವರು ಹೇಳಿದರು.

ಪಕ್ಷಗಳನ್ನು ಮೀರಿದ ಯುವ ಸಂಸದರಿಗೆ ಸಂಸತ್ತಿನಲ್ಲಿ ಸಮಸ್ಯೆಗಳನ್ನು ಎತ್ತಲು ಅವಕಾಶ ನೀಡಬೇಕು ಎಂದು ಅವರು ಹೇಳಿದರು. ನಕಾರಾತ್ಮಕತೆಯನ್ನು ಮಿತಿಯಲ್ಲಿ ಇಟ್ಟುಕೊಳ್ಳಬೇಕು ಮತ್ತು ರಾಷ್ಟ್ರ ನಿರ್ಮಾಣದತ್ತ ಗಮನ ಹರಿಸಬೇಕು ಎಂದು ಪ್ರಧಾನಿ ಹೇಳಿದರು.

ಕಾಂಗ್ರೆಸ್ ಮತ್ತು ಇತರ ವಿರೋಧ ಪಕ್ಷಗಳನ್ನು ಟೀಕಿಸಿದ ಪ್ರಧಾನಿ, ಕೆಲವು ರಾಜ್ಯಗಳಲ್ಲಿ, ಅವರ ಆಳ್ವಿಕೆಯ ನಂತರ ಆಡಳಿತ ವಿರೋಧಿ ಅಲೆ ತುಂಬಾ ಇದೆ, ಅವರು ಜನರ ಬಳಿಗೆ ಹೋಗಲು ಸಾಧ್ಯವಿಲ್ಲ ಎಂದು ಹೇಳಿದರು. ಮತ್ತು ಅದಕ್ಕಾಗಿಯೇ ಎಲ್ಲಾ ಕೋಪವು ಸಂಸತ್ತಿಗೆ ಬರುತ್ತದೆ.



**ನ್ಯಾಮತಿ ತಾಲೂಕಿನ ಗೋವಿನಕೋವಿ ಗ್ರಾಮದ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘದ ಐದು ವರ್ಷದ ಅವದಿಗೆ ಭಾನುವಾರ ನಡೆದ ಚುನಾವಣೆಯಲ್ಲಿ ಮೀಸಲು ಕ್ಷೇತ್ತದಿಂದ ಅವಿರೋಧವಾಗಿ ಆಯ್ಕೆಯಾದ ವಿಜೇತ ಅಭ್ಯರ್ಥಿ ಚುನಾವಣಾಧಿಕಾರಿಯಿಂದ ಪ್ರಮಾಣ ಪತ್ರ ಪಡೆಯುತ್ತಿರುವುದು.**

### ಉದ್ಯೋಗ ಆಕಾಂಕ್ಷಿ ಯುವಜನರ ಮೇಲೆ ಪೊಲೀಸರ ಲಾಠಿ ಚಾರ್ಜ್,

# ಬಂಧನ ಖಂಡಿಸಿ ಪ್ರತಿಭಟನೆ

**ದಾವಣಗೆರೆ.ಡಿ.1:** ಧಾರವಾಡದಲ್ಲಿ ಶಾಂತಿಯುತವಾಗಿ ಪ್ರತಿಭಟನಾ ಮೆರವಣಿಗೆ ನಡೆಸುತ್ತಿದ್ದ ಉದ್ಯೋಗ ಆಕಾಂಕ್ಷಿ ಯುವಜನರ ಮೇಲೆ ಪೊಲೀಸರು ಲಾಠಿ ಚಾರ್ಜ್ ನಡೆಸಿ ಅವರನ್ನು ಬಂಧಿಸಿರುವ ಸರ್ಕಾರದ ಕ್ರಮವನ್ನು ಖಂಡಿಸಿ ನಗರದಲ್ಲಿ ಉದ್ಯೋಗಾಕಾಂಕ್ಷಿಗಳ ಹೋರಾಟ ಸಮಿತಿ ಮತ್ತು ಆಲ್ ಇಂಡಿಯಾ ಡೆಮಾಕ್ರೆಟಿಕ್ ಯೂತ್ ಆರ್ಗನೈಸೇಷನ್ ಜಿಲ್ಲಾ ಘಟಕಗಳು ಪ್ರತಿಭಟನೆ ನಡೆಸಿದವು.

ಸೋಮವಾರ ನಗರದ ಎಸಿ ಕಚೇರಿ ಮುಂಭಾಗ ಉದ್ಯೋಗಾಕಾಂಕ್ಷಿಗಳ ಹೋರಾಟ ಸಮಿತಿ ಮತ್ತು ಆಲ್ ಇಂಡಿಯಾ ಡೆಮಾಕ್ರೆಟಿಕ್ ಯೂತ್ ಆರ್ಗನೈಸೇಷನ್ ಜಿಲ್ಲಾ ಘಟಕಗಳ ಪದಾಧಿಕಾರಿಗಳು ಸರ್ಕಾರದ ವಿರುದ್ಧ ಘೋಷಣೆ ಕೂಗಿ ಬಂಧಿಸಿರುವ ಎಲ್ಲಾ ಉದ್ಯೋಗಾಕಾಂಕ್ಷಿಗಳನ್ನು ಬಿಡುಗಡೆ ಮಾಡುವಂತೆ ಮನವಿ ಸಲ್ಲಿಸಿದರು.

ಈ ವೇಳೆ ಸಮಿತಿ ಮುಖಂಡ ಪರುಶುರಾಮ್ ಮಾತನಾಡಿ, ಕೇಂದ್ರ ಮತ್ತು ರಾಜ್ಯದಲ್ಲಿ ವಿವಿಧ ಇಲಾಖೆಗಳಲ್ಲಿ ಖಾಲಿ ಇರುವ ಲಕ್ಷಾಂತರ ಹುದ್ದೆಗಳನ್ನು ಕೂಡಲೇ ಭರ್ತಿ ಮಾಡಬೇಕು. ನೇಮಕಾತಿಯಲ್ಲಿ ಅಕ್ರಮ, ಭ್ರಷ್ಟಾಚಾರವನ್ನು ನಿರ್ಮೂಲನೆ ಮಾಡಿ, ಪಾರದರ್ಶಕ ನೇಮಕಾತಿ ಮಾಡಬೇಕು ಹಾಗೂ ಎಲ್ಲಾ ನೇಮಕಾತಿಯಲ್ಲಿ ಐದು ವರ್ಷ ವಯೋಮಿತಿಯನ್ನು ಹೆಚ್ಚಿಸಬೇಕು ಎಂಬ ಇನ್ನಿತರ ಹಲವು ಬೇಡಿಕೆಗಳ ಈಡೇರಿ–ಕೆಗಾಗಿ ಒತ್ತಾಯಿಸಿ ಇಂದು ಧಾರವಾಡದಲ್ಲಿ ಉದ್ಯೋಗಾಕಾಂಕ್ಷಿಗಳ ಹೋರಾಟ ಸಮಿತಿ ಹಾಗೂ ಜನಸಾಮಾನ್ಯರ ವೇದಿಕೆ ನೇತೃತ್ವದಲ್ಲಿ ಬೃಹತ್ ಪ್ರತಿಭಟನಾ ಮೆರವಣಿಯನ್ನು ಹಮ್ಮಿಕೊಳ್ಳಲಾಗಿತ್ತು ಎಂದರು.ಈ ಸಮಸ್ಯೆಗಳ ಪರಿಹಾರಕ್ಕಾಗಿ ಶಾಂತಿಯುತವಾಗಿ ಪ್ರತಿಭಟನಾ ಮೆರವಣಿಗೆ ನಡೆಸುತ್ತಿದ್ದ ಉದ್ಯೋಗ ಆಕಾಂಕ್ಷಿ ಯುವಜನರ ಮೇಲೆ ಲಾಠಿಚಾರ್ಜ್ ನಡೆಸಿ ಅವರನ್ನು ಬಂಧಿಸಿರುವ ಸರ್ಕಾರದ ಕ್ರಮವನ್ನು ಉದ್ಯೋಗಾಕಾಂಕ್ಷಿಗಳ ಹೋರಾಟ ಸಮಿತಿಯು ಅತ್ಯಂತ ತೀವ್ರವಾಗಿ ಖಂಡಿಸುತ್ತದೆ. ಕೂಡಲೇ ಬಂಧಿಸಿರುವ ಎಲ್ಲರನ್ನೂ ಬಿಡುಗಡೆಗೊಳಿಸಲು ಆಗ್ರಹಿಸುತ್ತದೆ ಎಂದರು. ಪ್ರತಿಭಟನೆ ನಡೆಸಲು ಅನುಮತಿ ಪಡೆದಿಲ್ಲ ಎನ್ನುವುದನ್ನು ಮುಂದಿಟ್ಟುಕೊಂಡು ಪ್ರತಿಭಟನೆಯನ್ನು ಧಮನಗೊಳಿಸಲು ಪೊಲೀಸರ ಮೂಲಕ ಸರ್ಕಾರ ಪ್ರಯತ್ನಿಸಿದೆ. ಡಿ.1 ರಂದು ಬೆಳಿಗ್ಗೆ 10ರಿಂದ ಧಾರವಾಡದ ಶ್ರೀನಗರದಿಂದ ಜಿಲ್ಲಾಧಿಕಾರಿಗಳ ಕಚೇರಿಗೆ ಬೃಹತ್ ಮೆರವಣಿಗೆ ಹೊರಟು ಜಿಲ್ಲಾಧಿಕಾರಿಗಳಿಗೆ ಮನವಿ

# ಗುಣಮಟ್ಟದ ರಸ್ತೆ ಕಾಮಗಾರಿ ನಡೆಸದಿದ್ದರೆ ಅಧಿಕಾರಿಗಳು–ಗುತ್ತಿಗೆದಾರರು ಹೊಣೆ : ಶಾಸಕ ತಮ್ಮಯ್ಯ



**ಚಿಕ್ಕಮಗಳೂರು**–ತಾಲ್ಲೂಕಿನ ಶಿರವಾಸೆ ಗ್ರಾ.ಪಂ ವ್ಯಾಪ್ತಿಯ ಕೊಂಡದಖಾನ್ ಎಸ್ಟೇಟ್ ಸಮೀಪ ವಾಸಿಸುತ್ತಿರುವ ಸಾರ್ವಜನಿಕರಿಗೆ ಅಲ್ಲೇ ಇರುವ ಜಾಗದಲ್ಲಿ ನಿವೇಶನ ಕೊಡಿಸುವ ಜೊತೆಗೆ ಹಕ್ಕುಪತ್ರ ನೀಡಲು ಪ್ರಾಮಾಣಿಕ ಪ್ರಯತ್ನ ಮಾಡುವುದಾಗಿ ಶಾಸಕ ಹೆಚ್.ಡಿ ತಮ್ಮಯ್ಯ ಭರವಸೆ ನೀಡಿದರು.

ಅವರು ಇಂದು ಶಿರವಾಸೆ ಗ್ರಾ.ಪಂ ವ್ಯಾಪ್ತಿಯಲ್ಲಿ 9.40 ಕೋಟಿ ರೂ. ವಿವಿಧ ರಸ್ತೆಗಳ ಅಭಿವೃದ್ಧಿ ಹಾಗೂ 50 ಲಕ್ಷ ರೂ ವೆಚ್ಚದ ಮೂರು ಕಿರುಸೇತುವೆ ನಿರ್ಮಾಣಕ್ಕೆ ಗುದ್ದಲಿ ಪೂಜೆ ನೆರವೇರಿಸಿ ಮಾತನಾಡಿದರು.

ಚುನಾವಣಾ ಪೂರ್ವದಲ್ಲಿ ಈ ಭಾಗಕ್ಕೆ ಆಗಮಿಸಿದ ಸಂದರ್ಭದಲ್ಲಿ ಮೂರು ಬೇಡಿಕೆಗಳನ್ನು ಇಡಲಾಗಿದ್ದು, ಅದರಲ್ಲಿ ಪ್ರಮುಖವಾದ ರಸ್ತೆ ಬೇಡಿಕೆಯನ್ನು ಈಡೇರಿಸಿದ್ದೇವೆ. ಅತಿ ಶೀಘ್ರವಾಗಿ ಗುಣಮಟ್ಟದ ರಸ್ತೆ ಅಭಿವೃದ್ಧಿಯಾಗಬೇಕು, ಇಲ್ಲದಿದ್ದರೆ ಅಧಿಕಾರಿಗಳು ಮತ್ತು ಗುತ್ತಿಗೆದಾರರನ್ನು ಹೊಣೆಗಾರರನ್ನಾಗಿ ಮಾಡುವುದಾಗಿ ಎಚ್ಚರಿಸಿದರು.

ನಿವೇಶನಕ್ಕೆ ಮೀಸಲಿಟ್ಟಿರುವ ಜಾಗದ ಬಗ್ಗೆ ಈಗಾಗಲೇ ಅರಣ್ಯಾಧಿಕಾರಿ, ಕಂದಾಯ ಇಲಾಖೆ ಅಧಿಕಾರಿಗಳು, ತಾಲ್ಲೂಕು ಪಂಚಾಯಿತಿ ಅಧಿಕಾರಿಗಳೊಂದಿಗೆ ಸಭೆ ನಡೆಸಲಾಗಿದ್ದು, ಈ ಜಾಗ ಅರಣ್ಯ ಇಲಾಖೆ ವ್ಯಾಪ್ತಿಯ ಡೀಮ್ಡ್ ಎಂದು ಗುರ್ತಿಸಲಾಗಿದ್ದು, ರುಡಾಲ್ಫ್ ಅವರ ಕಂಪನಿ ಎಸ್ಟೇಟ್‌ನವರು ಸಾರ್ವಜನಿಕರಿಗಾಗಿ ನಿವೇಶನ ಹಂಚುವುದಾದರೆ ಬಿಟ್ಟುಕೊಡುವುದಾಗಿ ಭರವಸೆ ನೀಡಿದರು.

ಸರ್ಕಾರ ಕಾನೂನು ವ್ಯಾಪ್ತಿಯಲ್ಲಿ ಜನಪರವಾದ ಕೆಲಸಗಳಿಗೆ ಬದ್ಧವಾಗಿದ್ದು, ರಸ್ತೆ ಮತ್ತು ನಿವೇಶನ ಕೊಡುವ ಕುರಿತು ಅಗತ್ಯ ಇರುವ ದಾಖಲೆಗಳನ್ನು ಸರಿಪಡಿಸುವ ಕೆಲಸ ಮಾಡಿದ್ದೇವೆ. ಈಗಾಗಲೇ ಹಕ್ಕುಪತ್ರಗಳನ್ನು ಶೀಘ್ರವಾಗಿ ವಿತರಿಸುವಂತೆ ಅಧಿಕಾರಿಗಳಿಗೆ ಸೂಚನೆ ನೀಡಿದ್ದೇನೆಂದು ಹೇಳಿದರು.

ಕ್ಷೇತ್ರದ 34 ಗ್ರಾಮ ಪಂಚಾಯಿತಿಗಳು ಹಾಗೂ ನಗರದ 35 ವಾರ್ಡ್‌ಗಳಲ್ಲಿ ಸಮಗ್ರ ಅಭಿವೃದ್ಧಿ ಕಾರ್ಯಗಳು ಸಮರೋಪಾದಿಯಲ್ಲಿ ನಡೆಯಬೇಕೆಂಬ ಉದ್ದೇಶದಿಂದ ಗುದ್ದಲಿ ಪೂಜೆ ಕಾರ್ಯಕ್ರಮವನ್ನು ನಡೆಸಿ ಕಾಮಗಾರಿಗಳಿಗೆ ಚಾಲನೆ ನೀಡಲಾಗಿದೆ ಎಂದು ತಿಳಿಸಿದರು.

ಮಾಜಿ ಜಿಲ್ಲಾ ಕಾಂಗ್ರೆಸ್ ಅಧ್ಯಕ್ಷ ಎಂ.ಎಲ್. ಮೂರ್ತಿ ಮಾತನಾಡಿ, ನಿವೇಶನ ನೀಡಿ ಹಕ್ಕುಪತ್ರ ನೀಡಬೇಕು, ಕೊಂಡದಖಾನ್‌ನಿಂದ ಸಂಪರ್ಕ ಕಲ್ಪಿಸುವ ರಸ್ತೆ ಅಭಿವೃದ್ಧಿಗೆ ಅಗತ್ಯ ಕ್ರಮ ಕೈಗೊಳ್ಳಬೇಕೆಂದು ಮನವಿ ಮಾಡಿದ ಅವರು, ಇದರಿಂದ ಈ ಭಾಗದ ಸಾರ್ವಜನಿಕರ ಸಂಚಾರಕ್ಕೆ ಅನುಕೂಲವಾಗಲಿದೆ ಎಂದರು.

ಜಿಲ್ಲೆಯ ಐದು ಶಾಸಕರಲ್ಲಿ ಅತೀ ಹೆಚ್ಚು ಅನುದಾನ ತಂದು ಕೆಲಸ ಮಾಡುತ್ತಿರುವ ಶಾಸಕ ಹೆಚ್.ಡಿ. ತಮ್ಮಯ್ಯ ಜನಪರ ಕ್ರಿಯಾಶೀಲ ವ್ಯಕ್ತಿ ಎಂದು ಬಣ್ಣಿಸಿದರು.

ಕಾರ್ಯಕ್ರಮದಲ್ಲಿ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಹೆಚ್.ಪಿ ಮಂಜೇಗೌಡ, ಮಾಜಿ ಜಿ.ಪಂ ಅಧ್ಯಕ್ಷ ಕೆ. ಮಹಮದ್, ಶಿರವಾಸೆ ಗ್ರಾ.ಪಂ ಮಾಜಿ ಅಧ್ಯಕ್ಷೆ ಪ್ರೇಮಾಕ್ಷಿ, ರಾಧ, ರವಿ, ಚಂದ್ರೇಗೌಡ, ಕುಳ್ಳನ್, ಲೋಬೋ, ಗಿರೀಶ್, ಸಂದೀಪ್, ವಿಶ್ವನಾಥ್, ಶಿವಕುಮಾರ್, ನರೇಂದ್ರ, ಪ್ರಸನ್ನ, ಅನಿಲ್‌ಗೌಡ ಮತ್ತಿತರರು ಉಪಸ್ಥಿತರಿದ್ದರು.

# ಪುಟ್ಟತಿಮ್ಮನಹಳ್ಳಿ ಸರ್ಕಾರಿ ಕಿರಿಯ ಪ್ರಾಥಮಿಕ ಶಾಲೆಗೆ ಆರ್ಥಿಕ ಸಹಾಯ ಮಾಡಿದ ಮಂಚನಬಲೆ MV ಸದಾಶಿವ

**ಚಿಕ್ಕಬಳ್ಳಾಪುರ:** ತಾಲೂಕಿನ ಪುಟ್ಟತಿಮ್ಮನಹಳ್ಳಿ ಸರ್ಕಾರಿ ಕಿರಿಯ ಪ್ರಾಥಮಿಕ ಶಾಲೆಗೆ ಮಂಚನಬಲೆ ಯುವ ಸಮಾಜ ಸೇವಕರಾದ ಸದಾಶಿವ ಅವರು ವಿದ್ಯಾರ್ಥಿಗಳ ವಿದ್ಯಾಭ್ಯಾಸ ಸಲಕರಣೆಕ್ಕೆ ಆರ್ಥಿಕ ಧನಸಹಾಯ ಮಾಡಿದರು ಶಿಕ್ಷಣವೇ ಸಕಲವೂ ಆಗಿರುವ ಇಂದಿನ ಆಧುನಿಕ ಯುಗದಲ್ಲಿ ಮಂಚನಬಲೆಯ ಸಮಾಜ ಸೇವಕರಾದ ಡಾ. ಎಂ. ವಿ ಸದಾಶಿವ ಅವರು ಇದೀಗ ಪುಟ್ಟತಿಮ್ಮನಹಳ್ಳಿ ಶಾಲೆಗೆ ಆರ್ಥಿಕ 5000 ಸಹಾಯ ಮಾಡುವ ಮೂಲಕ ಮತ್ತೊಮ್ಮೆ ಶಿಕ್ಷಣಕ್ಕಾಗಿ ಸರ್ವವೂ ನೀಡುವ ತಮ್ಮ ಸೇವೆ ಮುಂದುವರಿಸಿದ್ದಾರೆ ಮುಖ್ಯ ಶಿಕ್ಷಕರಾದ ಗೋವಿಂದರಾಜು ಅವರಿಗೆ ಶಾಲೆಯ ಪರವಾಗಿ ನಗದು ನೀಡಲಾಯಿತು ಈ ಸಂದರ್ಭದಲ್ಲಿ ಮಾತನಾಡಿದ ಶಿಕ್ಷಕರಾದ ಗೋವಿಂದ್ ರಾಜ್ ಸದಾಶಿವ ಅವರ ಸೇವೆಯನ್ನು ಕೊಂಡಾಡಿದರು ಇವರ ಸೇವೆ ಹೀಗೆ ಮುಂದುವರೆಯಲಿ ಎಂದು ಆಶಿಸಿದರು ಈ ಸಂದರ್ಭದಲ್ಲಿ ಶಿಕ್ಷಕರಾದ ಹಾಗೂ ಶರಣ್



ದೊಡ್ಡತಮ್ಮನಳ್ಳಿ ಉಪಸ್ಥಿತರಿದ್ದರು

## ಶ್ರೀಮತಿ ಸರಸ್ವತಿ ದಾಸಪ್ಪ ಶೆಣೈ ಪ್ರತಿಷ್ಠಾನದಿಂದ "ಸರಸ್ವತಿ ಕನ್ನಡ ರತ್ನ" ರಾಜ್ಯ ಪ್ರಶಸ್ತಿಗೆ ಆಹ್ವಾನ

**ದಾವಣಗೆರೆ:** ಕಲಾಕುಂಚ ಸಾಂಸ್ಕೃತಿಕ ಸಂಸ್ಥೆ ಮತ್ತು ಶ್ರೀಮತಿ ಸರಸ್ವತಿ ದಾಸಪ್ಪ ಶೆಣೈ ಪ್ರತಿಷ್ಠಾನದ ಸಂಯುಕ್ತಾಶ್ರಯದಲ್ಲಿ ಪ್ರತೀ ವರ್ಷದಂತೆ ಈ ವರ್ಷವೂ ವಿವಿಧ ಕ್ಷೇತ್ರಗಳ್ಲಿ ಸಾಧನೆ ಮಾಡುತ್ತಿರುವ ಹಿರಿಯರಿಗೆ, ಕಿರಿಯರಿಗೆ "ಸರಸ್ವತಿ ಕನ್ನಡ ರತ್ನ" ರಾಜ್ಯ ಪ್ರಶಸ್ತಿ ಪ್ರದಾನಕ್ಕೆ ಆಹ್ವಾನಿಸಲಾಗಿದೆ ಎಂದು ಸಂಸ್ಥೆಗಳ ಸಂಸ್ಥಾಪಕರಾದ ಸಾಲಿಗ್ರಾಮ ಗಣೇಶ್ ಶೆಣೈ ತಿಳಿಸಿದ್ದಾರೆ.

ಕಲೆ, ಸಾಹಿತ್ಯ, ಸಂಗೀತ, ಶಿಕ್ಷಣ, ರಂಗಭೂಮಿ, ಜಾನಪದಕಲೆ, ಸಮಾಜಸೇವೆ, ಸಾಂಸ್ಕೃತಿಕ ಚಟುವಟಿಕೆ ಮುಂತಾದ ಕ್ಷೇತ್ರಗಳಲ್ಲಿ ಸಾಧನೆ ಮಾಡಿದವರು 31–1–2026 ರೊಳಗೆ ಈ ಕೆಳಗಿನ ಸನೀಹವಾಣಿಗೆ ಸಂಪರ್ಕಿಸಬಹುದು ಎಂದು ಕಲಾಕುಂಚದ ಪ್ರಧಾನ ಕಾರ್ಯದರ್ಶಿ ಕೆ.ಸಿ. ಉಮೇಶ್ ಪ್ರಕಟಿಸಿದ್ದಾರೆ.

ಸನ್ಮಾನಕ್ಕೆ ಆಯ್ಕೆ ಆದವರ ಸಾಧಕರನ್ನು ಸಮಾರಂಭದ ಪ್ರತ್ಯೇಕ ವೇದಿಕೆಯಲ್ಲಿ ಕಲಾಕುಂಚದ ಮುತ್ತೈದೆಯರು ಕನ್ನಡ ತಿಲಕವಿಟ್ಟು, ಕನ್ನಡ ಕಂಕಣ ಕಟ್ಟಿ, ಕನ್ನಡಾರತಿ ಬೆಳಗಿ, ಪುಷ್ಪ ವೃಷ್ಟಿಯೊಂದಿಗೆ ಗೌರವಿಸುತ್ತಾರೆ. ನಂತರ ಅವರದೇ ಭಾವಚಿತ್ರವಿರುವ ಸನ್ಮಾನ ಪತ್ರ ಮುದ್ರಿಸಿ, ಫ್ರೇಂ ಮಾಡಿ, ವೇದಿಕೆಯ ಸಿಂಹಾಸನದ ಮೇಲೆ ಕೂರಿಸಿ, ಕನ್ನಡ ಪೇಟಾದೊಂದಿಗೆ ಹಾರ, ಶಾಲು ಕನ್ನಡ ತಾಯಿ ಭುವನೇಶ್ವರಿಯ ಸ್ಮರಣಿಕೆ ಚಿನ್ನದ ಲೇಪನದ ಪದಕ ಕೊರಳಿಗೆ ಹಾಕಿ ಗೌರವಿಸುತ್ತಾರೆ ಹೆಚ್ಚಿನ ಮಾಹಿತಿಗೆ 9538732777 ಈ ಸನೀಹವಾಣಿಗೆ ಸಂಪರ್ಕಿಸಬಹುದು.

# ಒಗ್ಗಟ್ಟು–ವಿಶ್ವಾಸ ಕಾಯ್ದುಕೊಂಡರೆ ಗುರಿ ಸಾಧನೆ

## ಪತ್ರಕರ್ತರ ಸಮಸ್ಯೆಗಳ ಬಗ್ಗೆ ಅಧಿವೇಶನದಲ್ಲಿ ದನಿ ಎತ್ತುವೆ

**ಹಾಸನ:** ಪತ್ರಕರ್ತರು ಹಾಗೂ ಸಂಘದಲ್ಲಿ ಒಗ್ಗಟ್ಟು ಇರಬೇಕು. ಹಾಗಿದ್ದರೆ ಮಾತ್ರ ಎಲ್ಲ ರೀತಿಯ ಸವಲತ್ತು ಮತ್ತು ಏನಾದರೂ ಗುರಿ ಸಾಧಿಸಲು ಸಾಧ್ಯ ಎಂದು ಮೈಸೂರಿನ ಹಿರಿಯ ಪತ್ರಕರ್ತ ಹಾಗೂ ವಿಧಾನ ಪರಿಷತ್ ಸದಸ್ಯ ಕೆ.ಶಿವಕುಮಾರ್ ಹೇಳಿದರು.

ನಗರದ ಕೈಗಾರಿಕಾ ಪ್ರದೇಶದಲ್ಲಿರುವ ಪವನಪುತ್ರ ಸಭಾಂಗಣದಲ್ಲಿ ಭಾನುವಾರ ನಡೆದ ಹಾಸನ ಜಿಲ್ಲಾ ಕಾರ್ಯ ನಿರತ ಪತ್ರಕರ್ತರ ಸಂಘದ 2025–28ನೇ ಸಾಲಿನ ನೂತನ ಅಧ್ಯಕ್ಷರು ಹಾಗೂ ಪದಾಧಿಕಾರಿಗಳ ಪದಗ್ರಹಣ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ರಾಜ್ಯಾದ್ಯಂತ ಪತ್ರಕರ್ತರ ಸಮಸ್ಯೆಗಳು ಸಾಕಷ್ಟಿವೆ. ಅವುಗಳ ನಿವಾರಣೆಗೆ ವ್ಯತ್ಯಾಸ ಬಿಟ್ಟು ಒಗ್ಗಟ್ಟು, ವಿಶ್ವಾಸ ಕಾಯ್ದುಕೊಳ್ಳುವುದು ಮುಖ್ಯ, ಇಲ್ಲದಿದ್ದರೆ ಪತ್ರಕರ್ತರ ಸಂಘಗಳೂ ಟ್ರೇಡ್ ಯೂನಿಯನ್‌ಗಳಂತೆ ಆಗಲಿವೆ ಎಂದು ಸಲಹೆ ನೀಡಿದರು.

ಗ್ರಾಮೀಣ ಪತ್ರಕರ್ತರಿಗೆ ಬಸ್‌ಪಾಸ್, ಪಿಂಚಿಣಿ ಇತ್ಯಾದಿ ಸೌಲಭ್ಯ ರಾಜ್ಯದೆಲ್ಲೆಡೆ ಇದೆ. ಈ ಬಗ್ಗೆ ಅಧಿವೇಶನದಲ್ಲಿ ಮಾತನಾಡಲು ಅವಕಾಶ ಕೇಳಿದ್ದೇನೆ. ಸಿಕ್ಕರೆ ಖಂಡಿತಾ ಸರ್ಕಾರದ ಗಮನಕ್ಕೆ ತರುವೆ ಎಂದು ಭರವಸೆ ನೀಡಿದರು.



ರಾಜ್ಯ ಸಂಘ ಏನೇ ತೀರ್ಮಾನ ಕೈಗೊಂಡರೂ ಜಿಲ್ಲಾ ಸಂಘಗಳು ಅದನ್ನು ಪಾಲಿಸಬೇಕು. ಒಗ್ಗೂಡಿ ನಡೆಯಿರಿ, ಸಮಸ್ಯೆ ಬಗೆಹರಿಸಿಕೊಳ್ಳಬಹುದು. ಇಲ್ಲ ಅಂದ್ರೆ ಎಲ್ಲವೂ ಹಾಗೇ ಉಳಿಯಲಿವೆ ಎಂದರು. ಅಧಿಕಾರಿಗಳು ಪತ್ರಕರ್ತರಿಗೆ ಏಕೆ ಪೆನ್‌ಶೆನ್ ಕೊಡಬೇಕು, ಅವರೇನು ಮನೆಯಿಂದ ತಂದು ಕೊಡುವುದಿಲ್ಲ. ಸ್ವಾತಂತ್ರ್ಯ ಪೂರ್ವದಿಂದಲೂ ದೇಶ ಕಟ್ಟುವಲ್ಲಿ ಪತ್ರಕರ್ತರ ಪಾತ್ರವೂ ಇದೆ ಎಂದು ನುಡಿದರು.

ಎಲ್ಲ ಪತ್ರಕರ್ತರು ಒಂದು ಸ್ವಂತ ಸೂರು ಹೊಂದಿಸಿಕೊಳ್ಳಿ, ಮಕ್ಕಳನ್ನು ಚೆನ್ನಾಗಿ ಓದಿಸಿ ಎಂದು ಸಲಹೆ ನೀಡಿದ

ಸಂಘಟನೆ ಸಾಧ್ಯವಾಗಬೇಕಾದರೆ ಪತ್ರಕರ್ತರ ಚುನಾವಣೆಗಳು, ಅವಿರೋಧವಾಗಿ ಆಯ್ಕೆಯಾಗಬೇಕು. ಅಧ್ವಾನ ಆಗುವುದು ಬೇಡ ಎಂದು ಕಿವಿ ಮಾತು ಹೇಳಿದರು.

ಸೊರಗಿದ ಕೆಯೂಡಬ್ಲ್ಯೂಜೆಗೆ ಶಿವಾನಂದ ತಗಡೂರು ಪುನರುಜ್ಜೀವನ ನೀಡಿದ್ದಾರೆ. ಕ್ಷೇಮನಿಧಿ ಸ್ಥಾಪಿಸಿ ಪತ್ರಕರ್ತರಿಗೆ ನೆರವು ನೀಡುತ್ತಿರುವುದು ಸ್ವಾಗತಾರ್ಹ, ಮುಂದೆ ಸಂಘಕ್ಕೆ ಇನ್ನಷ್ಟು ಚೈತನ್ಯ ತುಂಬಿ, ಕೆಂಚೇಗೌಡರೂ ಒಳ್ಳೇ ಕೆಲಸ ಮಾಡಿ, ಸಂಘ ನಡೆಸೋದು ಸುಲಭ ಅಲ್ಲ ಎಂದು ಗೆದ್ದವರಿಗೆ ಶುಭ ಹಾರೈಸಿದರು.

ಇದಕ್ಕೂ ಮುನ್ನ ಆಶಯ ನುಡಿಗಳನ್ನಾಡಿದ ರಾಜ್ಯ ಉಪಾಧ್ಯಕ್ಷ ಹೆಚ್.ಬಿ.ಮದನಗೌಡ, ಶಿವಕುಮಾರ್ ಅವರು ಎಂಎಲ್‌ಸಿ ಆಗಿರುವುದು ನಾಡಿನ ಪತ್ರಕರ್ತರಿಗೆ ಸಂದ ಗೌರವ, ಪತ್ರಕರ್ತರಾದ ನಾವೆಲ್ಲ ಒಮ್ಮತದಿಂದ ಕೆಲಸ ಮಾಡೋಣ ಎಂದರು.

ಕೆಯೂಡಬ್ಲ್ಯೂಜೆ ಪ್ರಧಾನ ಕಾರ್ಯದರ್ಶಿ ಜಿ.ಸಿ.ಲೋಕೇಶ್ ಮಾತನಾಡಿದರು.

ಕಾರ್ಯಕ್ರಮದಲ್ಲಿ ಕೆಯೂಡಬ್ಲ್ಯೂಜೆ ಉಪಾಧ್ಯಕ್ಷರಾದ ಮತ್ತಿಕೆರೆ ಜಯರಾಮ್, ಅಜ್ಜಮಾಡು ರಮೇಶ್ ಕುಟ್ಟಪ್ಪ, ಕಾರ್ಯದರ್ಶಿಗಳಾದ ಸೋಮಶೇಖರ ಕೆರಗೋಡು,ಪುಂಡಲೀಕ ಭೀ.ಬಾಳೋಜಿ, ನಿಂಗಪ್ಪ ಚಾವಡಿ, ಖಜಾಂಚಿ ವಾಸುದೇವ ಹೊಳ್ಳ, ಜಿಲ್ಲಾ ಸಂಘದ ಉಪಾಧ್ಯಕ್ಷರಾದ ಎನ್.ನಂಜುಂಡೇಗೌಡ, ಜಿ.ಪ್ರಕಾಶ್,

ಕಾ೦ು್ರದ್ಶಿ್ಗ್ಳಾದ್ ಬಿ.ಆರ್.ಬೊಮ್ಮೇಗೌಡ, ಕೆ.ಎಂ.ಹರೀಶ್, ಕುಶ್ವಂತ್, ಖಚಾಂಚಿ ಪ್ರಕಾಶ್ ಬೆಳವಾಡಿ, ಮಾಜಿ ಅಧ್ಯಕ್ಷರಾದ ರವಿ ನಾಕಲಗೂಡು, ಬಿ.ಆರ್.ಉದ್೦ು್ಕ್ುವ್ುಾರ್, ಬಾಳ್ಳುಗೋಪಾಲ್, ಚೌಡುವಳ್ಳಿ ಜಗದೀಶ್, ಹಿರಿಯ ಪತ್ರಕರ್ತ ಉದಯರವಿ, ಜಿಲ್ಲಾ ಕಾರ್ಯಕಾರಿ ಸಮಿತಿ ಸದಸ್ಯರು ಇದ್ದರು.

ಇದೇ ವೇಳೆ ರಾಜ್ಯ ಹಾಗೂ ಜಿಲ್ಲಾ ಚುನಾವಣಾಧಿಕಾರಿಗಳಾಗಿ ಯಶಸ್ವಿಯಾಗಿ ಕರ್ತವ್ಯ ನಿರ್ವಹಿಸಿದ ರವಿಕುಮಾರ್ ಎನ್. ಟೆಲೆಕ್ಸ್ ಹಾಗೂ ಡಿ.ಜಿ.ರಾಜ್‌ಗೋಪಾಲ್ ಅವರನ್ನು ಸನ್ಮಾನಿಸಿ ಗೌರವಿಸಲಾಯಿತು.

ರಾಜ್ಯ ಕಾರ್ಯಕಾರಿ ಸಮಿತಿ ಸದಸ್ಯ ಕೆಪಿಎಸ್ ಪ್ರಮೋದ್ ಸ್ವಾಗತಿಸಿದರು. ಪ್ರಧಾನ ಕಾರ್ಯದರ್ಶಿ ಕೆ.ಜಿ.ಸುರೇಶ್ ವಂದಿಸಿದರು.

## ಸಮರ್ಪಣಾ ಟ್ರಸ್ಟ್‌ನಿಂದ ವಿದ್ಯಾನಿಧಿ ಯೋಜನೆ

# ಧ್ಯಾನಸ್ಥ ಮನಸ್ಥಿತಿ ಅಧ್ಯಯನ: ಗಿರಿಜಾಶಂಕರ್ ಕರೆ




**ಚಿಕ್ಕಮಗಳೂರು :** ಧ್ಯಾನಸ್ಥ ಮನಸ್ಥಿತಿಯ ಅಧ್ಯಯನ ಮೇಲಸ್ತರಕ್ಕೆ ಕೊಂಡೊಯ್ಯುತ್ತದೆ ಎಂದು ಹಿರಿಯಪತ್ರಕರ್ತ ಸ.ಗಿರಿಜಾಶಂಕರ್ ಅಭಿಪ್ರಾಯಿಸಿದರು.

ನಗರದ ಸಮರ್ಪಣಾ ಟ್ರಸ್ಟ್ ರಾಷ್ಟ್ರೀಯ ಸ್ವಯಂಸೇವಕ ಸಂಘದ ಶತಾಬ್ದ ಅಂಗವಾಗಿ ಆರಂಭಿಸಿರುವ ವಿದ್ಯಾನಿಧಿ ಯೋಜನೆಯ ಲೋಕಾರ್ಪಣೆ ಸಮಾರಂಭದಲ್ಲಿ ಇಂದು ಅವರು ಮುಖ್ಯಅತಿಥಿಗಳಾಗಿ ಮಾತನಾಡಿದರು.

ಜ್ಞಾನಕ್ಕಿಂತ ಮಿಗಿಲಾದದ್ದು ಏನೂ ಇಲ್ಲ. ಜ್ಞಾನವನ್ನು ಯಾರೂ ಯಾವುದೇ ಸಂದರ್ಭದಲ್ಲೂ ಕಿತ್ತುಕೊಳ್ಳಲು ಸಾಧ್ಯವಿಲ್ಲ. ಬುದ್ಧಿವಂತಿಕೆಯನ್ನು ಹತ್ತಿಕ್ಕಲಾಗದು, ಅದು ಇನ್ನೊಂದುಕಡೆ ತಲೆಯೆತ್ತುತ್ತದೆ. ನೊಂದು, ಬೆಂದು, ಮಾಗಿದಾಗ ಅರ್ಥಪೂರ್ಣ ಬದುಕು ನಮ್ಮದಾಗುತ್ತದೆ. ಅಕ್ಷರಜ್ಞಾನ ಮತ್ತು ಬುದ್ಧಿವಂತಿಕೆ ಸಮಾಜದಲ್ಲಿ ಗೌರವ–ಸ್ಥಾನಮಾನ ತಂದು ಕೊಡುತ್ತದೆ.

ಬಲವಾದ ಇಚ್ಛಾಶಕ್ತಿ, ದೃಢವಾದ ಮನಸ್ಥಿತಿ ಮತ್ತು ಸಮರ್ಪಣಾ ಮನೋಭಾವ ಬೆಳಸಿಕೊಂಡರೆ ವಿದ್ಯಾರ್ಥಿಗಳು ಉನ್ನತ ಸಾಧನೆ ಮಾಡಲು ಸಾಧ್ಯ. ಯಾವುದೂ ಅಸಾಧ್ಯವಲ್ಲ.

ಓದುವ ಹಂತದಲ್ಲೆ ಮೂರೂ ಗುಣಗಳನ್ನು ಅಳವಡಿಸಿಕೊಳ್ಳುವಂತಾದರೆ ಬುದ್ಧಿವಂತ ಸಮಾಜ ನಮ್ಮದಾಗುತ್ತದೆ. ಪರಿಶ್ರಮ, ಆಲೋಚನೆ, ಸಮಾಜಪರ ನಿಷ್ಠೆ ಇವೆಲ್ಲದಕ್ಕಿಂತ ಮಿಗಿಲಾಗಿ ತ್ಯಾಗ ಮನೋಭಾವ ನಮ್ಮದಾಗಬೇಕು ಎಂದ ಗಿರಿಜಾಶಂಕರ್, ಸಮಾಜದ ಬಗ್ಗೆ ಕಳಕಳಿ ಆಲೋಚನೆ ಹೊಂದಿದ್ದರೆ ಏನಾದರೂ ಕೊಡುಗೆ ಕೊಡಬೇಕೆಂಬ ಆಶಯ ನಮ್ಮದಾಗುತ್ತದೆ ಎಂದರು.

ಎಐಟಿ ಉಪನ್ಯಾಸಕ ಡಾ.ಗೌತಮ್ ಸ್ವಾಗತಿಸಿ, ನಿರೂಪಿಸಿದ್ದು, ಮಹಿಳಾಶ್ರಮಶಾಲಾ ಮುಖ್ಯಶಿಕ್ಷಕ ಪ್ರವೀಣ ಕುಮಾರ್ ವಂದಿಸಿದರು. ಸಂಘದ ಹಾಸನ ವಿಭಾಗೀಯ ಪ್ರಚಾರಕ ಮಂಜುನಾಥ್, ಜಿಲ್ಲಾ ಸಂಘಚಾಲಕ ಘನಶ್ಯಾಂಆಳ್ವ, ಜಿಲ್ಲಾ ಸಹಕಾರ್ಯವಾಹ ದಿನೇಶ್, ವೇಣುಗೋಪಾಲ, ಅಭಾಸಾಪ ವಿಭಾಗೀಯ ಸಂಯೋಜಕ ಪ್ರಭುಲಿಂಗಶಾಸ್ತ್ರಿ, ಟ್ರಸ್ಟಿ ವೇಣುಗೋಪಾಲ, ನಾಗೇಶ್, ರುದ್ರೇಶಕಡೂರ್, ರಮೇಶ್, ರಾಜಶಂಕರ್ ಮತ್ತಿತರರು ವಿದ್ಯಾರ್ಥಿಗಳಿಗೆ ನೆರವು ವಿತರಿಸಿದರು.

# ರಾಮಕೃಷ್ಣ ಗುರುಕುಲದಲ್ಲಿ ಜ್ಞಾನ, ವಿಜ್ಞಾನ, ಸೃಜನಶೀಲ ದಿನಾಚರಣೆ

**ಶಿವಮೊಗ್ಗ:** ವಿದ್ಯಾರ್ಥಿಗೆ ಶಿಕ್ಷಣ ಪಡೆಯುವುದು ಮಾತ್ರ ಮುಖ್ಯವಲ್ಲ ಅದರ ಜೊತೆ ಜ್ಞಾನ ವಿಜ್ಞಾನ ಹಾಗೂ ಸಂಸ್ಕಾರ ಅತಿ ಮುಖ್ಯ ಎಂದು ಶಿವಮೊಗ್ಗದ ತೃಪ್ತಿ ಕ್ಲಿನಿಕ್ ನ ಕಿಡ್ನಿ ಹಾಗೂ ಮೂತ್ರ ಕೋಶ ಶಸ್ತ್ರ ಚಿಕಿತ್ಸಕರಾದ ಡಾ. ಎಸ್. ಚಂದ್ರಶೇಖರ್ ತಿಳಿಸಿದರು.

ಅವರು ಶಿವಮೊಗ್ಗ ಅನುಪಿನಕಟ್ಟೆಯಲ್ಲಿರುವ ಶ್ರೀ ರಾಮಕೃಷ್ಣ ಗುರುಕುಲ ಆಂಗ್ಲ ಮಾಧ್ಯಮ ವಸತಿ ಶಾಲೆಯಲ್ಲಿ ಆಯೋಜಿಸಿದ್ದ ಜ್ಞಾನ ವಿಜ್ಞಾನ ಹಾಗೂ ಸೃಜನಶೀಲ ದಿನಾಚರಣೆ ಯನ್ನು ಉದ್ಘಾಟಿಸಿ ಮಾತನಾಡಿದರು.

ಆಯೋಜಿಸಲಾಗಿದೆ.

ಶಿಕ್ಷಣದ ಜೊತೆ ಜೊತೆಗೆ ಜ್ಞಾನ ಮತ್ತು ಸಂಸ್ಕಾರದ ಪರಿಪಾಠವನ್ನು ಶಿಕ್ಷಕರು ಹಾಗೂ ಪೋಷಕರು ನೀಡುವುದು ಅತ್ಯಗತ್ಯ ಈ ಮೂರರಿಂದ ಆ ಮಗು ಉನ್ನತ ಮಟ್ಟದಲ್ಲಿ

ಗುರುತಿಸಿಕೊಂಡು ಬೆಳೆದು ಸಾಧನೆಯ ತೋರಲು ಸಾಧ್ಯ ಎಂದರು ನಯ ವಿನಯ ಸಭ್ಯತೆ ಹಾಗೂ ಸಂಸ್ಕೃತಿ ನಮ್ಮ ಪರಿಪಾಠವಾಗಬೇಕು ಎಲ್ಲದನ್ನು ತಿಳಿದುಕೊಳ್ಳಲು ಕೇಳುವ ಮನೋಭಾವ ಮನೋಸ್ಥಿತಿ ನಮ್ಮಲ್ಲಿ ಬೆಳೆಯಬೇಕು ಎಂದು



ಮಕ್ಕಳಿಗೆ ಕಿವಿಮಾತು ಹೇಳಿದರು

ಸಂಸ್ಥೆಯ ಕಾರ್ಯದರ್ಶಿ ಶೋಭಾ ವೆಂಕಟರಮಣ ಅವರು ಪ್ರಾಸ್ತಾವಿಕವಾಗಿ ಮಾತನಾಡುತ್ತಾ, ಮಕ್ಕಳ ಬೇಕು– ಬೇಡಗಳನ್ನು ನಾವು ಅವಲೋಕಿಸಿ ಅವರನ್ನು ಕಲಿಕೆಯತ್ತ ಹಾಗೂ ಸೃಜನಶೀಲತೆಯತ್ತ ಬೆಳೆಸಿದಾಗ ಅವರ ಜೀವನ ಸಮರ್ಪಕವಾಗುತ್ತದೆ ಹಾಗೂ ಹೊಸ ಸಾಧನೆಗೆ ದಾರಿದೀಪವಾಗುತ್ತದೆ.

ಈ ನಿಟ್ಟಿನಲ್ಲಿ ರಾಮಕೃಷ್ಣ ವಿದ್ಯಾಸಂಸ್ಥೆ ಆರಂಭದಿಂದಲೂ ಎಲ್ಲಾ ಶಾಲೆಗಳಲ್ಲಿ ಪ್ರತಿವರ್ಷ ಇಂತಹ ಕಾರ್ಯಕ್ರಮವನ್ನು ಆಯೋಜಿಸುತ್ತಾ ಬಂದಿದೆ ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಸಂಚಾಲಕರಾದ ಎಚ್. ಕೆ. ಅರುಣ್ ಹಾಗೂ ಕೆ.ಡಿ. ಶರತ್ ಮತ್ತು ಮುಖ್ಯ ಶಿಕ್ಷಕರಾದ ವೆಂಕಟೇಶ್, ತೀರ್ಥೇಶ್, ಗಜೇಂದ್ರನಾಥ್ ಉಪಸ್ಥಿತರಿದ್ದರು. ಕಾರ್ಯಕ್ರಮದಲ್ಲಿ ಪಠ್ಯ ವಿಷಯಗಳಿಗೆ ಸಂಬಂಧಪಟ್ಟಂತೆ ವಿಜ್ಞಾನ, ಗಣಿತ, ಸಮಾಜ ಹಾಗೂ ಭಾಷೆಯ ಮಾಡಲ್ ಪ್ರದರ್ಶನಗಳೊಂದಿಗೆ ಚಿತ್ರಕಲೆ, ಅಕ್ಷರ ಬರಹ ಸೇರಿದಂತೆ 2100 ಕ್ಕೂ ಹೆಚ್ಚು ಮಾಡೆಲ್ ಗಳು ಅತ್ಯಂತ ವಿಶೇಷವಾಗಿದ್ದವು.

# ಮೂವರು ಶಂಕಿತ ಉಗ್ರರ ಬಂಧನ

**ನವದೆಹಲಿ:** ಪಾಕಿಸ್ತಾನದ ಐಎಸ್ಐ ಜತೆ ಸಂಪರ್ಕ ಹೊಂದಿರುವ ಮೂವರು ಶಂಕಿತ

ಭಯೋತ್ಪಾದಕರನ್ನು ದೆಹಲಿ ಪೊಲೀಸರು ಬಂಧಿಸಿದ್ದಾರೆ. ಇದರೊಂದಿಗೆ ದೆಹಲಿ ಪೊಲೀಸರು ಒಂದು ತಿಂಗಳಲ್ಲಿ ಎರಡನೇ ಸಲ ಪಾಕ್ ಮೂಲದ ಭಯೋತ್ಪಾದಕ ಮಾಡ್ಯೂಲನ್ನು ಭೇದಿಸಿದಂತಾಗಿದೆ. ದೆಹಲಿ ಪೊಲೀಸ್ ವಿಶೇಷ ದಳ ಈ ಕಾರ್ಯಾಚರಣೆ ನಡೆಸಿದ್ದು, ಐಎಸ್ಐ ಉಗ್ರ ಷೆಹಜಾದ್ ಭಟ್ಟಿಗೆ ಸಂಪರ್ಕಿತ ಶಂಕಿತರನ್ನು ಬಂಧಿಸಿದ್ದಾರೆ. ಪಂಜಾಬ್‌ನ ಹರ್ಗುಣ್‌ಪ್ರೀತ್ ಸಿಂಗ್, ಮಧ್ಯಪ್ರದೇಶದ ವಿಕಾಸ್ ಪ್ರಜಾಪತಿ, ಉತ್ತರಪ್ರದೇಶದ ಅರಿಫ್ ಬಂಧಿತರು.

ಪಾಕ್ ಗುಪ್ತಚರ ಸಂಸ್ಥೆ ಜತೆ ಕೆಲಸ ಮಾಡುತ್ತಿರುವ ಗ್ಯಾಂಗ್‌ಸ್ಟರ್ ಪೆಹಜಾದ್ ಭಟ್ಟಿ ಜೊತೆ ಇವರ ಸಂಪರ್ಕವಿತ್ತು ಎಂದು ಎಸಿಪಿ ಪ್ರಮೋದ್ ಕುಮಾರ್ ತಿಳಿಸಿದ್ದಾರೆ

ನ.25ರಂದು ಗುರ್ದಾಸ್‌ಪುರ ಸಿಟಿ ಪೊಲೀಸ್ ಠಾಣೆ ಎದುರೇ ಇವರು ಹ್ಯಾಂಡ್ ಗ್ರನೇಡ್ ಎಸೆದಿದ್ದರು. ಅಲ್ಲದೆ, ವಿವಿಧ ಸ್ಥಳಗಳ ವಿವರ ಕಲೆ ಹಾಕಿರುವ ಇವರು ಇನ್ನಷ್ಟು ಕಡೆ ಹ್ಯಾಂಡ್ ಗ್ರನೇಡ್ ಎಸೆದು ದಾಳಿ ನಡೆಸುವ ಯೋಜನೆ ಹಾಕಿಕೊಂಡಿದ್ದರು ಎಂದು ಎಸಿಪಿ ತಿಳಿಸಿದ್ದಾರೆ.

# ನಿಧನ ಸುದ್ದಿಗಳು

### ಶ್ರೀಮತಿ ಸರೋಜಮ್ಮ ಮುಂಡರಗಿ ನಿಧನ

**ದಾವಣಗೆರೆ :** ಸಿಟಿ, ಎಂಸಿಸಿ 'ಬಿ' ಬ್ಲಾಕ್, ಹಳೆ ಆರ್.ಟಿ.ಓ. ಕಚೇರಿ ಎದುರು ವಾಸಿ, ಶ್ರೀ ಗುಣಸಾಗರ ಮುಂಡರಗಿ ಇವರ ಧರ್ಮಪತ್ನಿ ಶ್ರೀಮತಿ ಸರೋಜಮ್ಮ ಮುಂಡರಗಿ (89) – ದಿನಾಂಕ " . 30–11–2025 ರಂದು ಭಾನುವಾರ ಸಂಜೆ 4:50 ಕ್ಕೆ ನಿಧನರಾದರು. ಪತಿ, ಇಬ್ಬರು ಪುತ್ರರು ಹಾಗೂ ಅಪಾರ ಬಂಧು–ಬಳಗವನ್ನು ಅಗಲಿರುವ ಮೃತರ 2. 1–12–2025 0 ಸೋಮವಾರ ಬೆಳಿಗ್ಗೆ 11 ಗಂಟೆಗೆ ಶಾಮನೂರು ರುದ್ರ ಭೂಮಿಯಲ್ಲಿ ನೆರವೇರಿಸಲಾಯಿತು.

### ಕೋಡಿಹಳ್ಳಿ ಗ್ರಾಮದ ಶಿವಮೂರ್ತಿ ನಿಧನ

**ದಾವಣಗೆರೆ :** ತಾಲ್ಲೂಕು ಕೋಡಿಹಳ್ಳಿ ಗ್ರಾಮದ ದಿ. ಸಣ್ಣ ಚೌಡಪ್ಪನವರ ಹಿರಿಯ ಮಗ ಶಿವಮೂರ್ತಿ (77) ಇವರು ದಿನಾಂಕ: 30.11.20250 ಭಾನುವಾರ ಸಂಜೆ ಸುಮಾರು 6ಕ್ಕೆ ನಿಧನರಾದರು. ಪತ್ನಿ, ಇಬ್ಬರು ಪುತ್ರರು, ಸಹೋದರರು, ಅಳಿಯಂದಿರು, ಸೊಸೆಯಂದಿರು, ಮೊಮ್ಮಕ್ಕಳು ಹಾಗೂ ಅಪಾರ ಬಂಧು ಬಳಗವನ್ನು ಅಗಲಿರುವ ಮೃತರ ಅಂತ್ಯಕ್ರಿಯೆಯು ದಿನಾಂಕ 01.012.2025ರ ಸೋಮವಾರ ಮಧ್ಯಾಹ್ನ 12ಕ್ಕೆ ಕಕ್ಕರಗೊಳ್ಳ, ಗ್ರಾಮದ ಸಮೀಪ ಇರುವ ಕೋಡಿಹಳ್ಳಿ ಗ್ರಾಮದ ರುದ್ರಭೂಮಿಯಲ್ಲಿ ನೆರವೇರಿದೆ.

### ಧರ್ಮಾ ಸಾ ಲದ್ವಾ ನಿಧನ

**ಹರಿಹರ:** ನಗರದ ಕೆ.ಎಚ್.ಬಿ. ಕಾಲನಿ ನಿವಾಸಿ,ಹಿರಿಯ ಆರ್ ಟಿಒ ಏಜೆಂಟ್ ಧರ್ಮಾ ಸಾ ಲದ್ವಾ (80) ಭಾನುವಾರ ನಿಧನ ರಾದರು. ಮೃತರಿಗೆ ಪತ್ನಿ, ಇಬ್ಬರು ಪುತ್ರರು, ಮೂವರು ಪುತ್ರಿಯರು ಇದ್ದಾರೆ. ನಗರದ ಡಾಲ್ಮೀಯಾ ವಿಶ್ರಾಮ್ ಘಾಟ್‌ನಲ್ಲಿ ಅಂತ್ಯಕ್ರಿಯೆ ನಡೆಯಿತು.

## ಮಾನ್ಯ ಸಿವಿಲ್ ಜಡ್ಜ್ ಮತ್ತು ಜೆ.ಎಂ.ಎಫ್.ಸಿ. ನ್ಯಾಯಾಲಯ ಜಗಳೂರು

### ಅಸಲು ದಾವ ಸಂಖ್ಯೆ:161/2025

**ಅರ್ಜಿದಾರರು:** 1)ಶ್ರೀ ಸಂಜಯ್ ಕೆ ತಂದೆ ಕೃಷ್ಣಮೂರ್ತಿ ಆರ್ ವಯಸ್ಸು ಸುಮಾರು 36 ವರ್ಷ ಕೆಲಸ ವ್ಯವಸಾಯ ವಾಸ:1ನೇ ಮುಖ್ಯ,2ನೇತಿರುವು ನಾಲಂದ ಕಾಲೇಜ್ ಹತ್ತಿರ ಗಂಗಾಂಭೀಕ ಬಡಾವಣೆ ಜಗಳೂರು ಟೌನ್ ಜಗಳೂರು ತಾಲ್ಲೂಕು ದಾವಣಗೆರೆ ಜಿಲ್ಲೆ

### ವಿರುದ್ಧ

**ಎದುರುದಾರರು :**1) ಶ್ರೀ ಕೃಷ್ಣಮೂರ್ತಿ ತಂದೆ ರಾಮಚಂದ್ರಪ್ಪ ವಯಸ್ಸು ಸುಮಾರು 72 ವರ್ಷ ನಿವೃತ್ತ ನೌಕರರು ವಾಸ: 1ನೇ ಮುಖ್ಯ. 2ನೇ ತಿರುವು ನಾಲಂದ ಕಾಲೇಜ್ ಹತ್ತಿರ ಗಂಗಾಂಭೀಕ ಬಡಾವಣೆ ಜಗಳೂರು ಟೌನ್. ಜಗಳೂರು ತಾಲ್ಲೂಕು. ದಾವಣಗೆರೆ ಜಿಲ್ಲೆ2) ಶ್ರೀ ಸಂತೋಷ.ಕೆ ತಂದೆ ಕೃಷ್ಣಮೂರ್ತಿ.ಕೆ ವಯಸ್ಸು ಸುಮಾರು 43 ವರ್ಷ ಸರ್ಕಾರಿ ಮೀನುಗಾರಿಕೆ ಇಲಾಖೆ ನೌಕರ ಗಂಗಾಂಭೀಕ ಬಡಾವಣೆ ಜಗಳೂರು ಟೌನ್, ಜಗಳೂರು ತಾಲ್ಲೂಕು, ದಾವಣಗೆರೆ ಜಿಲ್ಲೆ 3) ಶ್ರೀಮತಿ ಕೆ.ಸವಿತ ತಂದೆ ಕೃಷ್ಣಮೂರ್ತಿ ಕೋಂ ನಾಗೇಶ.ಟಿ.ಎನ್.ವಯಸ್ಸು 39 ವರ್ಷ, ಕೆಲಸ ಮನೆಕೆಲಸ ಸಾಯಿಬಾಬಾ ಟೆಂಪಲ್, ಶಂಕರಪ್ಪ ಗಾರ್ಡನ್ ತಿಪಟೂರು ಟೌನ್, ತುಮಕೂರು ಜಿಲ್ಲೆ 4) ಶ್ರೀ ರಮೇಶ.ಬಿ.ಕೆ. ತಂದೆ ಕೇಶವರೆಡ್ಡಿ ವಯಸ್ಸು 56 ವರ್ಷ, ಕೆಲಸ ವ್ಯವಸಾಯ ವಾಸ ಓಂಕಾರೇಶ್ವರ ಬಡಾವಣೆ ಜಗಳೂರು ಟೌನ್, ಜಗಳೂರು ತಾಲ್ಲೂಕು, ದಾವಣಗೆರೆ ಜಿಲ್ಲೆ

### ಸಾರ್ವಜನಿಕ ಪ್ರಕಟಣೆ

ಈ ಮೇಲ್ಕಂಡ ಪ್ರಕರಣವನ್ನು ವಾದಿ, ಪ್ರತಿವಾದಿಯರ ವಿರುದ್ಧ ಮಾನ್ಯ ಸಿವಿಲ್ ಮತ್ತು ಜೆ.ಎಂ.ಎಫ್.ಸಿ.ನ್ಯಾಯಾಲಯ ಜಗಳೂರು ಇಲ್ಲಿ ಪಾಲುವಿಭಾಗ ಮತ್ತು ಪ್ರತ್ಯೇಕ ಸ್ವಾಧೀನ ಕೋರಿ ಈ ಕೆಳಕಂಡ ದಾವ ಸ್ವತ್ತುಗಳ ಮೇಲೆ ದಾವೆಯನ್ನು ಸಲ್ಲಿಸಿದ್ದು. ಸದರಿ ದಾವೆ ಪ್ರತಿವಾದಿಯರ ಹಾಜರಾತಿಗಾಗಿ ಮುದ್ದತ್ ಇರುತ್ತದೆ. ಈ ಕೆಳಕಂಡ ಷೆಡ್ಯೂಲ್‌ಗಳನ್ನು ದಾವ ಇತ್ಯರ್ಥವಾಗುವವರೆಗೂ ಬೇರೆ ಯಾರೇ ಆಗಲಿ ಸದರಿ ದಾವ ಸ್ವತುಗಳ ಮೇಲೆ ಕ್ರಯಕ್ಕೆ ಪಡೆಯುವುದಾಗಲಿ, ಕರಾರು ಪತ್ರ ಮಾಡಿಕೊಳ್ಳುವುದಾಗಲಿ, ದಾನ ಪತ್ರ ಮಾಡುವುದಾಗಲಿ, ಮರಣಶಾಸನ ಪತ್ರ ಮಾಡುವುದಾಗಲಿ, ಆಡಮಾನ, ಭೋಗ್ಯ, ಇತರೆ ಯಾವುದೇ ವಹಿವಾಟುಗಳನ್ನು ಸಾರ್ವಜನಿಕರು ಮಾಡಬಾರದೆಂದು ಈ ಮೂಲಕ ಸಾರ್ವಜನಿಕರಲ್ಲಿ ತಿಳಿಯಪಡಿಸಲಾಗಿದೆ. ಒಂದು ವೇಳೆ ತಾವುಗಳು ದಾವ ಸ್ವತ್ತುಗಳ ಬಗ್ಗೆ ವ್ಯವಹಾರ ಮಾಡಿದಲ್ಲಿ ಅದಕ್ಕೆ ತಾವೇ ಜವಬ್ದಾರರಾಗಿರುತ್ತೀರಿ ತಿಳಿಯಿರಿ. ಷೆಡ್ಯೂಲ್

**ಐಟಂ ನಂ.1**

ಜಗಳೂರು ತಾಲ್ಲೂಕು, ಜಗಳೂರು ಟೌನ್, ಗಂಗಾಂಭೀಕ ಬಡಾವಣೆಯಲ್ಲಿರುವ ಆರ್.ಸಿ.ಸಿ. ಬಿಲ್ಡಿಂಗ್ ಮತ್ತು ಖಾಲಿಜಾಗ ಸೈಟ್ ನಂ.60, ಇ–ಸ್ವತ್ತು ನಂ.27–509–111, ಆಸ್ತಿ ನಂ.3491/3551/60, ವಾರ್ಡ್ ನಂ 13 ಮೀಟರ್, ವಿಸ್ತೀರ್ಣ ಪೂರ್ವ ಪಶ್ಚಿಮ15.240030 ಮೀಟರ್ 215.9999 ಚದುರ ಮೀಟರ್‌ಇದಕ್ಕೆ ಚಕ್ಕುಬಂದಿ:
ಪೂರ್ವಕ್ಕೆ:–ಸೈಟ್ ನಂ.59
ಪಶ್ಚಿಮಕ್ಕೆ:–ರಸ್ತೆ
ಉತ್ತರಕ್ಕೆ:–ಸೈಟ್ ನಂ.53 ಮತ್ತು 54
ದಕ್ಷಿಣಕ್ಕೆ:–ರಸ್ತೆ

**ಐಟಂ ನಂ.2**

ಜಗಳೂರು ತಾಲ್ಲೂಕು, ಜಗಳೂರು ಟೌನ್, ಗಂಗಾಂಭೀಕ ಬಡಾವಣೆಯಲ್ಲಿರುವ ಖಾಲಿ ಜಾಗ ಸೈಟ್ ನಂ72 ಇ–ಸ್ವತ್ತು ನಂ.28888–504–63 ಆಸ್ತಿ ನಂ3503/3503/72 ವಾರ್ಡ್ ನಂ 13 ವಿಸ್ತೀರ್ಣ ಪೂರ್ವ– ಪಶ್ಚಿಮ:– 15.240030+14.9352/2ಮೀಟರ್ ಉತ್ತರ– ದಕ್ಷಿಣ:–18.288037 ಮೀಟರ್ ಒಟ್ಟು ವಿಸ್ತೀರ್ಣ275.9225 ಚದುರ ಮೀಟರ್ ಇದಕ್ಕೆ ಚಕ್ಕುಬಂದಿ:
ಪೂರ್ವಕ್ಕೆ:–ಮರೇನಹಳ್ಳಿ ರಸ್ತೆ
ಪಶ್ಚಿಮಕ್ಕೆ:–ಸೈಟ್ ನಂ.64
ಉತ್ತರಕ್ಕೆ:–ಸೈಟ್ ನಂ.71
ದಕ್ಷಿಣಕ್ಕೆ:–ಗಂಗಾಂಭೀಕ ಬಡಾವಣೆ–2

**ಐಟಂ ನಂ.3**

ಜಗಳೂರು ತಾಲ್ಲೂಕು, ಜಗಳೂರು ಟೌನ್, ಗಂಗಾಂಭೀಕ ಬಡಾವಣೆಯಲ್ಲಿರುವ ಖಾಲಿ ಜಾಗ ಸೈಟ್ ನಂ 64. ಇ–ಸ್ವತ್ತು ನಂ 28–504–47, ವಾರ್ಡ್ ನಂ.13. ವಿಸ್ತೀರ್ಣ ಪೂರ್ವ–ಪಶ್ಚಿಮ:–15.240030 ಮೀಟರ್, ಉತ್ತರ–ದಕ್ಷಿಣ:–9.144018 ಒಟ್ಟು ವಿಸ್ತೀರ್ಣ 139,3551 ಚದುರ ಮೀಟರ್ ಇದಕ್ಕೆ ಚಕ್ಕುಬಂದಿ:
ಪೂರ್ವಕ್ಕೆ:–ಸೈಟ್ ನಂ.72
ಪಶ್ಚಿಮಕ್ಕೆ:–ರಸ್ತೆ
ಉತ್ತರಕ್ಕೆ:–ಸೈಟ್ ನಂ.65
ದಕ್ಷಿಣಕ್ಕೆ:–ಗಂಗಾಂಭೀಕ ಬಡಾವಣೆ–2

**ಐಟಂ ನಂ.4**

ಜಗಳೂರು ತಾಲ್ಲೂಕು, ಜಗಳೂರು ಟೌನ್, ಗಂಗಾಂಭೀಕ ಬಡಾವಣೆಯಲ್ಲಿರುವ ಖಾಲಿ ಜಾಗ ಸೈಟ್ ನಂ 53, ಇ–ಸ್ವತ್ತು ನಂ27–510–11, ಆಸ್ತಿ ನಂ .3484/3544/53, ವಾರ್ಡ್ ನಂ 13 ವಿಸ್ತೀರ್ಣ ಪೂರ್ವ– ಪಶ್ಚಿಮ :–10.6680+7.0104/2 ಮೀಟರ್ ಉತ್ತರ –ದಕ್ಷಿಣ:–16.764034 ಮೀಟರ್, ಒಟ್ಟು ವಿಸ್ತೀರ್ಣ 140.1806 ಚದುರ ಮೀಟರ್ ಇದಕ್ಕೆ

ಚಕ್ಕುಬಂದಿ:
ಪೂರ್ವಕ್ಕೆ:–ಸೈಟ್ ನಂ.54
ಪಶ್ಚಿಮಕ್ಕೆ:–ರಸ್ತೆ
ಉತ್ತರಕ್ಕೆ:–ರಸ್ತೆ
ದಕ್ಷಿಣಕ್ಕೆ:–ಸೈಟ್ ನಂ.60

ವಾದಿ ಪರ ವಕೀಲರು
ಮೊ.ನಂ:9880337630
ದಿನಾಂಕ:
ಸ್ಥಳ:ಜಗಳೂರು

ವಾದಿ
ಮೊ.ನಂ:9353154748

### ಶಾಸಕ ಅಮೀನುಲ್ ವಿರುದ್ಧದ ದೇಶದ್ರೋಹ ಪ್ರಕರಣ ರದ್ದು

**ಗವಾಹಟಿ (ಪಿಟಿಐ):** ರಾಷ್ಟ್ರೀಯ ಭದ್ರತಾ ಕಾಯ್ದೆಯಡಿ ಏಪ್ರಿಲ್‌ನಲ್ಲಿ ಬಂಧಿಸಲಾಗಿದ್ದ ಎಐಯುಡಿಎಫ್ ಶಾಸಕ ಅಮೀನುಲ್ ಇಸ್ಲಾಂ ಅವರನ್ನು ಬಿಡುಗಡೆ ಮಾಡುವಂತೆ ಗುವಾಹಟಿ ಹೈಕೋರ್ಟ್ ಆದೇಶ ನೀಡಿದೆ.

## ಕೊಡದಗುಡ್ಡದಲ್ಲಿ ಇಂದು ಕಡೇ ಕಾರ್ತಿಕ



**ಜಗಳೂರು :** ತಾಲ್ಲೂಕಿನ ಕೊಡದಗುಡ್ಡ ದಲ್ಲಿರುವ ಶ್ರೀ ವೀರ ಭದ್ರ ಸ್ವಾಮಿ ದೇವಸ್ಥಾನದಲ್ಲಿ ಇಂದು ಬಸವನ ಪೂಜೆ ಮತ್ತು ಕಡೇ ಕಾರ್ತಿಕೋ ತ್ಸವ ನಡೆಯಲಿದ್ದು, ಈ ಪ್ರಯುಕ್ತ ಸಂಜೆ 7.30ಕ್ಕೆ ವೀರಭದ್ರೇಶ್ವರ ಸ್ವಾಮಿಯ ಬೆಳ್ಳಿ ಪಲ್ಲಕ್ಕಿ ಮಹೋತ್ಸವ ಹಾಗೂ ಮಹಾ ಮಂಗಳಾರತಿ ಜರುಗಲಿದೆ

## ನಕಲಿ ಕಾಲ್ ಸೆಂಟರ್ ಮೇಲೆ ದಾಳಿ

**ಹೈದರಾಬಾದ್:** ಆಸ್ಟ್ರೇಲಿಯಾದ ಹಲವು ಪ್ರಜೆಗಳಿಗೆ ಕಳೆದ ಎರಡು ವರ್ಷಗಳಿಂದ ಕೋಟ್ಯಂತರ ರೂಪಾಯಿ ವಂಚಿಸಿದ ಒಂದು ನಕಲಿ ಅಂತಾರಾಷ್ಟ್ರೀಯ ಕಾಲ್ ಸೆಂಟರ್‌ನ ಒಂಬತ್ತು ಜನರನ್ನು ಹೈದರಾಬಾದ್ ಪೊಲೀಸರು ಬಂಧಿಸಿದ್ದಾರೆ. ಅಕ್ರಮ ವ್ಯವಹಾರದಲ್ಲಿ ಒಳಗೊಂಡಿರುವ ಇನ್ನಷ್ಟು ಜನರನ್ನು ಬಂಧಿಸುವ ಸಾಧ್ಯತೆಯಿದೆ ಎಂದು ಪೊಲೀಸರು ತಿಳಿಸಿದ್ದಾರೆ. ಇಲ್ಲಿನ ಮಾಧಪುರದಿಂದ ಕಾರ್ಯ ನಿರ್ವಹಿಸುತ್ತಿದ್ದ ರಿಜ್ ಐಟಿ ಸಲ್ಯೂಷನ್ಸ್ ಎಂಬ ನಕಲಿ ಸಂಸ್ಥೆ ಆಸ್ಟ್ರೇಲಿಯಾದವರಿಗೆ 8ರಿಂದ 10 ಕೋಟಿ ರೂಪಾಯಿ ಪಂಗನಾಮ ಹಾಕಿದೆ ಎಂದು ಪೊಲೀಸರು ವಿವರಿಸಿದ್ದಾರೆ. ಸೈಬರಾಬಾದ್ ವಿಶೇಷ ಕಾರ್ಯಾಚರಣೆ ತಂಡ (ಎಸ್‌ಒಟಿ) ಮತ್ತು ಸೈಬರ್ ಕ್ರೈಂ ಪೊಲೀಸರು ಜಂಟಿ ಕಾರ್ಯಾಚರಣೆ ನಡೆಸಿ ಒಂಬತ್ತು ಆರೋಪಿಗಳನ್ನು ಬಂಧಿಸಿವೆ. ಸೈಬರಾಬಾದ್‌ನ ಸೈಬರ್ ಕ್ರೈಂ ಪೊಲೀಸ್ ಠಾಣೆಯಲ್ಲಿ ಮೊಕದ್ದಮೆ ದಾಖಲಾಗಿದೆ.

## ಭ್ರಷ್ಟಾಚಾರ ಕೇಸಲ್ಲಿ ಕ್ಷಮೆ ನೀಡಿ: ನೆತನ್ಯಾಹು ಮನವಿ

**ಜೆರುಸಲೇಂ:** ತಮ್ಮ ವಿರುದ್ಧದ ಭ್ರಷ್ಟಾಚಾರ ಆರೋಪಕ್ಕೆ ಸಂಬಂಧಿಸಿ ಸುದೀರ್ಘ ಕಾನೂನು ಹೋರಾಟ ನಡೆಸಿಕೊಂಡು ಬಂದಿರುವ ಇಸ್ರೇಲ್ ಪ್ರಧಾನಿ ಬೆಂಜ ಮಿನ್ ನೆತನ್ಯಾಹು, ಕ್ಷಮಾದಾನಕ್ಕೆ ಅಧ್ಯಕ್ಷರಿಗೆ ಮನವಿ ಮಾಡಿದ್ದಾರೆ. ಇದು ಅತ್ಯಪರೂಪದ ಮನವಿಯಾಗಿದೆ ಎಂದು ಅಧ್ಯಕ್ಷರ ಕಚೇರಿ ತಿಳಿಸಿದೆ.
ಆರೋಪವೇನು?: ನೆತನ್ಯಾಹು ಅವರ ವಿರುದ್ಧ ವಂಚನೆ, ನಂಬಿಕೆ ದ್ರೋಹ, ಭ್ರಷ್ಟಾಚಾರ, ದೇಶದ ಶ್ರೀಮಂತರಿಗೆ ಅನುಕೂಲ ಮಾಡಿಕೊಟ್ಟ ಆರೋಪಗಳಿವೆ. ಅಧಿಕಾರದಲ್ಲಿ ದ್ದಾಗಲೇ ಭ್ರಷ್ಟಾಚಾರದ ವಿಚಾರಣೆ ಎದುರಿಸುತ್ತಿರುವ ಇಸ್ರೇಲ್‌ನ ಮೊದಲ ಪ್ರಧಾನಿ ನೆತನ್ಯಾಹು ಆಗಿದ್ದಾರೆ.

## ತಮಿಳ್ನಾಡಲ್ಲಿ 2 ಬಸ್‌ಗಳ ಭೀಕರ ಡಿಕ್ಕಿ: 11 ಸಾವು

**ಶಿವಗಂಗಾ (ತಮಿಳುನಾಡು): 2** ಬಸ್‌ಗಳು ಡಿಕ್ಕಿ ಹೊಡೆದ ಪರಿಣಾಮ 11 ಮಂದಿ ಸಾವನ್ನಪ್ಪಿ, 20ಕ್ಕೂ ಅಧಿಕ ಜನರು ಗಾಯಗೊಂಡ ದುರದೃಷ್ಟಕರ ಘಟನೆ ತಮಿಳುನಾಡಿನ ಕರೈಕುಡಿ ಬಳಿ ಭಾನುವಾರ ನಡೆದಿದೆ. ಮೃತ 11 ಮಂದಿಯಲ್ಲಿ 8 ಮಹಿಳೆಯರು, ಇಬ್ಬರು ಗಂಡಸರು ಹಾಗೂ ಒಂದು ಮಗು ಸೇರಿದೆ. ಗಾಯಾಳು ಗಳನ್ನು ಸಮೀಪದ ಆಸ್ಪತ್ರೆಗೆ ದಾಖಲಿಸಿ ಚಿಕಿತ್ಸೆ ನೀಡಲಾ ಗುತ್ತಿದೆ. 'ಬಸ್‌ಗಳು ಪರಸ್ಪರ ಮುಖಾಮುಖಿಯಾಗಿ ಅವಘಡ ನಡೆದಿದೆ. ಘಟನೆಗೆ ಕಾರಣ ಗೊತ್ತಾಗಿಲ್ಲ. ತನಿಖೆ ನಡೆಸಲಾಗುವುದು' ಎಂದು ಅಧಿಕಾರಿಗಳು ತಿಳಿಸಿದ್ದಾರೆ.

## ಶಾಸಕ ಅಮೀನುಲ್ ವಿರುದ್ಧದ ದೇಶದ್ರೋಹ ಪ್ರಕರಣ ರದ್ದು

**ಗವಾಹಟಿ (ಪಿಟಿಐ):** ರಾಷ್ಟ್ರೀಯ ಭದ್ರತಾ ಕಾಯ್ದೆಯಡಿ ಏಪ್ರಿಲ್‌ನಲ್ಲಿ ಬಂಧಿಸಲಾಗಿದ್ದ ಎಐಯುಡಿಎಫ್ ಶಾಸಕ ಅಮೀನುಲ್ ಇಸ್ಲಾಂ ಅವರನ್ನು ಬಿಡುಗಡೆ ಮಾಡುವಂತೆ ಗುವಾಹಟಿ ಹೈಕೋರ್ಟ್ ಆದೇಶ ನೀಡಿದೆ. ಇಸ್ಲಾಂ ಅವರ ವಿರುದ್ಧ ಇದ್ದ ಪ್ರಕರಣವನ್ನು ನ್ಯಾಯಾಲಯ ರದ್ದು ಮಾಡಿತು

## ಮಹಾತ್ಮಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತ್ರಿ ಯೋಜನೆಗೆ ಅರ್ಜಿ ಆಹ್ವಾನ

**ದಾವಣಗೆರೆ :** ಹರಿಹರ ತಾಲೂಕಿನ ತೋಟಗಾರಿಕೆ ಇಲಾಖೆ ವತಿಯಿಂದ ಪ್ರಸಕ್ತ ಸಾಲಿಗೆ ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತ್ರಿ ಯೋಜನೆಯಡಿ ಹೊಸದಾಗಿ ತೋಟಗಾರಿಕೆ ಬೆಳೆಗಳನ್ನು ಬೆಳೆಯಲು ಇಚ್ಛಿಸುವ ರೈತರಿಂದ ಅರ್ಜಿ ಆಹ್ವಾನಿಸಲಾಗಿದೆ.

ಸಣ್ಣ, ಅತೀ ಸಣ್ಣ, ಪರಿಶಿಷ್ಟ ಜಾತಿ, ಹಾಗೂ ಪರಿಶಿಷ್ಟ ಪಂಗಡದ ಅರ್ಹ ರೈತರು ಅರ್ಜಿ ಸಲ್ಲಿಸಬಹುದು. ಈ ಯೋಜನೆಯಡಿಯಲ್ಲಿ ತೋಟಗಾರಿಕೆ ಬೆಳೆಗಳಾದ ವೀಳ್ಯದೆಲೆ, ತೆಂಗು, ಮಾವು, ಸಪೋಟ, ಸೀಬೆ, ಅಂಗಾಂಶ ಬಾಳೆ, ಪಪ್ಪಾಯ, ಕರಿಬೇವು, ಕಾಳುಮೆಣಸು, ಕೋಕೋ, ನೇರಳೆ, ಸೀತಾಫಲ, ಡ್ರಾಗನ್ ಫ್ರೋಟ್ಸ್, ಮಲ್ಲಿಗೆ, ಬೆಣ್ಣೆ, ಹಣ್ಣು, ಹಲಸು,

ಗುಲಾಬಿ ಇತ್ಯಾದಿ ತೋಟಗಾರಿಕೆ ಬೆಳೆಗಳಿಗೆ ಅರ್ಜಿ ಸಲ್ಲಿಬಹುದು. ಅರ್ಜಿ ಸಲ್ಲಿಸಲು ಡಿಸೆಂಬರ್ 30 ರೊಳಗಾಗಿ ಹಿರಿಯ ಸಹಾಯಕ ತೋಟಗಾರಿಕೆ ನಿರ್ದೇಶಕರು (ಜಿ.ಪಂ) ಹರಿಹರ ಕಛೇರಿಗೆ ಅಥವಾ ಆಯಾ ಗ್ರಾಮ ಪಂಚಾಯತಿಗೆ ಸಲ್ಲಿಸಬಹುದು. ಹೆಚ್ಚಿನ ಮಾಹಿತಿಗಾಗಿ ಸಂಬಂಧಪಟ್ಟ ಹೋಬಳಿ ಮಟ್ಟದ ಸಹಾಯಕ ತೋಟಗಾರಿಕೆ ಅಧಿಕಾರಿಗಳನ್ನು ಸಂಪರ್ಕಿಸಬಹುದೆಂದು ಹಿರಿಯ ಸಹಾಯಕ ತೋಟಗಾರಿಕೆ ನಿರ್ದೇಶಕರು (ಜಿ.ಪಂ) ತಿಳಿಸಿದ್ದಾರೆ.

## ಶೇ.50% ರಷ್ಟು ರಿಯಾಯಿತಿಯಲ್ಲಿ ದಂಡ ಪಾವತಿಗೆ ಅವಕಾಶ : ಸಾಗರ ಆರ್‌ಟಿಓ

**ಶಿವಮೊಗ್ಗ:** ಸಾರಿಗೆ ಇಲಾಖೆಯಲ್ಲಿ ವಾಹನಗಳ ಸಂಚಾರ ನಿಯಮ ಉಲ್ಲಂಘನೆ ಪ್ರಕರಣಗಳನ್ನು ಶೇಕಡಾ 50% ರಷ್ಟು ದಂಡ ಪಾವತಿಸಿ ಇತ್ಯರ್ಥಪಡಿಸಿಕೊಳ್ಳಲು ಸರ್ಕಾರ ಅವಕಾಶ ಕಲ್ಪಿಸಿದೆ. ವಾಹನ ಮಾಲೀಕರು ತಮ್ಮ ವಾಹನದ ವಿರುದ್ಧ ದಾಖಲಾಗಿರುವ ಪ್ರಕರಣ ಸಂಬಂಧ ದಂಡ ಮೊತ್ತದ ಅರ್ಧದಷ್ಟು ಪಾವತಿ ಮಾಡಬಹುದಾಗಿದೆ. 1991–92 ರಿಂದ 2019–20 ರೊಳಗೆ ಪ್ರಾದೇಶಿಕ ಸಾರಿಗೆ ಕಛೇರಿ (ಆರ್.ಟಿ.ಓ) ಅಧಿಕಾರಿಗಳು ದಾಖಲಿಸಿರುವ ಪ್ರಕರಣಗಳು ಮಾತ್ರ ಶೇಕಡಾ 50% ರಷ್ಟು ದಂಡ ಪಾವತಿ ರಿಯಾಯಿತಿ ವ್ಯಾಪ್ತಿಗೆ ಒಳಪಡುತ್ತವೆ. ಶಿವಮೊಗ್ಗ ಜಿಲ್ಲಾ ವ್ಯಾಪ್ತಿಯಲ್ಲಿ ಸದರಿ ಅವಧಿಯಲ್ಲಿ 790 ಪ್ರಕರಣಗಳು ಇತ್ಯರ್ಥಕ್ಕೆ ಬಾಕಿಯಿದ್ದು ಸಂಬಂಧಪಟ್ಟ ವಾಹನ ಮಾಲೀಕರು ಡಿ.12 ರೊಳಗೆ ರಿಯಾಯಿತಿ ಬಳಸಿಕೊಂಡು ದಂಡ ಪಾವತಿಸಿ ಪ್ರಕರಣ ಮುಕ್ತಾಯಗೊಳಿಸಿ ಕೊಳ್ಳಬಹುದಾಗಿದ್ದು, ಇದರ ಸದುಪಯೋಗ ಪಡೆದುಕೊಳ್ಳುವಂತೆ ಸಾಗರ ಸಹಾಯಕ ಪ್ರಾದೇಶಿಕ ಸಾರಿಗೆ ಅಧಿಕಾರಿ ವಿರೇಶ್ ಡಿ.ಹೆಚ್. ಪ್ರಕಟಣೆಯಲ್ಲಿ ತಿಳಿಸಿದ್ದಾರೆ.


# ಪರಿವರ್ತನೆ ತರುವ ನಾಯಕತ್ವ ಗುಣ ನೇತಾಜಿ ಕನಸು

**ಚಿಕ್ಕಮಗಳೂರು:** ರಾಷ್ಟ್ರದಲ್ಲಿ ನೈಜ ಪರಿವರ್ತನೆ ತರುವ ನಾಯಕತ್ವದ ಗುಣವಿದೆಯಲ್ಲ ನೇತಾಜಿ ಸುಭಾಶ್ಚಂದ್ರ ಬೋಸರ ಕನಸಾಗಿತ್ತು; ಅವರು ದೇಶಕ್ಕೆ ಬೇಕಾದ ರಕ್ಷಣಾತ್ಮಕ ಮನೋಭಾವವನ್ನು ತಮ್ಮ ವ್ಯಕ್ತಿತ್ವದಲ್ಲಿ ರೂಢಿಸಿಕೊಂಡಿದ್ದವರು ಎಂದು ಸಾಹಿತಿ ಡಾ.ಎಚ್.ಎಸ್.ಸತ್ಯನಾರಾಯಣ ಅವರು ವಿಶ್ಲೇಷಿಸಿದರು.

ನಗರದ ಬಸವನಹಳ್ಳಿಯ ಶ್ರೀ ಶಂಕರಮಠದಲ್ಲಿ ನಾದ ಚೈತನ್ಯ ಸಾಂಸ್ಕೃತಿಕ ಯುವ ಕಲಾ ವೇದಿಕೆ, ನಿವೃತ್ತ ಸೈನಿಕರ ಸಂಘದ ಆಶ್ರಯದಲ್ಲಿ ಭಾನುವಾರ ಸಾಹಿತಿ, ಚಿಂತಕ, ಕಾದಂಬರಿಕಾರ ಡಾ.ಜಿ.ಬಿ.ಹರೀಶ ಅವರ ಮಹಾಕಾಲ–2 ಕಾದಂಬರಿ ಲೋಕಾರ್ಪಣೆ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಈ ದೇಶಕ್ಕೆ ಅಗತ್ಯವಾದ ರಕ್ಷಣಾ ತಂತ್ರದ ಅಗತ್ಯತೆಯ ಕಲ್ಪನೆ ಚಿಕ್ಕಂದಿನಿಂದಲೂ ನೇತಾಜಿ ಅವರಲ್ಲಿತ್ತು, ತುಂಬ ಸುಸಂಸ್ಕೃತ ಹಾಗೂ ಶ್ರೀಮಂತವಾದ ಕುಟುಂಬದಿಂದ ಬಂದ ಅವರು ಚಿಕ್ಕಂದಿನಿಂದಲೂ ಕ್ರಾಂತಿಕಾರಕ ವಿಚಾರಗಳಿರುವ ಪುಸ್ತಕಗಳ ಬಗ್ಗೆ ಆಸಕ್ತಿ ಹೊಂದಿದ್ದರು. ಈ ಎಲ್ಲವುಗಳ ಬಗ್ಗೆ ಡಾ.ಜಿ.ಬಿ.ಹರೀಶ ವಿರಚಿತ ಮಹಾಕಾಲ–2 ಕಾದಂಬರಿ ಬೆಳಕು ಚೆಲ್ಲುತ್ತದೆ ಎಂದರು.

ಸುಮಾರು ಏಳು ವರ್ಷಗಳಿಗೂ ಹೆಚ್ಚು ಕಾಲ ಇಡೀ ದೇಶಾದ್ಯಂತ ನೇತಾಜಿಯವರ ಬಗ್ಗೆ ಇರುವ



ಸಾಹಿತ್ಯವನ್ನು, ಇತಿಹಾಸಕಾರರ ಉಲ್ಲೇಖಗಳನ್ನು ಸಂಗ್ರಹಿಸಿ ವಿದೇಶಿ ಪ್ರವಾಸಿಗರು ಅಥವಾ ವಿದೇಶೀಯ ಆಧುನಿಕ ಚರಿತ್ರಕಾರರು ಭಾರತದ ಸ್ವಾತಂತ್ರ್ಯ ಹೋರಾಟದ ಬಗ್ಗೆ ಬರೆದಿರುವ ಅನೇಕ ಸಂಗತಿಗಳನ್ನು ಅವಲೋಕಿಸಿ ಈ ಕಾದಂಬರಿ ರಚಿಸಿದ್ದಾರೆ. ಕನ್ನಡದ ಮಟ್ಟಿಗೆ ಈ ರಚನೆ ಒಂದು ಅದ್ಭುತವಾದ ಮತ್ತು ಮೊದಲ ದಾಖಲೆ.

ಈ ಸಂಶೋಧನಾ ಕೃತಿ ಏಕಕಾಲಕ್ಕೆ ನಮ್ಮ ದೇಶದ ಚರಿತ್ರೆ ಮತ್ತೆ ಕಟ್ಟಬೇಕು ಎನ್ನುವ ಒತ್ತಾಯವನ್ನು ನಮ್ಮ ಚರಿತ್ರೆಕಾರರ ಮೇಲೆ ಹೇರುವ ಹಾಗಿದೆ. ಮುಂದಿನ ಜನಾಂಗಕ್ಕೆ ನಮ್ಮ ರಾಷ್ಟ್ರೀಯ ನಾಯಕರನ್ನು ಹೇಗೆ ಬಿಂಬಿಸಲಾಗಿದೆ. ಅವರನ್ನು ನಾವು ವಾಸ್ತವದಲ್ಲಿ ಹೇಗೆ ಪರಿಭಾವಿಸಬೇಕಾಗಿತ್ತು ಅನ್ನುವ ಮಾರ್ಗದರ್ಶಿ ಕೃತಿಯೂ ಇದಾಗಿದೆ ಎಂದರು.

ಕೃತಿ ಲೋಕಾರ್ಪಣೆ ಮಾಡಿದ ವಿಧಾನ ಪರಿಷತ್ ಸದಸ್ಯ ಸಿ.ಟಿ.ರವಿ ಅವರು ಮಾತನಾಡಿ, ಡಾ.ಜಿ.ಬಿ.ಹರೀಶ ವರ್ತಮಾನದಲ್ಲಿರುವ ರಾಷ್ಟ್ರೀಯ ವೈಚಾರಿಕ ಮನಸ್ಥಿತಿಯ ಸಾಹಿತಿ. ಉತ್ತಮ ವಿಮರ್ಶಕ. ಅವರು ತಮ್ಮದೇ ಧಾಟಿಯಲ್ಲಿ ಡಾ.ಅಂಬೇಡ್ಕರ್ ಬಗ್ಗೆ, ಸಂವಿಧಾನದ ಬಗ್ಗೆ ಬೇರೆ ಬೇರೆ ರೀತಿಯಲ್ಲಿ ವಿಮರ್ಶೆ ಮಾಡಿರುವುದನ್ನು ಕೇಳಿರುವುದಾಗಿ ಹೇಳಿದರು.

ಮಹಾಕಾಲ ಕಾದಂಬರಿಯನ್ನು ವಾಚಿಸಿ ಅನುಭವಿಸುವುದರಿಂದ ಮಾತ್ರ ನೇತಾಜಿ ಸುಭಾಶ್ಚಂದ್ರ ಬೋಸರ ವ್ಯಕ್ತಿತ್ವ ಮತ್ತು ಅವರು ಪಟ್ಟ ಕಷ್ಟ ನಮಗೆ ಗೊತ್ತಾಗುತ್ತದೆ. ಸ್ವತಂತ್ರ ಭಾರತದಲ್ಲಿ ಕೆಲವರಿಗೆ ಐತಿಹಾಸಿಕವಾಗಿ ಏನು ನ್ಯಾಯ ಕೊಡಬೇಕಾಗಿತ್ತೊ ಅದು ಕೊಡಲಿಲ್ಲ. ಅವರಲ್ಲಿ ಸುಭಾಶ್ಚಂದ್ರ ಬೋಸ್ ಕೂಡ ಒಬ್ಬರು. ಇತ್ತೀಚೆಗೆ ಅವರ ವ್ಯಕ್ತಿತ್ವಕ್ಕೆ ನ್ಯಾಯ ದೊರೆಯುತ್ತಿದೆ.

ಇಂಡಿಯಾ ಗೇಟ್‌ನಲ್ಲಿ ಅವರ ಪ್ರತಿಮೆ ಅನಾವರಣ ಮಾಡುವ ಮೂಲಕ ಅವರ ವ್ಯಕ್ತಿತ್ವ ಗುರುತಿಸುವ ಕೆಲಸ ಕೇಂದ್ರ ಸರ್ಕಾರದಿಂದ ಆಗಿದೆ ಎಂದರು.

ಕೃತಿಕರ್ತೃ ಡಾ.ಜಿ.ಬಿ.ಹರೀಶ ಮಾತನಾಡಿ, ಸತ್ಯ ಯಾವತ್ತಿದ್ದರೂ ಅನಾವರಣವಾಗಲೇಬೇಕು. ಸುಭಾಶ್ಚಂದ್ರ ಬೋಸರ ಕುರಿತಾದ ಅನೇಕ ಊಹಾಪೋಹಗಳಿಗೆ ಈ ಕೃತಿ ಉತ್ತರ ನೀಡುತ್ತದೆ.

ಜಗತ್ತಿನಲ್ಲಿ ಮಹಿಳಾ ಸೈನ್ಯವಿಲ್ಲದ ಆ ಕಾಲದಲ್ಲೇ ಮಹಿಳಾ ಸೈನ್ಯವನ್ನು ಕಟ್ಟಿದ್ದವರು. ಸುಭಾಶ್ಚಂದ್ರ ಬೋಸರು ಇದ್ದಿದ್ದರೆ ಪಾಕಿಸ್ತಾನ ವಿಭಜನೆಯೇ ಆಗುತ್ತಿರಲಿಲ್ಲ ಎನ್ನುವ ಮಾತು ಸ್ವತಃ ಜಿನ್ನಾನಿಂದಲೇ ಕೇಳಿ ಬಂದಿತ್ತು. ಬೋಸರಿಗೆ ಬ್ರಿಟಿಷರಿಗಿಂತ ಅಹಿಂಸಾವಾದಿ ನಾಯಕರುಗಳಿಂದಲೇ ವಿರೋಧವಿತ್ತು ಎಂದರಲ್ಲದೆ,

ಕಳೆದ ಏಳು ವರ್ಷಗಳಿಂದ ಅವರ ಕುರಿತು ಅನೇಕ ದೇಶ–ವಿದೇಶಗಳ ಅತ್ಯಮೂಲ್ಯ ದಾಖಲೆಗಳನ್ನು ಸಂಗ್ರಹಿಸಿ ಅಧ್ಯಯನ ಮಾಡಿ ಕಾದಂಬರಿ ರೂಪದಲ್ಲಿ ಈ ಕೃತಿಯನ್ನು ರಚಿಸಿರುವುದಾಗಿ ತಿಳಿಸಿದರು. ನಿವೃತ್ತ ಸೈನಿಕರ ಸಂಘದ ಅಧ್ಯಕ್ಷ ಸಿ.ಎಸ್.ಮಂಜುನಾಥ್, ಅಧ್ಯಕ್ಷತೆ ವಹಿಸಿದ್ದ ನಾದ ಚೈತನ್ಯ ಸಾಂಸ್ಕೃತಿಕ ಯುವ ಕಲಾ ವೇದಿಕೆಯ ಅಧ್ಯಕ್ಷ ಸಿ.ಆರ್.ಪ್ರೇಮ್‌ಕುಮಾರ್ ಮಾತನಾಡಿದರು. ನಾದ ಚೈತನ್ಯ ಸಾಂಸ್ಕೃತಿಕ ಯುವ ಕಲಾ ವೇದಿಕೆಯ ಖಜಾಂಚಿ ರೇಖಾ ಪ್ರೇಮ್‌ಕುಮಾರ್ ಸ್ವಾಗತಿಸಿದರು.

# ಜನರ ಸಮಸ್ಯೆಗಳ ಪರಿಹಾರಕ್ಕಿಂತ ಅಧಿಕಾರ ಉಳಿಸಿಕೊಳ್ಳುವ ಆತುರ

**ಚಿತ್ರದುರ್ಗ:** ರಾಜ್ಯದಲ್ಲಿ ರೈತರ ಸಮಸ್ಯೆಗಳು ಹೆಚ್ಚಾಗುತ್ತಿದೆ. ಈ ಹಿಂದೆ ರಾಜ್ಯ ಸರ್ಕಾರದಲ್ಲಿ ಆಡಳಿತ ನಡೆಸಿರುವ ಮುಖ್ಯ ಮಂತ್ರಿಗಳು ಲಭ್ಯವಿರುವ ಅನುದಾನದಲ್ಲಿಯೇ ಸ್ಥಳೀಯವಾಗಿಯೇ ಸಮಸ್ಯೆಗಳನ್ನು ಬಗೆಹರಿಸಿಕೊಳ್ಳುತ್ತಿದ್ದರು. ಆದರೆ ಇಂದಿನ ದಿನದಲ್ಲಿ ರಾಜ್ಯದಲ್ಲಿ ಅಭಿವೃದ್ಧಿ ಕಾರ್ಯಗಳು ಕುಂಠಿತಗೊಂಡಿವೆ. ಈ ನಡುವೆ ಅಧಿಕಾರ ಹಂಚಿಕೆ ಎಂಬ ವಿಷಯದಲ್ಲಿ ಜನರ ದಿಕ್ಕನ್ನು ತಪ್ಪಿಸಲು ಆಡಳಿತದಲ್ಲಿರುವವರು ಮಂಗನಾಟವಾಡುತ್ತಿದ್ದಾರೆ ಇದನ್ನು ನಾಡಿನ ಜನರು ಗಮನಿಸುತ್ತಿದ್ದಾರೆ. ಮುಂದಿನ ದಿನಗಳಲ್ಲಿ ತಕ್ಕ ಉತ್ತರ ನೀಡಲಿದ್ದಾರೆ ಎಂದು ವಿಧಾನ ಪರಿಷತ್ತಿನ ವಿರೋಧಪಕ್ಷದ ನಾಯಕರಾದ ಛಲವಾದಿ ನಾರಾಯಣಸ್ವಾಮಿ ತಿಳಿಸಿದ್ದಾರೆ.

ಚಿತ್ರದುರ್ಗ ನಗರದ ಪ್ರವಾಸಿ ಮಂದಿರದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಈಗಿನ ಸರ್ಕಾರದ ಆಡಳಿತ ವೈಖರಿ ಭಿನ್ನವಾಗಿದೆ. ಪಕ್ಷದವರು ಕಾನೂನು ಬಾಹಿರವಾಗಿ ಅಧಿಕಾರ ಚಲಾಯಿಸುವ ಮೂಲಕ ಅನ್ಯಾಯ, ಅಕ್ರಮದ ವಿರುದ್ಧ ಹೋರಾಡುವ ಬೇರೆ ಪಕ್ಷದವರನ್ನು ಅಧಿಕಾರಿಗಳನ್ನು ನಡೆಸಿಕೊಳ್ಳುತ್ತಿರುವ ರೀತಿ ಮುಂದೆ ಆಡಳಿತ ನಡೆಸುವವರಿಗೆ, ಅಧಿಕಾರದಲ್ಲಿರುವವರಿಗೆ ಒಂದು ರೀತಿ ಪಾಠ ಹೇಳಿಕೊಡುವಂತಿದೆ ಈ ಬ್ರೇಕ್ ಫಾಸ್ಟ್ ಮೀಟಿಂಗ್‌ನಲ್ಲಿ ಇಡ್ಲಿ, ದೋಸೆ, ಉಪ್ಪಿಟ್ಟು



ಬಿಟ್ಟು ಬೇರೇನೂ ಆಗಲ್ಲ, ಸಿಎಂ ಪದವಿ ಸಿದ್ದರಾಮಯ್ಯ ಅವರಿಗೆ ಎರಡೂವರೆ ವರ್ಷ ಎಂದು ಮಾತುಕತೆಯಾಗಿದೆ ಎಂದು ಡಿ.ಕೆ.ಶಿವಕುಮಾರ್ ನೇರವಾಗಿ ಹೇಳಿದ್ದಾರೆ. ಆರು ಜನರ ಮಧ್ಯೆ ಈ ಒಪ್ಪಂದ ಆಗಿದೆ ಎಂದಿದ್ದಾರೆ. ಕಾಂಗ್ರೆಸ್ ಹೈಕಮಾಂಡ್‌ಗೆ ಧಂ ಇದ್ದರೆ ಈ ಒಪ್ಪಂದ ಘೋಷಿಸಬೇಕಿತ್ತು. ಆದರೆ, ಅದು ದುರ್ಬಲ ಹೈಕಮಾಂಡ್. ಸೋನಿಯಾ ಗಾಂಧಿ ಮತ್ತು ರಾಹುಲ್ ಗಾಂಧಿ ಫಾರಿನ್ ಟೂರ್ ಹೋಗಿದ್ದಾರೆ ಎಂದು ಟೀಕಿಸಿದರು.

ಕಾಂಗ್ರೆಸ್ ಪಕ್ಷದ ಸರ್ಕಾರದಲ್ಲಿ ದಲಿತರಿಗೆ ಸ್ಥಾನ ಇಲ್ಲಚ ಚುನಾವಣೆಯಲ್ಲಿ ಅವರ ಮತಗಳು ಬೇಕು ಆದರೆ

ಅವರಿಗೆ ಮುಖ್ಯಮಂತ್ರಿ ಸ್ಥಾನ ನೀಡುವುದಿಲ್ಲ, ಇಲ್ಲಿ ದಲಿತರಿಗೆ ಅನ್ಯಾಯವಾಗಿದೆ ಅವರ ಪರವಾಗಿ ಯಾರು ಧ್ವನಿಯನ್ನು ಎತ್ತುತ್ತಿಲ್ಲ ಅವರ ಪರವಾಗಿ ಅವರೇ ಧ್ವನಿಯನ್ನು ಸಹಾ ಎತ್ತಲಾಗದ ಪರಿಸ್ಥಿತಿಯಲ್ಲಿ ಅವರು ಇದ್ದಾರೆ, ನಮಗೆ ಅಧಿಕಾರವನ್ನು ನೀಡಿ ಎಂದು ಅಂಗಲಾಚುತ್ತಿದ್ದಾರೆ ಆದರೆ ಹೈಕಮಾಂಡ್ ಮಾತ್ರ ಇವರ ಧ್ವನಿಗೆ ಕಿವಿಗೂಡುತ್ತಿಲ್ಲ, ಮುಖ್ಯಮಂತ್ರಿಯನ್ನು ಬದಲಾವಣೆ ಮಾಡುವ ಶಕ್ತಿ ಹೈಕಮಾಂಡಿಗೂ ಸಹಾ ಇಲ್ಲವಾಗಿದೆ ಅವರು ಸಹಾ ಸಿದ್ದರಾಮಯ್ಯರವರ ಮುಂದೆ ಶಕ್ತಿ ಹೀನರಾಗಿದ್ದಾರೆ ಎಂದು ನಾರಾಯಣಸ್ವಾಮಿ ದೂರಿದರು.

ಗೋಷ್ಟಿಯಲ್ಲಿ ಬಿಜೆಪಿ ಅಧ್ಯಕ್ಷ ಕೆ.ಟಿ.ಕುಮಾರಸ್ವಾಮಿ, ಮಾಜಿ ಅಧ್ಯಕ್ಷ ಎ.ಮುರಳಿ, ರೈತ ಮೋರ್ಚಾದ ಜಿಲ್ಲಾಧ್ಯಕ್ಷ ವೆಂಕಟೇಶ್ ಯಾದವ್, ಯುವ ಮೋರ್ಚಾದ ರಾಜ್ಯ ಪ್ರಧಾನ ಕಾರ್ಯದರ್ಶಿ ಭಾರ್ಗವಿ ದೇಆವಿಡ್, ನಗರಾಧ್ಯಕ್ಷ ಲೋಕೇಶ್, ಗ್ರಾಮಾಂತರ ಅಧ್ಯಕ್ಷ ಕೆ.ನಾಗರಾಜ್, ವಕ್ತಾರ ನಾಗರಾಜ್ ಬೇದ್ರೆ, ಛಲವಾದಿ ತಿಪ್ಪೇಸ್ವಾಮಿ, ಲಿಂಗರಾಜು, ಯಶವಂತ ಸೇರಿದಂತೆ ಇತರರು ಭಾಗವಹಿಸಿದ್ದರು.

## ಮೆದುಳು ತಿನ್ನುವ ಅಮೀಬಾ (ನೇಗ್ಲೇ ರಿಯಾ ಫೌಲೇರಿ) ಕುರಿತು ಆರೋಗ್ಯ ಸಚಿವಾಲಯದಿಂದ ಸುರಕ್ಷತಾ ಸಲಹಾ ಮಾರ್ಗಸೂಚಿ

**ಬಳ್ಳಾರಿ:** ಕೇರಳ ರಾಜ್ಯದಲ್ಲಿ ನೇಗ್ಲೇರಿಯಾ ಫೌಲೇರಿ (Naegleria fowleri) ಇಂದ ಉಂಟಾಗುವ ಅಮೀಬಿಕ್ ಮೆನಿಂಗೊಎನ್ಸೆಫಲೈಟಿಸ್ (Amoebic meningoencephalitis) ಪ್ರಕರಣಗಳು ಕಂಡುಬಂದಿದೆ.

ಈ ಹಿನ್ನೆಲೆಯಲ್ಲಿ ರಾಜ್ಯದಿಂದ ಶಬರಿಮಲೆ ಹೊರಡುವ ಯಾತ್ರಿಕರು ತಮ್ಮ ಆರೋಗ್ಯದ ಬಗ್ಗೆ, ಜಾಗರೂಕರಾಗಿರಲು ಮತ್ತು ಸೋಂಕು ತಡೆಯಲು ಅಗತ್ಯ ಮುನ್ನೆಚ್ಚರಿಕೆ ಮತ್ತು ಸುರಕ್ಷಿತಾ ಕ್ರಮಗಳನ್ನು ಪಾಲಿಸುವ ಕುರಿತು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳ ಆಯುಕ್ತಾಲಯವು ಅಗತ್ಯ ಮುನ್ನೆಚ್ಚರಿಕೆ ಕ್ರಮಗಳನ್ನು ಪಾಲಿಸಲು ಸಲಹೆಗಳನ್ನು ನೀಡಿದೆ.

ನೇಗ್ಲೇರಿಯಾ ಫೌಲೇರಿ ಎಂಬುದು ಒಂದು ಸ್ವತಂತ್ರವಾಗಿ ಬದುಕುವ ಅಮೀಬಾ ಆಗಿದ್ದು, ಇದು ಮುಖ್ಯವಾಗಿ ಬೆಚ್ಚಗಿನ ಸಿಹಿನೀರು ಹಾಗೂ ಮಣ್ಣಿನಲ್ಲಿ ಕಂಡುಬರುತ್ತದೆ. ಉದಾಹರಣೆಗೆ ನಿಂತ ನೀರು, ಕೊಳ, ಈಜು ಕೊಳಗಳು ಹಾಗೂ ಕೆರೆಗಳು.

ಈ ಸೋಂಕು ವ್ಯಕ್ತಿಯಿಂದ ವ್ಯಕ್ತಿಗೆ ಅಥವಾ ಕಲುಷಿತಗೊಂಡ ನೀರನ್ನು ಕುಡಿಯುವುದರಿಂದ ಹರಡುವುದಿಲ್ಲ.ನೇಗ್ಲೇರಿಯಾ ಫೌಲರಿ ಅತ್ಯಂತ ವಿಷಕಾರಿ ಸೂಕ್ಷ ಜೀವಿಯಾಗಿದ್ದು, ನೀರಿನಿಂದ ಮೂಗಿಗೆ ಪ್ರವೇಶಿಸಿದಾಗ ಅದು ಮೆದುಳನ್ನು ತಲುಪಿ, ಅಮೀಬಿಕ್ ಮೆನಿಂಗೊಎನ್ಸೆಫಲೈಟಿಸ್ ಎನ್ನುವ ಅಪರೂಪದ ಗಂಭೀರ ಮತ್ತು ಮಾರಣಾಂತಿಕ ಖಾಯಿಲೆಯನ್ನು ಉಂಟುಮಾಡುತ್ತದೆ.

ನೀರಿನ ಸಂಪರ್ಕದ ಏಳು ದಿನಗಳ ಒಳಗೆ ಜ್ವರ ತೀವ್ರ ತಲೆನೋವು. ವಾಕರಿಕೆ, ವಾಂತಿ, ಕುತ್ತಿಗೆ ಬಿಗಿತ, ಗೊಂದಲ, ಮಾನಸಿಕ ಸ್ಥಿತಿಗಳಲ್ಲಿ ಬದಲಾವಣೆಗಳು ಹಾಗೂ ವ್ಯಕ್ತಿಯ ವರ್ತನೆಯಲ್ಲಿ ಅಸ್ವಸ್ಥತೆ (behavioural disorders) ಲಕ್ಷಣಗಳು ಕಾಣಿಸಿಕೊಂಡರೆ ನಿರ್ಲಕ್ಷಿಸದೆ ತುರ್ತು ಆರೈಕೆಯನ್ನು ಪಡೆಯಲು ಹತ್ತಿರದ ಸರ್ಕಾರಿ ಆಸ್ಪತ್ರೆ ಅಥವಾ ವೈದ್ಯರನ್ನು ಸಂಪರ್ಕಿಸುವಂತೆ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳ ಇಲಾಖೆಯ ಆಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ನರೇಗಾದಡಿ ಗೌರವಧನ ಪಾವತಿಗೆ ಅವಕಾಶ ಇಲ್ಲ: ಕೇಂದ್ರ • ಇವರು ನರೇಗಾ ಭಾಗ –ಪ್ರಿಯಾಂಕ್ ಖರ್ಗೆ

# ಕೂಸಿನ ಮನೆ 'ಆರೈಕೆದಾರ'ರಿಗೆ ಸಂಕಷ್ಟ

**ಕಲಬುರಗಿ:** ಉದ್ಯೋಗ ಖಾತ್ರಿ (ನರೇಗಾ) ಯೋಜನೆಯಡಿ ಕೆಲಸ ಮಾಡುವ ಕಾರ್ಮಿಕರ ಮಕ್ಕಳ ಆರೈಕೆಗಾಗಿ ರಾಜ್ಯ ಸರ್ಕಾರ ಆರಂಭಿಸಿದ್ದ 'ಕೂಸಿನ ಮನೆ' ಆರೈಕೆದಾರರಿಗೆ ನರೇಗಾದಡಿ ಗೌರವ ಧನ ನೀಡಲು ಅವಕಾಶ ಇಲ್ಲ ಎಂದು ಕೇಂದ್ರ ಸರ್ಕಾರ ರಾಜ್ಯ ಸರ್ಕಾರಕ್ಕೆ ತಿಳಿಸಿದೆ.

ಇದರಿಂದಾಗಿ ರಾಜ್ಯದಲ್ಲಿ ಕೂಸಿನ ಮನೆಯಲ್ಲಿ ಆರೈಕೆದಾರರಾಗಿ 7,358 ಕೂಲಿ ಕಾರ್ಮಿಕರಿಗೆ ಸಂಕಷ್ಟ ಎದುರಾಗಿದೆ. ನರೇಗಾ ಯೋಜನೆಯ ಕಾರ್ಮಿಕರ ಎಳೆಯ ಮಕ್ಕಳ ಪಾಲನೆ, ಆರೈಕೆಗಾಗಿ, 2023 ರಲ್ಲಿ ಕಾರ್ಯಕ್ರಮ ರೂಪಿಸಿದೆ.

ನೇಮಿಸಲಾಗಿದೆ ಇವರಿಗೆ ಸಾಮೂಹಿಕ ಕಾಮಗಾರಿಗಳಲ್ಲಿ ಪ್ರತ್ಯೇಕ ಎಸ್‌ಎಂಆರ್ (ನಾಮಿನಲ್ ಮಾಸ್ಟರ್ ರೋಲ್) ಸೃಜಿಸಿ, ಕೆಲಸದ ಸ್ಥಳದಲ್ಲಿ



ದೈನಂದಿನ ಹಾಜರಾತಿಯಿಂದ ವಿನಾಯಿತಿ ನೀಡಿದ್ದು ಗೌರವ ಧನವಾಗಿ ಕೂಲಿ ಪಾವತಿಸಲಾಗುತ್ತಿತ್ತು ಕಾಮಗಾರಿ ಇಲ್ಲದಿದ್ದಾಗ ಗ್ರಾಮ ಪಂಚಾಯಿತಿ ಅನುದಾನದಲ್ಲಿ ಗೌರವಧನ ಭರಿಸಲಾಗುತ್ತಿತ್ತು.

ನರೇಗಾದಲ್ಲಿ ಹೆಚ್ಚು ಮಾನವ ದಿನಗಳನ್ನು ಸೃಜಿಸಿದ ಗ್ರಾಮ ಪಂಚಾಯಿತಿಗಳ ವ್ಯಾಪ್ತಿಯಲ್ಲಿ 4.000 ಕೂಸಿನ ಮನೆಗಳನ್ನು ಸ್ಥಾಪಿಸಿತ್ತು.

### 'ಕೇಂದ್ರ ಸಚಿವರೊಂದಿಗೆ ಚರ್ಚೆ

ನರೇಗಾದಲ್ಲಿ ದುಡಿದು ಕೂಲಿ ಪಡೆಯುತ್ತಿದ್ದಾರೆ. ಕೂಸಿನ ಮನೆಯ ಆರೈಕೆದಾರರೂ ನರೇಗಾ ಭಾಗವೇ ಆಗಿದ್ದಾರೆ. ಆದ್ದರಿಂದ ಅವರಿಗೆ ಹಾಜರಾತಿಯಿಂದ ವಿನಾಯಿತಿ ನೀಡಲಾಗುತ್ತಿತ್ತು. ಕೇಂದ್ರ ಸರ್ಕಾರದ 1 ಅದೇಶ ಸರಿಯಿಲ್ಲ, ಕೇಂದ್ರ ಸಚಿವರನ್ನು ಭೇಟಿ ಮಾಡಿ ಚರ್ಚಿಸಿ ವಿನಾಯಿತಿ ನೀಡುವಂತೆ ಮನವಿ ಮಾಡಲಾಗುವುದು ಎಂದು ಗ್ರಾಮೀಣಾಭಿವೃದ್ಧಿ ಹಾಗೂ ಪಂಚಾಯತ್ ರಾಜ್ ಸಚಿವ ಪ್ರಿಯಾಂಕ್ ಖರ್ಗೆ ತಿಳಿಸಿದರು.

ಈಗ 'ಮನೆಗಳ ಸಂಖ್ಯೆ 3679 ಕ್ಕೆ ಇಳಿದಿದೆ 46,713 ಮಕ್ಕಳ ನೋಂದಣಿ ಆಗಿದೆ. ಕೆಲ ದಿನಗಳ ಹಿಂದೆ ಕೇಂದ್ರ ಗ್ರಾಮೀಣಾಭಿವೃದ್ಧಿ ಸಚಿವಾಲಯ

ರಾಜ್ಯದ ಗ್ರಾಮೀಣಾಭಿವೃದ್ಧಿ ಆಯುಕ್ತಾಲಯಕ್ಕೆ ಪತ್ರ ಬರೆದಿದ್ದು ಆರೈಕೆದಾರರ ಗೌರವಧನವನ್ನು ಉದ್ಯೋಗ ಖಾತ್ರಿ ಯೋಜನೆಯಡಿ ಭರಿಸಲು ನರೇಗಾ ಕಾಯ್ದೆಯ ಶೆಡ್ಯೂಲ್–2ರಲ್ಲಿ ಅವಕಾಶ

ಇಲ್ಲ' ಎಂದು ತಿಳಿಸಿದೆ. ಆದ್ದರಿಂದ ಆರೈಕೆದಾರರಿಗೆ ತಕ್ಷಣದಿಂದ ವಿನಾಯಿತಿ ರದ್ದು ಪಡಿಸುವಂತೆ ಸುತ್ತೋಲೆ ಹೊರಡಿಸಿದೆ.

# ಡಿ.12 ಕ್ಕೆ ಕಾಲಭೈರವಾಷ್ಟಮಿ

## ಶ್ರೀ ಕ್ಷೇತ್ರ ಆದಿಚುಂಚನಗಿರಿಯಲ್ಲಿ ಆಯೋಜನೆ ಬೈರವ ಮಾಲೆ, ಜೋಗಿ ದೀಕ್ಷೆ । ರಾಜ್ಯಮಟ್ಟದ ಭಜನಾ ಮೇಳ

**ಶಿವಮೊಗ್ಗ:** ಮಂಡ್ಯ ಜಿಲ್ಲೆಯ ನಾಗಮಂಗಲ ತಾಲೂಕಿನ ಶ್ರೀ ಕ್ಷೇತ್ರ ಆದಿಚುಂಚನಗಿರಿಯಲ್ಲಿ

ಡಿ.12ಕ್ಕೆ ಕಾಲಭೈರವಾಷ್ಟಮಿ ಪ್ರಯುಕ್ತ ಭೈರವಮಾಲೆ.ಜೋಗಿ ದೀಕ್ಷೆ, ರಾಜ್ಯಮಟ್ಟದ ಭಜನಾ ಮೇಳ ಸೇರಿದಂತೆ ಹಲವು ಸಾಂಸ್ಕೃತಿಕ ಕಾರ್ಯಕ್ರಮಳನ್ನು ಆಯೋಜಿಸಲಾಗಿದೆ. ಕಾರ್ಯಕ್ರಮದ ದಿವ್ಯ ಸಾನಿಧ್ಯವನ್ನು ಪರಮ ಪೂಜ್ಯ ಶ್ರೀ ಶ್ರೀ ಶ್ರೀ ಡಾ. ನಿರ್ಮಲಾನಂದನಾಥ ಮಹಾ ಸ್ವಾಮೀಜಿ ಸಾನಿಧ್ಯವಹಿಸಲಿದ್ದು, ಪ್ರಧಾನ ಕಾರ್ಯದರ್ಶಿಗಳಾದ ಪೂಜ್ಯ ಶ್ರೀ ಶ್ರೀ ಪ್ರಸನ್ನನಾಥ ಸ್ವಾಮೀಜಿ ದಿವ್ಯ ಉಪಸ್ಥಿತಿವಹಿಸುವರು. ಅಂದು ನಾಡಿನ ಗಣ್ಯರು, ಜನಪ್ರತಿನಿಧಿಗಳು, ವಿವಿಧ ಶಾಖಾ ಮಠದ ಶ್ರೀಗಳು ಭಾಗವಹಿಸುವರು. ಅಂದು ಬೆಳಗ್ಗೆ 6 ಗಂಟೆಗೆ ಕ್ಷೇತ್ರಾಧಿ ದೇವತೆಗಳ ಅಭಿಷೇಕ ಸೇರಿದಂತೆ ವಿವಿಧ ಪೂಜಾ ಮಹೋತ್ಸವಗಳು ಜರುಗಲಿದ್ದು, ಪೂಜ್ಯ ಮಹಾಸ್ವಾಮಿ ಅವರ ಅಮೃತಹಸ್ತದಿಂದ ಜೋಗಿ ದೀಕ್ಷೆಯನ್ನು ನೀಡಲಾಗುವುದು. 10 ಗಂಟೆಗೆ ಬಿಜಿಎಸ್ ಸಭಾಂಗಣದಲ್ಲಿ ಸಭಾ ಕಾರ್ಯಕ್ರಮ ನಡೆಸಲಾಗುವುದು. ಈ ಪವಿತ್ರ ದಿನದಂದು ಭಕ್ತರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಕಾರ್ಯಕ್ರಮ ಯಶಸ್ವಿಗೊಳಿಸಲು ಕೋರಲಾಗಿದೆ.

### ರಾಜ್ಯಮಟ್ಟದ ಭಜನಾ ಮೇಳ

ಶ್ರೀಕ್ಷೇತ್ರ ಆದಿಚುಂಚನಗಿರಿಯಲ್ಲಿ ಭಜನಾ ಮೇಳವನ್ನು ಆಯೋಜನೆ ಮಾಡಲಾಗಿದ್ದು, ಭಾಗವಹಿಸಲು ಆಸಕ್ತಿ ಹೊಂದಿರುವವರು ಡಿ.12ರ ಶುಕ್ರವಾರ ಬೆಳಗ್ಗೆ 7.30ಕ್ಕೆ ಹೆಸರು ನೋಂದಾಯಿಸಿಕೊಳ್ಳಬೇಕು. ಒಂದು ತಂಡದಲ್ಲಿ ಕನಿಷ್ಠ 8 ರಿಂದ 12 ಜನ ಭಾಗವಹಿಸಲು ಅವಕಾಶವಿರಲಿದ್ದು, ಭಾಗವಹಿಸುವವರು ಭಜನಾ ಪರಿಕರಗಳೊಂದಿಗೆ ಹಾಜರಿರಬೇಕು.

## ಆಹಾರಕ್ಕಾಗಿ ಬಂದ ಯುವಕನಿಗೆ ಗುಂಡೇಟು: ಸಾವು

ನವದೆಹಲಿ (ಪಿಟಿಐ): ಆಹ್ವಾನವಿಲ್ಲದಿದ್ದರೂ ಆಹಾರಕ್ಕಾಗಿ ವಿವಾಹ ಸಮಾರಂಭಕ್ಕೆ ಬಂದ 17 ವರ್ಷದ ಕೊಳೆಗೇರಿ ಯುವಕನನ್ನು ದೆಹಲಿಯ ಶಾಹದರಾದಲ್ಲಿ ಕೈಗಾರಿಕಾ ಭದ್ರತಾ ಪಡೆಯ (ಸಿಐಎಸ್‌ಎಫ್) ಹೆಡ್ ಕಾನ್‌ಸ್ಟೆಬಲ್ ಗುಂಡಿಕ್ಕಿ ಕೊಂದಿದ್ದಾರೆ. ಮಾನಸ ಸರೋವರ ಪಾರ್ಕ್ ಡಿಡಿಎ ಮಾರುಕಟ್ಟೆ ಸಮುದಾಯ ಕೇಂದ್ರದ ಬಳಿ ಶನಿವಾರ ಸಂಜೆ ನಡೆದ ವಿವಾಹ ಸಮಾರಂಭದಲ್ಲಿ ಈ ದುರ್ಘಟನೆ ಸಂಭವಿಸಿದೆ ಎಂದು ಪೊಲೀಸರು ಭಾನುವಾರ ತಿಳಿಸಿದ್ದಾರೆ.'ನ್ಯೂ ಮಾಡರ್ನ್ ಶಾಹದರಾ ನಿವಾಸಿಯಾದ ಯುವಕನಿಗೆ ಮದುವೆ ಸಮಾರಂಭದಲ್ಲಿ ಗುಂಡೇಟು ಬಿದ್ದಿದ್ದು, ಚಿಕಿತ್ಸೆಗಾಗಿಆತನನ್ನು ಆಸ್ಪತ್ರೆಗೆ ದಾಖಲಿಸಿದಾಗ. ಯುವಕ ಮೃತಪಟ್ಟಿರುವು–ದಾಗಿ ವೈದ್ಯರು ತಿಳಿಸಿದ್ದಾರೆ' ಎಂದು ಡಿಸಿಪಿ ಪ್ರಶಾಂತ್ ಗೌತಮ್ ಹೇಳಿದ್ದಾರೆ. 'ಆರೋಪಿಯನ್ನು ಉತ್ತರ ಪ್ರದೇಶದ ಕಾನ್ಪುರದ ಸಿಐಎಸ್‌ಎಫ್‌ನ ಹೆಡ್‌ಕಾನ್‌ಸ್ಟೆಬಲ್ ಎಂದು ಗುರುತಿಸಲಾಗಿದ್ದು, ಆತನನ್ನು ಬಂಧಿಸಲಾಗಿದೆ' ಎಂದಿದ್ದಾರೆ.

'ಮದುವೆ ನಡೆಯುತ್ತಿರುವುದನ್ನು ಗಮನಿಸಿದ ಯುವಕ, ಅಹಾರಕ್ಕಾಗಿ ಅಲ್ಲಿಗೆ ಬಂದಿದ್ದಾನೆ ಎಂದು ನಾವು ಭಾವಿಸಿದ್ದೇವೆ. ಆತ ಗೋಡೆ ಹಾರಿ ಬರುತ್ತಿದ್ದಂತೆ ಸ್ಥಳದಲ್ಲಿದ್ದವರು ತಡೆದರು. ಆಗ ಹೆಡ್ ಕಾನ್‌ಸ್ಟೆಬಲ್ ಕೋಪದಿಂದ ಗುಂಡು ಹಾರಿಸಿದ್ದಾರೆ' ಎಂದು ಪೊಲೀಸ್ ಅಧಿಕಾರಿಯೊಬ್ಬರು ತಿಳಿಸಿದ್ದಾರೆ.

# ಪಠ್ಯ ಪುಸ್ತಕಗಳಲ್ಲಿ 'ಭಗವದ್ಗೀತೆ' ಸೇರಿಸಲು ಕೇಂದ್ರಕ್ಕೆ ಎಚ್.ಡಿ. ಕುಮಾರಸ್ವಾಮಿ ಒತ್ತಾಯ!

**ಶಿವಮೊಗ್ಗ:** ಶಾಲಾ, ಕಾಲೇಜುಗಳು ಮತ್ತು ವಿಶ್ವವಿದ್ಯಾಲಯಗಳ ಪಠ್ಯಕ್ರಮದಲ್ಲಿ ಭಗವದ್ಗೀತೆಯನ್ನು ಸೇರಿಸಲು ಪ್ರಯತ್ನಿಸಲಾಗುವುದು. ಈ ಕುರಿತು ಕೇಂದ್ರ ಶಿಕ್ಷಣ ಸಚಿವ ಧರ್ಮೇಂದ್ರ ಪ್ರಧಾನ್ ಅವರೊಂದಿಗೆ ಚರ್ಚಿಸಲಾಗುವುದು ಎಂದು ಕೇಂದ್ರ ಬೃಹತ್ ಕೈಗಾರಿಕೆ ಮತ್ತು ಉಕ್ಕು ಸಚಿವ ಎಚ್‌ಡಿ ಕುಮಾರಸ್ವಾಮಿ ಹೇಳಿದ್ದಾರೆ.

ಭಾನುವಾರ ನಡೆದ ಭಗವದ್ಗೀತಾ ಅಭಿಯಾನ ಮಹಾಸಮರ್ಪಣೆ ಕಾರ್ಯಕ್ರಮದಲ್ಲಿ ಮಾಜಿ ಡಿಸಿಎಂ ಕೆ ಎಸ್ ಈಶ್ವರಪ್ಪ ಭಗವದ್ಗೀತೆಯನ್ನು ಪಠ್ಯಪುಸ್ತಕಗಳಲ್ಲಿ ಸೇರಿಸುವಂತೆ ಕುಮಾರಸ್ವಾಮಿ ಅವರಿಗೆ ಮನವಿ ಮಾಡಿದರು.ತದ ನಂತರ ಮಾತನಾಡಿದ ಕುಮಾರಸ್ವಾಮಿ, ಮುಂದಿನ ದಿನಗಳಲ್ಲಿ ಕ್ರಮಗಳನ್ನು ಪ್ರಾರಂಭಿಸುವುದಾಗಿ ಭರವಸೆ ನೀಡಿದರು.

ಶಾಲಾ ಮಕ್ಕಳಿಗೆ ಸರಿಯಾದ ಮಾರ್ಗದಲ್ಲಿ ಮಾರ್ಗದರ್ಶನ ನೀಡಲು ರಾಮಾಯಣ ಮತ್ತು ಮಹಾಭಾರತವನ್ನು ಕಲಿಸಬೇಕು. "ಸಮಾಜದಲ್ಲಿ ಹಿಂಸೆ, ಕಾನೂನುಬಾಹಿರ ಕೃತ್ಯಗಳು ಮತ್ತು ಅಶಾಂತಿ ದೈನಂದಿನ ವ್ಯವಹಾರವಾಗಿ ಮಾರ್ಪಟ್ಟಿರುವುದರಿಂದ ಮಕ್ಕಳಿಗೆ ಭಗವದ್ಗೀತೆ ಕಲಿಸುವುದು ಇಂದಿನ ಅಗತ್ಯವಾಗಿದೆ. ಸಮಾಜದಲ್ಲಿ ಶಾಂತಿ ಕಾಪಾಡಲು ಭಗವದ್ಗೀತೆ ಈ ಪೀಳಿಗೆಗೆ ಮಾರ್ಗದರ್ಶನದ ಬೆಳಕಾಗಿದೆ. ಪ್ರತಿಯೊಬ್ಬರೂ ಭಗವದ್ಗೀತೆಯ ಮೌಲ್ಯಗಳನ್ನು ಅಳವಡಿಸಿಕೊಳ್ಳಬೇಕು ಎಂದು ಅವರು ಹೇಳಿದರು.

ಭಗವದ್ಗೀತೆ ಭಾರತದಲ್ಲಿ ಹುಟ್ಟಿಕೊಂಡಿತು ಎಂಬುದು ಪ್ರತಿಯೊಬ್ಬ ಭಾರತೀಯ ಹೆಮ್ಮೆ



ಪಡುವ ವಿಷಯವಾಗಿದೆ.ಭಗವದ್ಗೀತೆಯ ಮೌಲ್ಯಗಳನ್ನು ಕಲಿಯಲು ಮತ್ತು ಅಳವಡಿಸಿಕೊಳ್ಳಲು ಎಲ್ಲರಿಗೂ ವೇದಿಕೆ ಒದಗಿಸುವುದರಿಂದ ಭಗವದ್ಗೀತೆ ಅಭಿಯಾನವನ್ನು ರಾಷ್ಟ್ರದಾದ್ಯಂತ ವಿಸ್ತರಿಸಬೇಕು ಎಂದು ಕೇರಳ ರಾಜ್ಯಪಾಲ ರಾಜೇಂದ್ರ ವಿಶ್ವನಾಥ್ ಅರ್ಲೇಕರ್ ತಿಳಿಸಿದರು.

ಸೋಂದಾ ಸ್ವರ್ಣವಲ್ಲಿ ಮಹಾಸಂಸ್ಥಾನದ ಪೀಠಾಧಿಪತಿ ಗಂಗಾಧರೇಂದ್ರ ಸರಸ್ವತಿ, ಭಗವದ್ಗೀತೆಯನ್ನು ಚಿಕ್ಕ ವಯಸ್ಸಿನಲ್ಲಿಯೇ ಕಲಿಸಿದಾಗ, ಅದು ಅಪರಾಧ ಪ್ರಮಾಣವನ್ನು ನಿಯಂತ್ರಿಸಲು ಸಹಾಯ ಮಾಡುತ್ತದೆ ಎಂದು ಹೇಳಿದರು.ಕೋಮು ಸೌಹಾರ್ದತೆಯನ್ನು ನಿರ್ಮಿಸುವುದು ಈ ಅಭಿಯಾನದ ಪ್ರಮುಖ ಧ್ಯೇಯವಾಗಿದೆ. ಇದು ರಾಷ್ಟ್ರೀಯ ಸಮಗ್ರತೆಯನ್ನು ತರುತ್ತದೆ ಮತ್ತು ದೇಶದ ವಿದ್ಯಾವಂತ ಯುವಕರಿಗೆ ಮಾರ್ಗದರ್ಶಕ ಬೆಳಕಾಗಿದೆ. ಭಗವದ್ಗೀತೆಯನ್ನು ಕಲಿಸುವ ಮಕ್ಕಳು ರಾಷ್ಟ್ರಕ್ಕೆ ಮಾರ್ಗದರ್ಶಕ ದೀಪಗಳಂತೆ ಇರುತ್ತಾರೆ ಎಂದರು.

ಜೀವನದ ಮೌಲ್ಯಗಳನ್ನು ತಿಳಿಯಲು ಭಗವದ್ಗೀತೆಯನ್ನು ಅಧ್ಯಯನ ಮಾಡಬೇಕು ಎಂದು ಮಾಜಿ ಮುಖ್ಯಮಂತ್ರಿ ಬಿ.ಎಸ್. ಯಡಿಯೂರಪ್ಪ ಹೇಳಿದರು.

ಇದು ಜೀವನದ ಎಲ್ಲಾ ಸಮಸ್ಯೆಗಳಿಗೆ ಪರಿಹಾರ ಒದಗಿಸುತ್ತದೆ. ಸಮಸ್ಯೆಗಳಿಗೆ ಎದುರಿ ಓಡಿಹೋಗಬಾರದು, ಧೈರ್ಯ, ಆತ್ಮವಿಶ್ವಾಸ ಮತ್ತು ಶಕ್ತಿಯಿಂದ ಅವುಗಳನ್ನು ಎದುರಿಸಬೇಕು ಎಂಬುದನ್ನು ಇದು ಕಲಿಸುತ್ತದೆ. ಆರೋಗ್ಯಕರ ಸಮಾಜಕ್ಕಾಗಿ, ಭಗವದ್ಗೀತೆ ಬಹಳ ಅವಶ್ಯಕವಾಗಿದೆ ಎಂದು ಅವರು ಹೇಳಿದರು.

# ಹೆಚ್ಚುವರಿ ಕ್ಲಾಸ್‌ಗಳಿಂದ ದೈಹಿಕ ಶಿಕ್ಷಣ ತರಗತಿಗಳಿಗೆ ಅಡ್ಡಿಪಡಿಸದಂತೆ ರಾಜ್ಯದ ಶಾಲೆಗಳಿಗೆ ನಿರ್ದೇಶನ

**ಬೆಂಗಳೂರು:** 10ನೇ ತರಗತಿಯ ವಿದ್ಯಾರ್ಥಿಗಳಿಗೆ ಆಟ ಮತ್ತು ದೈಹಿಕ ಶಿಕ್ಷಣ ತರಗತಿಗಳಿಗೆ ವಿಷಯ ಶಿಕ್ಷಕರು ಅಡ್ಡಿಪಡಿಸದಂತೆ ನೋಡಿಕೊಳ್ಳಿ ಎಂದು ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ ರಾಜ್ಯದ ಎಲ್ಲ ಪ್ರೌಢಶಾಲೆಗಳ ಶಿಕ್ಷಕರು ಮತ್ತು ಪ್ರಾಂಶುಪಾಲರಿಗೆ ಸೂಚನೆ ನೀಡಿದೆ.

10ನೇ ತರಗತಿಯ ವಿದ್ಯಾರ್ಥಿಗಳಿಗೆ ಆಟ ಮತ್ತು ದೈಹಿಕ ಶಿಕ್ಷಣದ ಕೊರತೆಯ ಬಗ್ಗೆ ಕೆಎಸ್‌ಸಿಪಿಸಿಆರ್ ಸದಸ್ಯರು ಪತ್ರ ಬರೆದ ನಂತರ ಶಿಕ್ಷಣ ಇಲಾಖೆಯಿಂದ ಈ ಸೂಚನೆಯನ್ನು ನೀಡಲಾಗಿದೆ.

ಕರ್ನಾಟಕ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗದ ಸದಸ್ಯ ಕೆ ಟಿ ತಿಪ್ಪೇಸ್ವಾಮಿ, "ಕಳೆದ ತಿಂಗಳು, ನಾನು ವಿವಿಧ ಶಾಲೆಗಳಿಗೆ ಭೇಟಿ ನೀಡಿ 10ನೇ ತರಗತಿಯ ವಿದ್ಯಾರ್ಥಿಗಳೊಂದಿಗೆ ಸಂವಾದ ನಡೆಸಿದ್ದೇನೆ. ಕ್ರೀಡಾ ಅವಧಿಯಲ್ಲಿ ಆಟವಾಡಲು ಅಥವಾ ದೈಹಿಕ ತರಗತಿಗಳನ್ನು ನಡೆಸುತ್ತಿಲ್ಲ ಎಂದು ವಿದ್ಯಾರ್ಥಿಗಳು ಆಯೋಗಕ್ಕೆ ತಿಳಿಸಿದ್ದಾರೆ. ಈ ದೈಹಿಕ ಶಿಕ್ಷಣ ತರಗತಿಗಳನ್ನು ಹೆಚ್ಚುವರಿ ತರಗತಿಗಳನ್ನು ನಡೆಸಲು ಮತ್ತು ಅವರ ಪಠ್ಯಕ್ರಮವನ್ನು ಪೂರ್ಣಗೊಳಿಸಲು ಇತರ ವಿಷಯದ ಶಿಕ್ಷಕರು ಬಳಸಿಕೊಳ್ಳುತ್ತಿರೆ" ಎಂದು ಹೇಳಿದ್ದಾರೆ.

ಇದು ತುಂಬಾ ದುಃಖಕರವಾಗಿದೆ ಏಕೆಂದರೆ ಬೋರ್ಡ್ ಪರೀಕ್ಷೆಗಳಿಗೆ ತಯಾರಿ ನಡೆಸಲು ದೈಹಿಕ ಚಟುವಟಿಕೆಗಳಲ್ಲಿ ತೊಡಗಿಸಿಕೊಳ್ಳುವುದು ಅಧ್ಯಯನದಲ್ಲಿ ತೊಡಗಿಸಿಕೊಳ್ಳುವಷ್ಟೇ ಮುಖ್ಯವಾಗಿದೆ. ಇದರ ಜೊತೆಗೆ, ವಿದ್ಯಾರ್ಥಿಗಳು



ಎಸ್‌ಎಸ್‌ಎಲ್‌ಸಿ ಪರೀಕ್ಷೆಗಳಲ್ಲಿ ಉತ್ತಮ ಅಂಕಗಳನ್ನು ಗಳಿಸುವಂತೆ ಪೋಷಕರಿಂದ ಒತ್ತಡಕ್ಕೊಳಗಾಗುತ್ತಾರೆ. ಆದ್ದರಿಂದ, ಶಿಕ್ಷಕರು ದೈಹಿಕ ಶಿಕ್ಷಣ ತರಗತಿಗಳನ್ನು ಹೆಚ್ಚುವರಿ ತರಗತಿಗಳಿಗೆ ಬಳಸಿಕೊಳ್ಳಬಾರದು ಎಂದು ಆದೇಶ ಹೊರಡಿಸುವಂತೆ ನಾನು ಶಿಕ್ಷಣ ಆಯುಕ್ತ ವಿಕಾಸ್ ಕಿಶೋರ್ ಅವರಿಗೆ ಪತ್ರ ಬರೆದಿದ್ದೇನೆ" ಎಂದು ಅವರು ತಿಳಿಸಿದರು.

ಪಠ್ಯಕ್ರಮ ಪೂರ್ಣಗೊಳಿಸುವ ಒತ್ತಡದಲ್ಲಿ ಶಿಕ್ಷಕರು

ಇಲಾಖೆಯ ಕಟ್ಟುನಿಟ್ಟಿನ ಆದೇಶ ಮತ್ತು ಮಕ್ಕಳ ಒಟ್ಟಾರೆ ಹಿತಾಸಕ್ತಿಯ ನಡುವೆ, ಶಿಕ್ಷಕರು ಡಿಸೆಂಬರ್ 15, 2025ರ ಮೊದಲು ತಮ್ಮ ವಿಷಯಗಳ ಪಠ್ಯಕ್ರಮವನ್ನು ಪೂರ್ಣಗೊಳಿಸುವ ಒತ್ತಡದಲ್ಲಿದ್ದಾರೆ.

"ಸಾಮಾಜಿಕ-ಆರ್ಥಿಕ ಸಮೀಕ್ಷೆಯ ದಿನಾಂಕ ವಿಸ್ತರಿಸಿದ್ದರಿಂದ ನಮ್ಮ ಹೆಚ್ಚಿನ ತರಗತಿ ಸಮಯವು ಅದರಲ್ಲಿ ಕಳೆದುಹೋಯಿತು. ಪರಿಣಾಮವಾಗಿ, ಡಿಸೆಂಬರ್ 15 ರೊಳಗೆ ಪಠ್ಯಕ್ರಮವನ್ನು ಪೂರ್ಣಗೊಳಿಸಲು ನಾವು ಒತ್ತಡದಲ್ಲಿದ್ದೇವೆ. ಈ ದಿನಾಂಕವು ಹೆಚ್ಚುವರಿ ಹತ್ತು ದಿನಗಳವರೆಗೆ ವಿಸ್ತರಿಸಬಹುದು. ಆದರೆ ಅದನ್ನು ಮೀರುವಂತಿಲ್ಲ. ಆದ್ದರಿಂದ, ನಾವು ಬೆಳಗ್ಗೆ ಮತ್ತು ಸಂಜೆ 45 ನಿಮಿಷಗಳ ಕಾಲ ಹೆಚ್ಚುವರಿ ತರಗತಿಗಳನ್ನು ತೆಗೆದುಕೊಳ್ಳಬೇಕಾಗುತ್ತದೆ. ಶನಿವಾರ ಮತ್ತು ಭಾನುವಾರ ಶಿಕ್ಷಕರ ಲಭ್ಯತೆಯನ್ನು ಅವಲಂಬಿಸಿರುತ್ತದೆ" ಎಂದು ಬೆಂಗಳೂರಿನ ಹೊರವಲಯದ ಸರ್ಕಾರಿ ಪ್ರೌಢಶಾಲೆಯ ಶಿಕ್ಷಕರೊಬ್ಬರು ಹೇಳಿದ್ದಾರೆ.

# ಶಿವಮೊಗ್ಗ ಕೇಂದ್ರ ಕಾರಾಗೃಹದ ಜೈಲು ಸಿಬ್ಬಂದಿ ಬಳಿ ಗಾಂಜಾ ಪತ್ತೆ, ಬಂಧನ



**ಶಿವಮೊಗ್ಗ:** ಶಿವಮೊಗ್ಗ ಕೇಂದ್ರ ಕಾರಾಗೃಹದ ಅಧಿಕಾರಿಗಳು, ಜೈಲಿಗೆ ಗಾಂಜಾ ಕಳ್ಳಸಾಗಣೆ ಮಾಡುವ ಸತತ ಎರಡು ಪ್ರಯತ್ನಗಳನ್ನು ವಿಫಲಗೊಳಿಸಿದರು.

ಬುಧವಾರ ಬಾಳೆಹಣ್ಣಿನ ಕಾಂಡಗಳೊಳಗೆ ಅಡಗಿಸಿಟ್ಟಿದ್ದ 123 ಗ್ರಾಂ ಗಾಂಜಾ ಮತ್ತು 40 ಸಿಗರೇಟ್‌ಗಳನ್ನು ಸಿಬ್ಬಂದಿ ವಶಪಡಿಸಿಕೊಂಡರು.

ಮರುದಿನ, ನಿಯಮಿತ ತಪಾಸಣೆಯ ಸಮಯದಲ್ಲಿ ಜೈಲು ಸಿಬ್ಬಂದಿ ಸಾತ್ವಿಕ್ (25) ಅವರಿಂದ 170 ಗ್ರಾಂ ಗಾಂಜಾವನ್ನು ವಶಪಡಿಸಿಕೊಳ್ಳಲಾಯಿತು. ಎರಡೂ ಪ್ರಕರಣಗಳನ್ನು ತುಂಗಾನಗರ ಪೊಲೀಸ್ ಠಾಣೆಯಲ್ಲಿ ದಾಖಲಿಸಲಾಗಿದೆ.

ಬುಧವಾರ ಮಧ್ಯಾಹ್ನ 2:15 ರ ಸುಮಾರಿಗೆ ಆಟೋ ಚಾಲಕನೊಬ್ಬ ಐದು ಬಾಳೆಹಣ್ಣಿನ ಗೊನೆಗಳನ್ನು ಮುಖ್ಯ ದ್ವಾರಕ್ಕೆ ತಂದು, ಜೈಲು ಕ್ಯಾಂಟೀನ್ ಸಿಬ್ಬಂದಿಯ ಸೂಚನೆಯ ಮೇರೆಗೆ ಕಳುಹಿಸಲಾಗಿದೆ ಎಂದು ಹೇಳಿದ್ದಾನೆ. ಕೆಎಸ್‌ಐಎಸ್‌ಎಫ್ ಇನ್ಸ್‌ಪೆಕ್ಟರ್ ಜಗದೀಶ್ ನೇತೃತ್ವದ ತಂಡ, ಪಿಎಸ್‌ಐ ಪ್ರಭು ಎಸ್ ಮತ್ತು ಸಿಬ್ಬಂದಿ ಸದಸ್ಯರಾದ ಪ್ರವೀಣ್ ಮತ್ತು ನಿರೂಪಾಬಾಯಿ ಅವರೊಂದಿಗೆ, ಗೊನೆಗಳನ್ನು ಪರಿಶೀಲಿಸಿದಾಗ ಬಾಳೆಹಣ್ಣಿನ ಕಾಂಡಗಳು ಟೊಳ್ಳಾಗಿರುವುದು ಕಂಡುಬಂದಿದೆ. ಅಧಿಕಾರಿಗಳು 123 ಗ್ರಾಂ ಗಾಂಜಾ ಮತ್ತು 40 ಸಿಗರೇಟ್‌ಗಳನ್ನು ಟೇಪ್‌ನಲ್ಲಿ ಸುತ್ತಿ ಕಾಂಡಗಳೊಳಗೆ ಮರೆಮಾಡಲಾಗಿತ್ತು. ಲೋಡ್ ಇಳಿಸಿದ ತಕ್ಷಣ ಆಟೋ ಚಾಲಕ ಹೊರಟುಹೋಗಿದ್ದಾನೆ ಮತ್ತು ಭಾಗಿಯಾಗಿರುವವರನ್ನು ಪತ್ತೆಹಚ್ಚುವ ಪ್ರಯತ್ನಗಳು ನಡೆಯುತ್ತಿವೆ ಎಂದು ಪೊಲೀಸರು ತಿಳಿಸಿದ್ದಾರೆ.

# ಹಣ ನೀಡುವಂತೆ ಸ್ನೇಹಿತ ಕಿರುಕುಳ; ನವವಿವಾಹಿತ ಮಹಿಳೆ ಆತ್ಮಹತ್ಯೆಗೆ ಶರಣು

**ಬೆಂಗಳೂರು:** ಹಣ ನೀಡುವತೆ ಸ್ನೇಹಿತನೊಬ್ಬ ನೀಡಿದ ಕಿರುಕುಳಕ್ಕೆ ನೊಂದು ನವವಿವಾಹಿತ ಮಹಿಳೆಯೊಬ್ಬರು ಆತ್ಮಹತ್ಯೆಗೆ ಶರಣಾಗಿರುವ ಘಟನೆ ನಗರದ ಕಮಲನಗರದಲ್ಲಿ ನಡೆದಿದೆ.

ಮೃತ ಮಹಿಳೆಯನ್ನ ವೈಷ್ಣವಿ ಎಂದು ಗುರ್ತಿಸಲಾಗಿದೆ. ಕೆಲ ದಿನಗಳ ಹಿಂದಷ್ಟೇ ವೈಷ್ಣವಿ ವಿಜಯ್ ಸಿ ಎಂಬುವವರನ್ನು ವಿವಾಹವಾಗಿದ್ದು, ದಂಪತಿಗಳು ಕಮಲನಗರದಲ್ಲಿ ವಾಸವಿದ್ದರು.

ಬುಧವಾರ ರಾತ್ರಿ 9.30 ರ ಸುಮಾರಿಗೆ ವೈಷ್ಣವಿ ತಮ್ಮ ಮನೆಯಲ್ಲಿ ಇಲಿ ಪಾಷಣ ಸೇವಿಸಿದ್ದು, ವಿಷ ಸೇವಿಸಿ ನಂತರ ಫೋಟೋವನ್ನು ವಾಟ್ಸಾಪ್‌ನಲ್ಲಿ ಪತಿಗೆ ಕಳುಹಿಸಿದ್ದಾರೆ.

ಕೂಡಲೇ ವಿಜಯ್ ಅವರು ನೆರೆಹೊರೆಯವರಿಗೆ ಮಾಹಿತಿ ನೀಡಿ, ಹತ್ತಿರದ ಆಸ್ಪತ್ರೆಗೆ ದಾಖಲಾಗುವಂತೆ ಮಾಡಿದ್ದಾರೆ. ಆದರೆ, ಚಿಕಿತ್ಸೆ ಫಲಕಾರಿಯಾಗದೆ ಗುರುವಾರ ಸಾವನ್ನಪ್ಪಿದ್ದಾರೆ.

ಇನ್‌ಸ್ಟಾಗ್ರಾಮ್‌ನಲ್ಲಿ ತರುಣ್ ರಾಜ್‌ಗೋಪಾಲ್ ಎಂಬ ವ್ಯಕ್ತಿಯಿಂದ ವೈಷ್ಣವಿ ನನಗೆ ಹಣ ನೀಡಬೇಕೆಂದು ಸಂದೇಶ ಕಳುಹಿಸಿದ್ದ. ನೀವು ಯಾರು ಎಂದು ಪ್ರಶ್ನಿಸಿದಾಗ, ಸರಿಯಾಗಿ ಪ್ರತಿಕ್ರಿಯೆ ನೀಡಲಿಲ್ಲ. ಎರಡು ಬಾರಿ ಕರೆ ಮಾಡಿದರೂ ಪ್ರತಿಕ್ರಿಯೆ ನೀಡಲಿಲ್ಲ. ಪತ್ನಿಯನ್ನು ಪ್ರಶ್ನಿಸಿದಾಗ ತರುಣ್ ಕಿರುಕುಳ ನೀಡುತ್ತಿದ್ದಾನೆ. ಹಣಕ್ಕಾಗಿ ಬೇಡಿಕೆ ಇಡುತ್ತಿದ್ದಾನೆಂದು ಹೇಳಿದಳು ಎಂದು ವಿಜಯ್ ಅವರು ಹೇಳಿಕೆ ನೀಡಿದ್ದಾರೆ.

ತರುಣ್ ಹಣಕ್ಕಾಗಿ ಬೇಡಿಕೆ ಇಡಲು ಕಾರಣ ಮತ್ತು ಅವರ ಸಂಬಂಧ ಏನು ಎಂಬುದನ್ನು ಕಂಡುಹಿಡಿಯಲು ಪ್ರಯತ್ನಿಸುತ್ತಿದ್ದೇವೆ ಎಂದು ಪೊಲೀಸರು ತಿಳಿಸಿದ್ದಾರೆ.

ಈ ಸಂಬಂಧ ಬಸವೇಶ್ವರನಗರ ಪೊಲೀಸ್ ಠಾಣೆಯಲ್ಲಿ ಆತ್ಮಹತ್ಯೆಗೆ ಪ್ರಚೋದನೆ ನೀಡಿದ ಪ್ರಕರಣ ದಾಖಲಾಗಿದ್ದು, ಹೆಚ್ಚಿನ ತನಿಖೆ ನಡೆಯುತ್ತಿದೆ.

# ಡಿ.03 ರಂದು ವಿಶ್ವ ವಿಕಲಚೇತನ ದಿನಾಚರಣೆ

**ಶಿವಮೊಗ್ಗ:** ಜಿಲ್ಲಾ ಸಮಗ್ರ ಶಿಕ್ಷಣ ಅಭಿಯಾನ ಯೋಜನೆಯಡಿ 2025-26 ನೇ ಸಾಲಿನಲ್ಲಿ ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಚೇರಿ ಹಾಗೂ ಕ್ಷೇತ್ರ ಸಂಪನ್ಮೂಲ ಕೇಂದ್ರ ಶಿವಮೊಗ್ಗ ಇವರ ಸಂಯುಕ್ತಾಶ್ರಯದಲ್ಲಿ ಡಿ.03 ರಂದು ಬೆಳಗ್ಗೆ 9.30 ರಿಂದ ನಗರದ ಬಿ.ಹೆಚ್. ರಸ್ತೆಯ (ಮೀನಾಕ್ಷಿ ಭವನ ಹತ್ತಿರ) ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನಲ್ಲಿ ವಿಶ್ವ ವಿಕಲಚೇತನರ ದಿನಾಚರಣೆಯನ್ನು "ಅನುಕಂಪ ಬೇಡಿ ಅವಕಾಶ ಕೊಡಿ" ಎಂಬ ಘೋಷವಾಕ್ಯದೊಂದಿಗೆ ಹಮ್ಮಿಕೊಳ್ಳಲಾಗಿದೆ.

# ಕಬ್ಬನ್‌ಪಾರ್ಕ್ Flower ಶೋ: ಅಪಾರ ಜನಸ್ತೋಮ

**ಬೆಂಗಳೂರು:** ಕಬ್ಬನ್ ಉದ್ಯಾನದಲ್ಲಿ ನಡೆಯುತ್ತಿರುವ ಪುಷ್ಪ ಪ್ರದರ್ಶನಕ್ಕೆ ವಾರಾಂತ್ಯದ ಶನಿವಾರದಂದು ಜನಸಾಗರವೇ ಹರಿದುಬಂದಿದ್ದು, ಪುಷ್ಪ ಪ್ರದರ್ಶನ ವೀಕ್ಷಣೆಗೆ ಬೆಳಗ್ಗೆಯಿಂದ ಸಂಜೆವರೆಗೆ ಸಾರ್ವಜನಿಕರ ನೂಕು ನುಗ್ಗಲು ಕಂಡು ಬಂದಿತ್ತು.

ಪುಷ್ಪ ಪ್ರದರ್ಶನದಲ್ಲಿ ಹೂವಿನ ರಥ, ಚಿಟ್ಟೆ, ಆನೆ, ಹುಲಿ ಹಾಗೂ ಡಾಲ್ಫಿನ್ ನೋಡುಗರ ಕಣ್ಮನ ಸೆಳೆಯುತ್ತಿದ್ದು, ಇವುಗಳು ಸೆಲ್ಫೀ ತಾಣವಾಗಿ ಮಾರ್ಪಟ್ಟಿವೆ.

ಕರ್ನಾಟಕ ಶಿಲ್ಪಕಲಾ ಅಕಾಡೆಮಿ ಮತ್ತು ಕನ್ನಡ ಲಲಿತಕಲಾ ಅಕಾಡೆಮಿ ವರ್ಣಚಿತ್ರಗಳನ್ನು ಪ್ರದರ್ಶಿಸುತ್ತಿದ್ದು, 100 ಕ್ಕೂ ಹೆಚ್ಚು ಮಳಿಗೆಗಳನ್ನು ಸ್ಥಾಪಿಸಿವೆ. ಇದಲ್ಲದೆ, ಸ್ಥಳದಲ್ಲಿರುವ ಆಹಾರ ಮಳಿಗೆಗಳು ಹಬ್ಬದ ವಾತಾವರಣವನ್ನು ಸೃಷ್ಟಿಸಿದೆ.

ಭಾನುವಾರ ರಜಾ ದಿನ ಆಗಿರುವುದರಿಂದ ಲಕ್ಷಾಂತರ ಜನ





ಪ್ರದರ್ಶನದ ವೀಕ್ಷಣೆಗೆ ಬರುವ ನಿರೀಕ್ಷೆಯಿದ್ದು, ಟಿಕೆಟ್ ವಿತರಣೆ ಮತ್ತು ವಾಹನಗಳ ಪಾರ್ಕಿಂಗ್ ವ್ಯವಸ್ಥೆಯಲ್ಲಿ ತೋಟಗಾರಿಕೆ ಇಲಾಖೆ ಸ್ವಲ್ಪ ಬದಲಾವಣೆ ಮಾಡಿದೆ.

ಕಳೆದ ಮೂರು ದಿನಗಳಿಂದ ಪುಷ್ಪ ಪ್ರದರ್ಶನದ ಸಮೀಪದಲ್ಲೇ ಪ್ರವೇಶ ಟಿಕೆಟ್‌ಗಳನ್ನು ವಿತರಿಸಲಾಗುತ್ತಿತ್ತು. ಆದರೆ, ಶನಿವಾರ ಒಂದು ಲಕ್ಷಕ್ಕೂ ಹೆಚ್ಚು ಜನಪುಷ್ಪಪ್ರದರ್ಶನ ವೀಕ್ಷಣೆಗೆ ಆಗಮಿಸಿದ್ದರಿಂದ ಕಬ್ಬನ್‌ಪಾರ್ಕ್ ಅಧಿಕಾರಿ, ಸಿಬ್ಬಂದಿ ತಬ್ಬಿಬ್ಬಿಗೆ ತುತ್ತಾಗಿದ್ದು, ನಿರ್ವಹಣೆಗೆ ಪರದಾಡಿದರು.

ಭಾನುವಾರ ಪುಷ್ಪ ಪ್ರದರ್ಶನಕ್ಕೆ ಆಗಮಿಸುವ ವೀಕ್ಷಕರಿಗೆ ಹಡನ್ ಸರ್ಕಲ್ ಗೇಟ್, ಯುಬಿ ಸಿಟಿ ಸರ್ಕಲ್ ಗೇಟ್, ಹೈಕೋರ್ಟ್ ಸಮೀಪದ ಗೇಟ್, ಅನಿಲ್ ಕುಂಬ್ಳೆ ವೃತ್ತದ ಗೇಟ್ ಮತ್ತು ಬಾಲಭವನ ಸಮೀಪದ ಗೇಟ್ ಬಳಿ ಟಿಕೆಟ್ ವಿತರಿಸಲು ವ್ಯವಸ್ಥೆ ಮಾಡಲಾಗಿದೆ. ಈ ವ್ಯವಸ್ಥೆ ಕೇವಲ ಭಾನುವಾರ ಮಾತ್ರ ಇರಲಿದೆ.

# ಅರೆ ಭಾಷೆಯಂತಹ ಪ್ರಾದೇಶಿಕ ಭಾಷೆಗಳು ಕನ್ನಡವನ್ನು ಶ್ರೀಮಂತಗೊಳಿಸಿದೆ



**ಬೆಂಗಳೂರು:** ಕನ್ನಡ ಭಾಷೆ ರಾಜ್ಯದ ಅಸ್ಮಿತೆಯ ತಳಹದಿಯಾಗಿದ್ದರೆ, ಅರೆಭಾಷೆಯಂತಹ ಪ್ರಾದೇಶಿಕ ಭಾಷೆಗಳು ಕನ್ನಡವನ್ನು ಶ್ರೀಮಂತಗೊಳಿಸಿದೆ ಎಂದು ಸಿಎಂ ಸಿದ್ದರಾಮಯ್ಯ ಭಾನುವಾರ ಹೇಳಿದರು.

ರವೀಂದ್ರ ಕಲಾಕ್ಷೇತ್ರದಲ್ಲಿ ಆಯೋಜಿಸಿದ್ದ 2024ನೇ ಸಾಲಿನ ಅರೆ ಭಾಷೆ ಅಕಾಡೆಮಿ ಗೌರವ ಪ್ರಶಸ್ತಿಯನ್ನು ಪ್ರದಾನ ಮಾಡಿ ಮಾತನಾಡಿದ ಮುಖ್ಯಮಂತ್ರಿ, ದಕ್ಷಿಣ ಕನ್ನಡ ಮತ್ತು ಕೊಡಗು ಜಿಲ್ಲೆಗಳಲ್ಲಿ ಅರೆಭಾಷೆ ಗೌಡರು ಹೆಚ್ಚಾಗಿ ವಾಸಿಸುತ್ತಿದ್ದು, ಇವರ ಜನಸಂಖ್ಯೆ ಮೂರು ಲಕ್ಷಕ್ಕೂ ಹೆಚ್ಚಿದೆ ಎಂದರು.

1882ನೇ ಗೆಜೆಟ್ ಬಂದಾಗ ಇವರು ಸಕಲೇಶಪುರದಲ್ಲಿದ್ದು, ಬರಗಾಲದ ಸಂದರ್ಭದಲ್ಲಿ ಹೇಮಾವತಿ ನದಿ ಬತ್ತಿದಾಗ ಪಕ್ಕದ ಜಿಲ್ಲೆ ಸುಳ್ಯಕ್ಕೆ ಬಂದು ನೆಲೆಯೂರುತ್ತಾರೆ. ತುಳು, ಕೊಂಕಣಿ ಜೊತೆಗೆ ಕನ್ನಡ ಸೇರಿ ಅರೆಭಾಷೆಯಾಗಿದೆ. ಹೋಗುತ್ತೇನೆ ಎನ್ನುವುದು ವೋನೆ, ಬರುತ್ತೇನೆ ಎನ್ನುವುದು ಬನೇ ಎಂದು ಹೇಳುತ್ತಾರೆ. ಹೀಗೆ ಕೆಲವು ಅಕ್ಷರಗಳು ಬಿಟ್ಟುಹೋಗಿ ಅರೆಭಾಷೆಯಾಗಿದೆ. ಮೂಲತ: ಗೌಡ ಸಮುದಾಯಕ್ಕೆ ಸೇರಿರುವ ಇವರನ್ನು ಅರೆಭಾಷೆ ಗೌಡರು ಎನ್ನುತ್ತಾರೆ. ಅರೆಭಾಷಿಕರದ್ದು ವಿಭಿನ್ನ ಸಂಸ್ಕೃತಿಯಾಗಿದೆ ಎಂದು ತಿಳಿಸಿದರು.

ಅರೆಭಾಷಿಕರಾಗಿದ್ದ ಕುರುಂಜಿ ವೆಂಕಟರಮಣ ಗೌಡರು ನನಗೆ ಪರಿಚಿತರು. ಕರ್ನಾಟಕದಲ್ಲಿ ಸುಮಾರು 230 ಸಣ್ಣ ಭಾಷೆಗಳಿವೆ. ಇವೆಲ್ಲವೂ ಕನ್ನಡದಿಂದಲೇ ಹುಟ್ಟಿದ್ದು, ಅರೆಭಾಷೆಯನ್ನು ಉಳಿಸಿ ಬೆಳೆಸುವ ಕೆಲಸವನ್ನು ಅಕಾಡೆಮಿ ಮಾಡಲಿ ಎಂದು ಆಶಿಸುತ್ತೇನೆ. ಭಾಗಮಂಡಲದಲ್ಲಿ ನಾಡಗೌಡ ಸಮುದಾಯಕ್ಕೆ ಒಂದು ಕೋಟಿ ರೂ.ಗಳನ್ನು ಹಿಂದೆ ಒದಗಿಸಲಾಗಿತ್ತು. ಪ್ರಸ್ತುತ ಇರುವ 50 ಲಕ್ಷ ರೂ.ಬೇಡಿಕೆಯನ್ನು ಸಹ ಈಡೇರಿಸಲಾಗುವುದು. ಇತರೆ ಬೇಡಿಕೆಗಳನ್ನು ಪರಿಶೀಲಿಸಿ ಪರಿಹಾರ ಒದಗಿಸಲಾಗುವುದು ಎಂದು ಸಿಎಂ ಹೇಳಿದರು.

ಮುಂದಿನ ಸಚಿವ ಸಂಪುಟ ಸಭೆಯಲ್ಲಿ ಅರೆಭಾಷೆ ಗೌಡರಿಗೆ ಮಡಿಕೇರಿಯಲ್ಲಿ ಜಮೀನು ಕೊಡಬೇಕೆನ್ನುವ ಪ್ರಸ್ತಾವನೆ ಇದ್ದು, ಇದನ್ನು ಈಡೇರಿಸಲಾಗುವುದು ಎಂದು ಮುಖ್ಯಮಂತ್ರಿ ಭರವಸೆ ನೀಡಿದರು.

# ರಾಜ್ಯದ ಜೇನು ಉತ್ಪಾದಕರ ಉಲ್ಲೇಖ, ಶ್ಲಾಘನೆ

**ತುಮಕೂರು/ಮಂಗಳೂರು:** ಪ್ರಧಾನಿ ನರೇಂದ್ರಮೋದಿ ಅವರು ಭಾನುವಾರ 'ಮನದ ಮಾತು' ಕಾರ್ಯಕ್ರಮದಲ್ಲಿ ರಾಜ್ಯದ ಎರಡು ಜೇನು ಉತ್ಪಾದಕ ಸಂಸ್ಥೆಗಳ ಸಾಧನೆ ಉಲ್ಲೇಖಿಸಿ ಶ್ಲಾಘಿಸಿದ್ದಾರೆ.

ತುಮಕೂರು ತಾಲ್ಲೂಕಿನ ಗೂಳೂರಿನಲ್ಲಿ ಮಹಿಳೆಯರೇ ಮುನ್ನಡೆಸುತ್ತಿರುವ 'ಶಿವಗಂಗಾ ಜೇನು ಕೃಷಿ- ರೈತ ಉತ್ಪಾದಕ ಸಂಸ್ಥೆ' ಹಾಗೂ ದಕ್ಷಿಣ ಕನ್ನಡ ಜಿಲ್ಲೆಯ ಪುತ್ತೂರಿನ ಗ್ರಾಮಜನ್ಯ ರೈತರ ಉತ್ಪಾದಕ ಕಂಪನಿಯ ಹೆಸರನ್ನು ಉಲ್ಲೇಖಿಸಿ ಪ್ರಧಾನಿ ಮೆಚ್ಚುಗೆ ಸೂಚಿಸಿದ್ದಾರೆ.

'ಶಿವಗಂಗಾ ಸಂಸ್ಥೆ ಮಹಿಳೆಯರಿಗೆ ಕೃಷಿ ವಿಜ್ಞಾನ ಕೇಂದ್ರದಿಂದ ತಲಾ 2 ಜೇನು ಪೆಟ್ಟಿಗೆ ವಿತರಿಸಲಾಗಿದೆ. ಮಹಿಳೆಯರು ಲಕ್ಷಾಂತರ ರೂಪಾಯಿ ಆದಾಯ ಗಳಿಸುತ್ತಿ-ದ್ದಾರೆ' ಎಂದು ಪ್ರಧಾನಿ ಶ್ಲಾಘಿಸಿದ್ದಾರೆ.

2022ರಲ್ಲಿ ಆರಂಭವಾದ ಶಿವಗಂಗಾ ಸಂಸ್ಥೆ ಧಾನ್ ಫೌಂಡೇಷನ್ ಸಹಕಾರದಲ್ಲಿ ನಡೆಯುತ್ತಿದೆ. ತಾಲ್ಲೂಕಿನ ಕೆ.ಪಾಲಸಂದ್ರ, ಗೂಳೂರು, ಹೆತ್ತೇನಹಳ್ಳಿ ಮತ್ತು ಹೆಬ್ಬರು ಗ್ರಾಮ ಪಂಚಾಯಿತಿ ವ್ಯಾಪ್ತಿಯ ಗ್ರಾಮಗಳ 300 ಜನ ರೈತ ಮಹಿಳೆಯರು ಸಂಸ್ಥೆಯಲ್ಲಿ ನೋಂದಣಿ ಮಾಡಿಕೊಂಡಿದ್ದಾರೆ.

'ಸಂಸ್ಥೆಯ ರೈತ ಮಹಿಳೆಯರು ಸದ್ಯ ವರ್ಷಕ್ಕೆ 1 ಸಾವಿರ ಕೆ.ಜಿ ಜೇನು ತುಪ್ಪ ಉತ್ಪಾದಿಸುತ್ತಿದ್ದಾರೆ' ಎಂದು ಸಂಸ್ಥೆ ಕಾರ್ಯನಿರ್ವಾಹಕ ನಿರ್ದೇಶಕ ಎನ್.ಕೆ.ವಸಂತಕುಮಾರ್ ತಿಳಿಸಿದರು.

**ಮಂಗಳೂರು ವರದಿ:** 'ಪುತ್ತೂರಿನ ಗ್ರಾಮಜನ್ಯ ಸಂಸ್ಥೆ ನಿಸರ್ಗದ ಕೊಡುಗೆಯಾದ ಜೇನುತುಪ್ಪಕ್ಕೆ ಹೊಸ ದಿಸೆ ತೋರಿಸಿದೆ. ಆಧುನಿಕ ಸಂಸ್ಕರಣಾ ಘಟಕ, ಪ್ರಯೋಗಾಲಯ, ಸಂಗ್ರಹಾಗಾರಗಳನ್ನು ಗ್ರಾಮಜನ್ಯ ಹೊಂದಿದೆ. ಗ್ರಾಮೀಣ ಪ್ರದೇಶದ ಈ ಜೇನುತುಪ್ಪವು ಬ್ರಾಂಡೆಡ್ ಉತ್ಪನ್ನವಾಗಿ ನಗರಗಳನ್ನು ತಲುಪುತ್ತಿದೆ. ಆಧುನಿಕ ಸಂಸ್ಕರಣಾ ಘಟಕ, ಪ್ರಯೋಗಾಲಯ, ಸಂಗ್ರಹಾಗಾರಗಳನ್ನು



ಗ್ರಾಮಜನ್ಯ ಹೊಂದಿದೆ.

ಗ್ರಾಮೀಣ ಪ್ರದೇಶದ ಈ ಜೇನುತುಪ್ಪವು ಬ್ರಾಂಡೆಡ್ ಉತ್ಪನ್ನವಾಗಿ ನಗರಗಳನ್ನು ತಲುಪುತ್ತಿದೆ. ಈ ಪ್ರಯತ್ನದಿಂದ ರೈತರಿಗೂ ಪ್ರಯೋಜನವಾಗಿದೆ' ಎಂದು ಪ್ರಧಾನಿ ಹೇಳಿದ್ದಾರೆ.

ಈ ಬಗ್ಗೆ ಸಂತಸ ವ್ಯಕ್ತಪಡಿಸಿದ ಸಂಸ್ಥೆಯ ನಿರ್ದೇಶಕ (ಕಾರ್ಯಾಚರಣೆ) ರಾಮಪ್ರತೀಕ್ ಕರಿಯಾಲ, 'ಇದರಿಂದ ನಮ್ಮ ಎಫ್‌ಪಿಒಗೆ ಹಾಗೂ ಅದರ ಚಟುವಟಿಕೆಗೆ ಉತ್ತೇಜನ ಸಿಗಲಿದೆ' ಎಂದರು.

'ಆತ್ಮನಿರ್ಭರ ಭಾರತ ಕಾರ್ಯಕ್ರಮದಡಿ ನಾವು ರೈತರ ಉತ್ಪಾದಕ ಕಂಪನಿಯನ್ನು 2020ರಲ್ಲಿ ಸ್ಥಾಪಿಸಿದೆವು. ಸಂಸ್ಥೆಯು 950 ಕೃಷಿಕರನ್ನು ಷೇರುದಾರ-ರನ್ನಾಗಿ ಹೊಂದಿದ್ದು,

ಅವರಲ್ಲಿ ಮೂರನೇ ಒಂದರಷ್ಟು ಮಂದಿ ಜೇನು ಕೃಷಿಯಲ್ಲಿ ತೊಡಗಿದ್ದಾರೆ. ಕೊಡಗು ಜಿಲ್ಲೆ ಹಾಗೂ ಕೇರಳದ ಕಾಸರಗೋಡು ಜಿಲ್ಲೆಯ ಜೇನು ಕೃಷಿಕರಿಂದಲೂ ಜೇನು ತುಪ್ಪ ಪಡೆಯುತ್ತೇವೆ' ಎಂದರು.

# 'ಏರೋಸ್ಪೇಸ್ ಮತ್ತು ರಕ್ಷಣಾ ಕ್ಷೇತ್ರದ ಜತೆಗೆ ಶಿಕ್ಷಣಿಕ ಒಪ್ಪಂದ

**ಬೆಂಗಳೂರು:** ಏರೋಸ್ಪೇಸ್ ಮತ್ತು ರಕ್ಷಣಾ ಕ್ಷೇತ್ರದ ಜತೆಗೆ ಶಿಕ್ಷಣಿಕ ಒಪ್ಪಂದಕ್ಕೆ ಸಹಕಾರ ನೀಡಲು ನಾವು ಸಿದ್ಧರಿರುವುದಾಗಿ ಭಾರತೀಯ ನೌಕಾಪಡೆಯ ನೌಕಾ ಶಸ್ತ್ರಾಸ್ತ್ರ ಮಹಾನಿರ್ದೇಶಕ ಪ್ರಕಾಶ ಉಪಾಧ್ಯಾಯ ಹೇಳಿದ್ದಾರೆ.

ಬೆಂಗಳೂರಿನ ನಾಗರಭಾವಿಯಲ್ಲಿರುವ ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾಲಯದ(ವಿಟಿಯು)

ಬೆಂಗಳೂರು ಪ್ರಾದೇಶಿಕ ಕಚೇರಿಗೆ ಭೇಟಿ ನೀಡಿದ ವೇಳೆ ಮಾತನಾಡಿದ ಅವರು, "ಏರೋಸ್ಪೇಸ್ ಮತ್ತು ರಕ್ಷಣಾ ಕ್ಷೇತ್ರದಲ್ಲಿ ಶೈಕ್ಷಣಿಕ ಒಪ್ಪಂದಗಳ ಅವಶ್ಯಕತೆ ಇದೆ.

ವಿಟಿಯು ಕುಲಪತಿ ಡಾ. ಎಸ್. ವಿದ್ಯಾಶಂಕರ್ ಅವರ ದೃಷ್ಟಿಪೂರ್ಣ ನಾಯಕತ್ವದಲ್ಲಿ, ವಿಟಿಯು ಮುದ್ದೇನಹಳ್ಳಿ ಕ್ಯಾಂಪಸ್‌ನಲ್ಲಿ ಏರೋಸ್ಪೇಸ್ ಮತ್ತು ರಕ್ಷಣಾ ಕ್ಷೇತ್ರಕ್ಕೆ ಸಂಬಂಧಿಸಿದ ಅತ್ಯುನ್ನತ ಕೇಂದ್ರ ಸ್ಥಾಪನೆಗೆ ಮುಂದಾಗಿದೆ. ಇದಕ್ಕೆ ಸಂಪೂರ್ಣ ಸಹಕಾರ ನೀಡುವುದಾಗಿ" ಭರವಸೆ ನೀಡಿದರು.




ವಿಟಿಯು ಸಂಶೋಧನೆ ಮತ್ತು ಅಭಿವೃದ್ಧಿ, ಏರೋಸ್ಪೇಸ್ ಮತ್ತು ರಕ್ಷಣಾ ನಿರ್ದೇಶಕ ಡಾ. ಕಮಾಂಡರ್ ದೇವೇಂದ್ರ ಸಿಂಗ್ ಮಾತನಾಡಿ, "ಶೈಕ್ಷಣಿಕ ಮತ್ತು ರಕ್ಷಣಾ ಇಲಾಖೆಯ ಅಗತ್ಯವನ್ನು ಹೆಚ್ಚಿದ್ದು, ಇದಕ್ಕೆ ರಕ್ಷಣಾ ಇಲಾಖೆಯ ಸಹಕಾರ ಅತ್ಯಗತ್ಯವಾಗಿದೆ. ಇದಕ್ಕಾಗಿ ವಿಟಿಯು ಮತ್ತು ಭಾರತೀಯ ನೌಕಾಪಡೆಯ ನಡುವೆ ಅಧಿಕೃತ ಶೈಕ್ಷಣಿಕ ಒಪ್ಪಂದ ಅಗತ್ಯವಿದೆ" ಎಂದರು.

ಭೇಟಿಯ ಭಾಗವಾಗಿ ಪ್ರಕಾಶ ಉಪಾಧ್ಯಾಯ ಅವರು ಸಂಶೋಧನಾ ಕೇಂದ್ರದಲ್ಲಿ ಅಭಿವೃದ್ಧಿಪಡಿಸಿದ ಹಾರ್ಡ್‌ವೇರ್ ಮತ್ತು ಸಾಫ್ಟ್‌ವೇರ್ ಆವಿಷ್ಕಾರಗಳ ಪ್ರದರ್ಶನವನ್ನು ವೀಕ್ಷಿಸಿದರು. ಸ್ಟಾರ್ಟ್‌ಅಪ್ ಪ್ರತಿನಿಧಿಗಳೊಂದಿಗೆ ನೇರ ಸಂವಾದ ನಡೆಸಿದರು.ವಿಟಿಯು ಬೆಂಗಳೂರು ಪ್ರಾದೇಶಿಕ ಕಚೇರಿಯ ವಿಶೇಷಾಧಿಕಾರಿ .ಡಾ. ಅಜಿತ್ ಪದ್ಯಾಣ ಇದ್ದರು.

"ಏರೋಸ್ಪೇಸ್ ಮತ್ತು ರಕ್ಷಣಾ ಕ್ಷೇತ್ರದಲ್ಲಿ ಶೈಕ್ಷಣಿಕ ಒಪ್ಪಂದಗಳ ಅವಶ್ಯಕತೆ ಇದೆ.

ವಿಟಿಯು ಕುಲಪತಿ ಡಾ. ಎಸ್. ವಿದ್ಯಾಶಂಕರ್ ಅವರ ದೃಷ್ಟಿಪೂರ್ಣ ನಾಯಕತ್ವದಲ್ಲಿ, ವಿಟಿಯು ಮುದ್ದೇನಹಳ್ಳಿ ಕ್ಯಾಂಪಸ್‌ನಲ್ಲಿ ಏರೋಸ್ಪೇಸ್ ಮತ್ತು ರಕ್ಷಣಾ ಕ್ಷೇತ್ರಕ್ಕೆ ಸಂಬಂಧಿಸಿದ ಅತ್ಯುನ್ನತ ಕೇಂದ್ರ ಸ್ಥಾಪನೆಗೆ ಮುಂದಾಗಿದೆ.

# ಇನ್‌ಕ್ಯೂಬೇಶನ್ ಕಾರ್ಯಗಾರ

**ಹಾಸನ :** ಸರ್ಕಾರಿ ಇಂಜಿನಿಯರಿಂಗ್ ಕಾಲೇಜಿನಲ್ಲಿ ನಡೆದ ಖಂಒಕ ಯೋಜನೆಯಡಿಯಲ್ಲಿ ಉದ್ದಿಮೆಗಳನ್ನು ಪ್ರಾರಂಭಿಸಲು ಹೆಚ್ಚಿನ ತಿಳುವಳಿಕೆ ನೀಡಲು ಅರಿವು ಮೂಡಿಸಲು ಆಯೋಜಿಸಿದ್ದ ಒಂದು ದಿನದ Incubation Centre ತೆರೆಯಲಿದ್ದು, ಕಾರ್ಯಾಗಾರದ ಸದುಪಯೋಗ ಪಡಿಸಿಕೊಳ್ಳಬೇಕೆಂದು ಟೆಕ್ಸಾಕ್ ಸಿಇಓ ಮತ್ತು ಮುಖ್ಯ ಸಲಹೆಗಾರರಾದ ಸಿದ್ದರಾಜುರವರು ತಿಳಿಸಿದ್ದಾರೆ.

ಹಾಸನ ಜಿಲ್ಲಾ ಕೈಗಾರಿಕೆಗಳ ಸಂಘದ ಉಪಾಧ್ಯಕ್ಷರಾದ ಪ್ರಕಾಶ್ ಯಾಜಿ ರವರು ಮಾತನಾಡಿ ದೇಶದಲ್ಲಿ 4 ಕೋಟಿಗಿಂತ ಹೆಚ್ಚಿನ ಎಂ.ಎಸ್.ಎಂ.ಇ ಉದ್ಯಮಗಳಿದ್ದು, ಸುಮಾರು 28 ಕೋಟಿ ಜನರಿಗೆ ಉದ್ಯೋಗವನ್ನು ನೀಡಿದ್ದು, ದೇಶದ ಆರ್ಥಿಕ ಉನ್ನತಿಗೆ ಮತ್ತು ಜಿ.ಡಿ.ಪಿ ಅಭಿವೃದ್ಧಿಗೆ ಸಹಕಾರಿಯಾಗಿದೆ ಎಂದರು.

ಎಫ್.ಕೆ.ಸಿ.ಸಿ.ಐ ನಿರ್ದೇಶಕರಾದ ಕಿರಣ್ ಹೆಚ್.ಎ ರವರು ಮಾತನಾಡಿ ಹಾಸನದಲ್ಲಿ ಇರುವ ಟಯೋಟ ಖಟಿಥಿಣಾಭಚಿಣುಡಿಟಿ ಟಚಿಥ ಮತ್ತು ಒಡಿಚಿರಿಜ ಪ್ರಾಜೆಕ್ಟ್ ಬಗ್ಗೆ ಅಧ್ಯಯನ ಮಾಡಲು ಜಿಲ್ಲೆಯಲ್ಲಿ ಹೊಸ ಕೈಗಾರಿಕೆಗಳು ಬರುವ ಬಗ್ಗೆ ಪ್ರಯತ್ನಿಸಬೆಕೆಂದು ತಿಳಿಸಿದರು.

ಕೆ.ಎಸ್.ಎಫ್.ಸಿ ಸಹಾಯಕ ಪ್ರಧಾನ ವ್ಯವಸ್ಥಾಪಕರಾದ ರವೀಂದ್ರನಾಥ್ ರವರು ಮಾತನಾಡಿ ಕರ್ನಾಟಕ ರಾಜ್ಯ ಹಣಕಾಸು ಸಂಸ್ಥೆಯ ವತಿಯಿಂದ ಹೊಸದಾಗಿ ಪ್ರಾರಂಭಿಸುವ ಎಂ.ಎಸ್.ಎಂ.ಇ ಗಳಿಗೆ ಕಡಿಮೆ ಬಡ್ಡಿ ದರದಲ್ಲಿ ಸಾಲ ಸೌಲಭ್ಯ ಒದಗಿಸುವ ಬಗ್ಗೆ ಹಾಗೂ ಹೆಚ್ಚಿನ ಪ್ರಯೋಜನ ಪಡೆದುಕೊಳ್ಳಬೇಕು ಎಂದರು.

ಜಿಲ್ಲಾ ಕೈಗಾರಿಕಾ ಕೇಂದ್ರದ ಜಂಟಿ ನಿರ್ದೇಶಕರಾದ ಉಮೇಶ್ ವಿ ರವರು ಖಂಒಕ ಯೋಜನೆಯಡಿಯಲ್ಲಿ ಇಂಜಿನಿಯರಿಂಗ್ ಕಾಲೇಜುಗಳಲ್ಲಿ Incubation Centre ತೆರೆಯುವುದರಿಮದ Startup ಯೋಜನೆಗಳು Eco System ಮತ್ತು ಹೊಸ ಬಗೆಯ ಉದ್ದಿಮೆಗಳ ಉತ್ತೇಜನಕ್ಕಾಗಿ ರಾಜ್ಯ ಸರ್ಕಾರ ಹಾಗೂ ಕೇಂದ್ರ ಸರ್ಕಾರದ ಯೋಜನೆಗಳನ್ನು ವಿವರಿಸಿದರು.

ಸರ್ಕಾರಿ ಇಂಜಿನಿಯರಿಂಗ್ ಕಾಲೇಜಿನ ಪ್ರಾಂಶುಪಾಲರಾದ ಗೀರೀಶ್ ಡಿ.ಪಿ ರವರು ಮಾತನಾಡಿ ಇಂಜಿನಿಯರಿಂಗ್ ವಿದ್ಯಾರ್ಥಿಗಳು ತಮ್ಮ ಕಾರ್ಯಕ್ಷಮತೆಯನ್ನು ಹೆಚ್ಚಿಸಿಕೊಳ್ಳುತ್ತ ಇಂದಿನ ವೇಗಗತಿಯಲ್ಲಿ ನಡೆಯುತ್ತಿರುವ ಕ್ರಾಂತಿಕಾರಕ ಬದಲಾವಣೆಯಾಗುತ್ತಿರುವ ಜಗತ್ತಿನಲ್ಲಿ ತಾವು ಸಮನಾಗಿ ಹೆಜ್ಜೆ ಹಾಕಬೇಕೆಂದು ತಿಳಿಸಿದರು.

ಈ ಕಾರ್ಯಗಾರದಲ್ಲಿ ಜಿಲ್ಲಾ ಕೈಗಾರಿಕಾ ಸಂಘದ ಅಧ್ಯಕ್ಷರಾದ ಶಿವರಾಮ್, ಕೈಗಾರಿಕಾ ಮತ್ತು ವಾಣಿಜ್ಯೋದ್ಯಮ ಸಂಸ್ಥೆ ಅಧ್ಯಕ್ಷರಾದ ಧನ್ ಪಾಲ್, ಲಘು ಉದ್ಯೋಗ ಭಾರತಿ ನಿರ್ದೇಶಕರಾದ ಮದನ್ ಕುಮಾರ್, ಸರ್ಕಾರಿ ಇಂಜಿನಿಯರಿಂಗ್ ಕಾಲೇಜಿನ ಪ್ರಾಧ್ಯಾಪಕರು ಮತ್ತು ಮುಖ್ಯಸ್ಥರಾದ ಡಾ॥ ಟಿ.ಜಿ ಬಸವರಾಜು, ಜಿಲ್ಲಾ ಕೈಗಾರಿಕಾ ಕೇಂದ್ರದ ಸಹಾಯಕ ನಿರ್ದೇಶಕರಾದ ಮೋಹನ್ ಕುಮಾರ್ ಬಿ ಅವರು ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದರು.

# ಕಾನೂನು ಪದವೀಧರರಿಂದ ಅರ್ಜಿ ಆಹ್ವಾನ

**ಹಾವೇರಿ:** ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಿಂದ ತರಬೇತಿಗೆ ಹಿಂದುಳಿದ ವರ್ಗಗಳ ಕಾನೂನು ಪದವಿಧರರಿಂದ ಅರ್ಜಿ ಆಹ್ವಾನಿಸಲಾಗಿದೆ.

ಅಭ್ಯರ್ಥಿಯು ಹಾವೇರಿ ಜಿಲ್ಲೆಯವರಾಗಿರಬೇಕು, ಪ್ರವರ್ಗ-1ರ ಅಭ್ಯರ್ಥಿಗಳ ವಯಸ್ಸು ಅರ್ಜಿ ಸಲ್ಲಿಸುವ ಕೊನೆಯ ದಿನಾಂಕಕ್ಕೆ 31 ವರ್ಷ ಹಾಗೂ ಇತರೆ ಪ್ರವರ್ಗಗಳ ಅಭ್ಯರ್ಥಿಗಳ ವಯಸ್ಸು 30 ವರ್ಷದೊಳಗಿರಬೇಕು. ಪ್ರವರ್ಗ-1ರ ಅಭ್ಯರ್ಥಿಗಳ ವಾರ್ಷಿಕ ಆದಾಯ ರೂ.3.50 ಲಕ್ಷದೊಳಗಿರಬೇಕು ಜಾತಿ ಪ್ರವರ್ಗ-2ಎ, 3ಎ, 3ಬಿ ಅಭ್ಯರ್ಥಿಗಳ ವಾರ್ಷಿಕ ಆದಾಯ ರೂ.2.50 ಲಕ್ಷದೊಳಗಿರಬೇಕು.

ತರಬೇತಿ ಅವಧಿ ನಾಲ್ಕು ವರ್ಷಗಳಾಗಿದ್ದು, ತರಬೇತಿ ಅವಧಿಯಲ್ಲಿ ಮಾಹೆಯಾನ ರೂ.4,000 ತರಬೇತಿ ಭತ್ಯೆ ನೀಡಲಾಗುವುದು. ಆಯ್ಕೆಯಾದ ಅಭ್ಯರ್ಥಿಗಳನ್ನು ಜಿಲ್ಲಾ ಪಬ್ಲಿಕ್ ಪ್ರಾಸಿಕ್ಯೂಟರ್, ಸರ್ಕಾರಿ ವಕೀಲರು ಅಥವಾ ಕನಿಷ್ಠ 20 ವರ್ಷಗಳ ವಕೀಲ ವೃತ್ತಿಯಲ್ಲಿ ಅನುಭವವುಳ್ಳ ಯಾವುದೇ ವಕೀಲರ ಅಧೀನದಲ್ಲಿ ತರಬೇತಿಗೆ ನಿಯೋಜಿಸಲಾಗುವುದು.

ಎಸ್.ಎಸ್.ಎಲ್.ಸಿ.ಅಂಕಪಟ್ಟಿ, ಕಾನೂನು ಪದವಿದಯಲ್ಲಿ ಪಡೆದ ಅಂಕಪಟ್ಟಿಗಳು, ಪಾಸಿಂಗ್ ಸರ್ಟಿಪೀಲೇಟ್ ಜಾತಿ ಮತ್ತು ಆದಾಯ ಪ್ರಮಾಣಪತ್ರ, ಬಾರ್ ಅಸೋಷಿಯೇನ್ ನೊಂದಾಯಿತ ಪ್ರಮಾಣಪತ್ರ ಸೇರಿದಂತೆ ಅಗತ್ಯ ದಾಖಲೆಗಳೊಂದಿಗೆ ಭರ್ತಿಮಾಡಿದ ಅರ್ಜಿಯನ್ನು ದಿನಾಂಕ 20-12-2025 ರೊಳಗಾಗಿ ಜಿಲ್ಲಾ ಅಧಿಕಾರಿಗಳು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಜಿಲ್ಲಾಡಳಿತ ಭವನ ಬಿ.ಬ್ಲಾಕ್, ರೂ.ನಂ.26 ಹಾವೇರಿ ಈ ವಿಳಾಸಕ್ಕೆ ಸಲ್ಲಿಸಬೇಕು. ಅವಧಿ ಮೀರಿಬಂದ ಅರ್ಜಿಗಳನ್ನು ಸ್ವೀಕರಿಸಲಾಗುವುದಿಲ್ಲ ಎಂದು ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಅಧಿಕಾರಿಗಳು ತಿಳಿಸಿದ್ದಾರೆ.

ಹೆಚ್ಚಿನ ಮಾಹಿತಿಗಾಗಿ ಕಚೇರಿ ದೂ.08375-249008 ಸಂಪರ್ಕಿಸಬಹುದೆಂದು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಸಹಾಯಧನ ಸೌಲಭ್ಯಕ್ಕೆ ಅರ್ಜಿ ಆಹ್ವಾನ

**ಹಾವೇರಿ:** ಕನ್ನಡ ಮತ್ತು ಸಂಸ್ಕೃತಿ ಇಲಾಖೆಯಿಂದ 2025-26 ನೇ ಸಾಲಿನ ಸಾಮಾನ್ಯ, ವಿಶೇಷ ಘಟಕ ಮತ್ತು ಗಿರಿಜನ ಉಪಯೋಜನೆಯಡಿ ನೋಂದಾಯಿತ ಸಂಘ-ಸಂಸ್ಥೆಗಳಿಗೆ ಧನಸಹಾಯ ನೀಡಲು ಹಾಗೂ ಕಲಾವಿದರಿಗೆ ವಾದ್ಯ ಪರಿಕರ ವೇಷಭೂಷಣಗಳ ಖರೀದಿಗೆ ಸಹಾಯಧನ ಹಾಗೂ ಚಿತ್ರಕಲೆ/ಶಿಲ್ಪ ಕಲಾಕೃತಿಗಳ ಪ್ರದರ್ಶನಕ್ಕೆ ಸಹಾಯಧನ ನೀಡಲು ಸೇವಾಸಿಂಧು ಮೂಲಕ ಅರ್ಜಿ ಆಹ್ವಾನಿಸಲಾಗಿದೆ.

ರಾಜ್ಯಾದ್ಯಂತ ಹಾಗೂ ಹೊರರಾಜ್ಯಗಳಲ್ಲಿ ಕ್ರೀಯಾತ್ಮಕ ಸಾಂಸ್ಕೃತಿಕ ಚಟುವಟಿಕೆಗಳ ಮೂಲಕ ನಾಡಿನ ಭಾಷಾ ಸಂವರ್ಧನೆ, ಕಲೆ, ಸಾಹಿತ್ಯ, ಸಂಗೀತ, ಜನಪದ, ನೃತ್ಯ, ನಾಟಕ ಕಲಾಪ್ರಕಾರಗಳು ಸೇರಿದಂತೆ ಇತರೆ ಕಲಾಪ್ರಕಾರಗಳನ್ನು ಉಳಿಸಿ ಬೆಳೆಸುವ ಸಲುವಾಗಿ ಸಹಾಯಧನ ಸೌಲಭ್ಯಕ್ಕೆ ಅರ್ಜಿ ಆಹ್ವಾನಿಸಲಾಗಿದೆ.

ಅರ್ಹ ಅಭ್ಯರ್ಥಿಗಳು Sevasindhu.karnataka.gov.in ಆನ್‌ಲೈನ್ ಮೂಲಕ ದಿನಾಂಕ 01-12-2025 ರಿಂದ 30-12-2025 ರೊಳಗಾಗಿ ಅರ್ಜಿ ಸಲ್ಲಿಸಬೇಕು.

ಸರ್ಕಾರದ ಆದೇಶ ಮಾರ್ಗಸೂಚಿಯನ್ನು ಸೇವಾಸಿಂಧು ಪೋರ್ಟಲ್ ಹಾಗೂ ಇಲಾಖೆಯ ವೆಬ್‌ಸೈಟ್: ತಿತಿತಿ. kannadasiri.karnataka.gov.in ನಲ್ಲಿ ಅಳವಡಿಸಲಾಗಿದೆ.

ಹೆಚ್ಚಿನ ಮಾಹಿತಿಗಾಗಿ 08024410547/ 8792662814/ 8792662816/08022213530/9986937037/9900337738/ 9448436877/ 9180197511/ 9916600027/08022241325 ನ್ನು ಹಾಗೂ ಆಯಾ ಜಿಲ್ಲೆಯ ಸಹಾಯಕ ನಿರ್ದೇಶಕರು, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಹಾಗೂ ಹಾವೇರಿ ಜಿಲ್ಲೆಯ ಸೇವಾಸಿಂಧು ವ್ಯವಸ್ಥಾಪಕರನ್ನು ಸಂಪರ್ಕಿಸಬಹುದಾಗಿದೆ.

ನಿಗಧಿತ ದಿನಾಂಕದ ನಂತರ ಸಲ್ಲಿಸುವ ಅರ್ಜಿಗಳನ್ನು ಪರಿಗಣಿಸಲಾಗುವುದಿಲ್ಲ ಹಾಗೂ ಅರ್ಜಿಗಳನ್ನು ನೇರವಾಗಿ ಇಲಾಖೆಯಲ್ಲಿ ಸ್ವೀಕರಿಸುವುದಿಲ್ಲ ಎಂದು ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ನಾಮನಿರ್ದೇಶನಗಳಿಗೆ ಅರ್ಜಿ ಆಹ್ವಾನ

**ಚಿತ್ರದುರ್ಗ:** ರಾಷ್ಟ್ರೀಯ ನೇರಳೆ ಉತ್ಸವ-ಕರ್ನಾಟಕ 2025ರ ನೇರಳೆ ಉತ್ಸವ ರಾಯಭಾರಿಗಳ ಆಯ್ಕೆ ನಾಮನಿರ್ದೇಶನಗಳಿಗೆ ಅರ್ಜಿ ಆಹ್ವಾನಿಸಲಾಗಿದೆ.

# ಮೋಬೈಲ್‌ನಲ್ಲಿ ಆಟವಾಡುವ ಬದಲು ಮೈದಾನದಲ್ಲಿ ಆಟ

## ಉತ್ತಮ ಆರೋಗ್ಯವನ್ನು ಹೊಂದಲು ಕ್ರೀಡೆ ಸಹಕಾರಿಯಾಗಿದೆ : ಡಿಪಿಇಓ ಚಿದಾನಂದಸ್ವಾಮಿ

**ಚಿತ್ರದುರ್ಗ:** ಮೋಬೈಲ್ನಲ್ಲಿ ಆಟವಾಡುವ ಬದಲು ಮೈದಾನದಲ್ಲಿ ಆಟವನ್ನು ಆಡುವುದರ ಮೂಲಕ ನಿಮ್ಮ ದೇಹಕ್ಕೆ ಚೈತ್ಯವನ್ನು ನೀಡುವುದರ ಮೂಲಕ ಉತ್ತಮ ಆರೋಗ್ಯವನ್ನು ಹೊಂದಲು ಕ್ರೀಡೆ ಸಹಕಾರಿಯಾಗಿದೆ ಎಂದು ಶಿಕ್ಷಣ ಇಲಾಖೆಯ ಡಿಪಿಇಓ ಚಿದಾನಂದಸ್ವಾಮಿ ತಿಳಿಸಿದ್ದಾರೆ.




ಚಿತ್ರದುರ್ಗ ನಗರದ ಒನಕೆ ಓಬವ್ವ ಕ್ರೀಡಾಂಗಣದಲ್ಲಿ ಶನಿವಾರ ನಡೆದ ನಗರದ ಶ್ರೀ ಪಾರ್ಶ್ವನಾಥ್ ವಿದ್ಯಾ ಸಂಸ್ಥೆಯ ವಾರ್ಷಿಕ ಕ್ರೀಡಾಕೂಟವನ್ನು ಉದ್ಘಾಟಿಸಿ ಮಾತನಾಡಿದ ಅವರು, ಇಂದಿನ ಮಕ್ಕಳು ಮೈದಾನದಲ್ಲಿ ಆಟವಾಡಿದ್ದಕ್ಕೆ ಬದಲಾಗಿ ತಮ್ಮ ಪೋಷಕರ ಮೊಬೈಲ್ನಲ್ಲಿ ಆಟವಾಡಿದ್ದು ಹೆಚ್ಚು ಮೊಬೈಲ್ನಲ್ಲಿ ಆಟವಾಡುವುದರಿಂದ ದೇಹಕ್ಕೆ ಯಾವುದೇ ಉಪಯೋಗವಾಗುವುದಿಲ್ಲ ಇದರ ಬದಲು ಮೈದಾನದಲ್ಲಿ ತಮಗೆ ಇಷ್ಟವಾದ ಆಟವನ್ನು ಆಡುವುದರ ಮೂಲಕ ನಮ್ಮ ದೇಹಕ್ಕೆ ಉತ್ತಮವಾದ ಆರೋಗ್ಯವನ್ನು ಪಡೆಯಲು ಅನುವು ಮಾಡಿಕೊಡುತ್ತದೆ ಈ ಹಿನ್ನಲೆಯಲ್ಲಿ ವಿದ್ಯಾರ್ಥಿಗಳು ತಾವುಗಳಿಸುವ ಅಂಕಗಳ ಜೊತೆಯಲ್ಲಿ ಕ್ರೀಡೆಗೂ ಸಹಾ ಹೆಚ್ಚಿನ ಒತ್ತನ್ನು ನೀಡಬೇಕಿದೆ ಎಂದರು.

ಕ್ರೀಡೆಯಿಂದ ಮಾನವನ ಜೀವನ; ಬದುಕು, ಭವಿಷ್ಯವನ್ನು ರೂಪಿಸಬಹುದಾಗಿದೆ. ಕ್ರೀಡೆಯಿಂದ ಉತ್ತಮವಾದ ಬದುಕನ್ನು ಸಹಾ ಪಡೆಯಬಹುದಾಗಿದೆ. ಇಂದಿನ ಜೀವನ ಶೈಲಿಯಿಂದ ಮಾನವ ಕ್ರೀಡೆಯನ್ನು ಮರೆಯುತ್ತಿದ್ದಾನೆ, ಹಿಂದಿನ ಕಾಲದಲ್ಲಿ ಮನೆ, ಹೊಲದಲ್ಲಿ ಕಷ್ಟ ಪಟ್ಟು ದುಡಿಮೆ ಮಾಡುತ್ತಿದ್ದರು, ಇದರಿಂದ ಅವರು ನೂರಾರು ವರ್ಷ ಬದುಕನ್ನು ನಡೆಸುತ್ತಿದ್ದರು, ಆದರೆ ಇಂದಿನ ದಿನಮಾನದಲ್ಲಿ ಎಲ್ಲಾ ಕೆಲಸಕ್ಕೂ ಸಹಾ ಯಂತ್ರಗಳ ಬಳಕೆ ಮಾಡುವುದರ ಮೂಲಕ ನಮ್ಮ ದೇಹಕ್ಕೆ ಕೆಲಸವನ್ನೇ ನೀಡುತ್ತಿಲ್ಲ, ಇದರಿಂದ ನಮ್ಮ ದೇಹದ ಆಯಸ್ಸು ಕಡಿಮೆಯಾಗುತ್ತದೆ ಈ ಹಿನ್ನೆಲೆಯಲ್ಲಿ ನಮ್ಮಗೆ ಇಷ್ಟವಾದ ಯಾವುದಾದರೊಂದು ಕ್ರೀಡೆಯಲ್ಲಿ ಸಕ್ರಿಯಾವಾಗಿ ಭಾಗವಹಿಸುವುದರ ಮೂಲಕ ತಮ್ಮ ದೇಹವನ್ನು ಚನ್ನಾಗಿ ಇಟ್ಟುಕೊಳ್ಳಬಹುದಾಗಿದೆ ಎಂದರು.

**ಕ್ರೀಡೆಯಿಂದ ಮಾನವನ ಜೀವನ; ಬದುಕು, ಭವಿಷ್ಯವನ್ನು ರೂಪಿಸಬಹುದಾಗಿದೆ. ಕ್ರೀಡೆಯಿಂದ ಉತ್ತಮವಾದ ಬದುಕನ್ನು ಸಹಾ ಪಡೆಯಬಹುದಾಗಿದೆ. ಇಂದಿನ ಜೀವನ ಶೈಲಿಯಿಂದ ಮಾನವ ಕ್ರೀಡೆಯನ್ನು ಮರೆಯುತ್ತಿದ್ದಾನೆ, ಹಿಂದಿನ ಕಾಲದಲ್ಲಿ ಮನೆ, ಹೊಲದಲ್ಲಿ ಕಷ್ಟ ಪಟ್ಟು ದುಡಿಮೆ ಮಾಡುತ್ತಿದ್ದರು, ಇದರಿಂದ ಅವರು ನೂರಾರು ವರ್ಷ ಬದುಕನ್ನು ನಡೆಸುತ್ತಿದ್ದರು, ಆದರೆ ಇಂದಿನ ದಿನಮಾನದಲ್ಲಿ ಎಲ್ಲಾ ಕೆಲಸಕ್ಕೂ ಸಹಾ ಯಂತ್ರಗಳ ಬಳಕೆ ಮಾಡುವುದರ ಮೂಲಕ ನಮ್ಮ ದೇಹಕ್ಕೆ ಕೆಲಸವನ್ನೇ ನೀಡುತ್ತಿಲ್ಲ, ಇದರಿಂದ ನಮ್ಮ ದೇಹದ ಆಯಸ್ಸು ಕಡಿಮೆಯಾಗುತ್ತದೆ.**

ಶಿಕ್ಷಣ ಇಲಾಖೆಯ ಸಿಆರ್‌ಪಿ ಶ್ರೀಮತಿ ಶ್ವೇತಾ ಮಾತನಾಡಿ, ವಿದ್ಯಾರ್ಥಿಗಳು ಪಾಠ ಮತ್ತು ಕ್ರೀಡೆಯನ್ನು ಸಮಾನವಾಗಿ ತೆಗೆದುಕೊಂಡು ಹೋಗಬೇಕಿದೆ, ಆಗ ಮಾತ್ರ ಜೀವನದಲ್ಲಿ ಏನನ್ನಾದರೂ ಸಾಧನೆಯನ್ನು ಮಾಡಲು ಸಾಧ್ಯವಿದೆ, ಬರೀ ಶಿಕ್ಷಣದಲ್ಲಿ ಮಾತ್ರವೇ ಸಾಧನೆಯನ್ನು ಮಾಡಲು ಸಾಧ್ಯ ಎನ್ನುವುದು ಬೇಡ ಕ್ರೀಡೆಯಲ್ಲಿಯೂ ಸಹಾ ಸಾಧನೆಯನ್ನು ಮಾಡಲು ಅವಕಾಶ ಇದೆ. ಕ್ರೀಡೆಯಲ್ಲಿ ಸಾಧನೆಯನ್ನು ಮಾಡಿದವರು ಇಂದು ಉನ್ನತವಾದ ಸ್ಥಾನದಲ್ಲಿದ್ದಾರೆ. ಅದೇ ರೀತಿ ನೀವುಗಳು ಸಹಾ ಕ್ರೀಡೆಯಲ್ಲಿ ಉತ್ತಮವಾದ ಸಾಧನೆಯನ್ನು ಮಾಡಿ ಮುಂದೆ ಉನ್ನತವಾದ ಸ್ಥಾನವನ್ನು ಪಡೆಯಿರಿ ಎಂದರು.

ಕಾರ್ಯಕ್ರಮದಲ್ಲಿ ನಿವೃತ್ತ ದೈಹಿಕ ಶಿಕ್ಷಣಾಧಿಕಾರಿ ಜಯ್ಯಣ್ಣ, ಪಾರ್ಶನಾಥ್ ವಿದ್ಯಾ ಸಂಸ್ಥೆಯ ಶಾಲಾ ಸಲಹಾ ಸಮಿತಿಯ ಸದಸ್ಯರಾದ ಪುಕ್ರಾಜ್ ಜೈನ್, ಉಪಾಧ್ಯಕ್ಷರಾದ ಮುಕೇಶ್ ಜೈನ್, ಸಹಾ ಕಾರ್ಯದರ್ಶಿ ಸುರೇಶ್ ಪಟ್ಟಿಯಾರ್, ಖಂಜಾಚಿ ರಾಜೇಂದ್ರ ಜೈನ್, ಸದಸ್ಯರಾದ ಚಮೇರಿಲಾಲ್ ಜೈನ್, ಆಶೀಕ ಕುಮಾರ್, ಪ್ರಾಥಮಿಕ ಶಾಲಾ ಮುಖ್ಯೋಪಾಧ್ಯಯರಾದ ನಾಜಿಮ ಸ್ವಲೇಯ, ಹಾಗೂ ಪ್ರೌಢಶಾಲಾ ಮಖ್ಯೋಪಾಧ್ಯಯರಾದ ಜನಕರೆಡ್ಡಿ ಸೇರಿದಂತೆ ಶಾಲಾ ಭೋದಕ ಮತ್ತು ಭೋದಕೇತರರು ಹಾಜರಿದ್ದರು.

# ಭತ್ತದ ಬೆಳೆಗೆ 'ಸೊಳೆರೋಗ'ದ ಕಾಟ

## ರೈತರಿಗೆ ರೋಗ ನಿಯಂತ್ರಣದ್ದೇ ಚಿಂತೆ; ಇಳುವರಿ ಕಡಿಮೆಯಾಗುವ ಆತಂಕ

**ಮಲೇಬೆನ್ನೂರು:** ಭದ್ರಾ ಅಚ್ಚುಕಟ್ಟು ವ್ಯಾಪ್ತಿಯಲ್ಲಿ ಭತ್ತದ ಬೆಳೆಯು ಕಾಳು ಕಟ್ಟುವ ಹಂತದಲ್ಲಿದ್ದು, ಸೊಳ್ಳೆ ರೋಗಬಾಧೆ (ಕಂದು ಜಿಗಿಹುಳು) ಅಲ್ಲಲ್ಲಿ ಕಾಣಿಸಿಕೊಳ್ಳುತ್ತಿದೆ ಎಂದು ರೈತರು ಆತಂಕ ವ್ಯಕ್ತಪಡಿಸಿದರು.



'ಪ್ರತಿ ಬಾರಿ ಭತ್ತದ ಒಕ್ಕಲು ಆರಂಭಕ್ಕೂ ಮುನ್ನ ಸೊಳ್ಳೆ ರೋಗ ಕಾಣಿಸಿಕೊಳ್ಳುವುದು ವಾಡಿಕೆ. ಪ್ರಸಕ್ತ ಮಳೆಗಾಲದ ಅಂತ್ಯದಲ್ಲಿ ಮಳೆ ಸುರಿದ ಕಾರಣ ಕಡಿಮೆ ಆಗಿತ್ತು. ಈಗ ಮಳೆ ನಿಂತಿದ್ದು, ಬಿಸಿಲು ಹೆಚ್ಚಾಗುತ್ತಿದೆ. ಮಂಜಿನೊಂದಿಗೆ ಮಾಗಿ ಚಳಿ ಕೂಡ ಬೀಳುತ್ತಿದೆ. ಮುಂಚಿತವಾಗಿ ನಾಟಿ ಮಾಡಿದ ಭತ್ತ ಕಾಳು ಕಟ್ಟುವ ಹಂತದಲ್ಲಿದೆ. ದೇವರಬೆಳಕೆರೆ ಅಚ್ಚುಕಟ್ಟಿನಲ್ಲಿ ಭತ್ತ ಒಣಗಿದ್ದು, ಕಟಾವು ಭರದಿಂದ ಆರಂಭವಾಗಿದೆ. ಕೆಲವು ಕಡೆ ಮಾತ್ರ ಸೊಳ್ಳೆರೋಗ ಕಾಣಿ-ಸಿಕೊಳ್ಳುತ್ತಿದೆ' ಎಂದು ರೈತ ಹೊಸಳ್ಳಿ ಕರಿಬಸಪ್ಪ ಮಾಹಿತಿ ನೀಡಿದರು.

ರೋಗ ನಿಯಂತ್ರಣಕ್ಕೆ ಮುಂಜಾಗ್ರತಾ ಕ್ರಮವಾಗಿ ಔಷಧೋಪಚಾರ ಅನಿವಾರ್ಯವಾಗಿದೆ' ಎಂದು ಕುಂಬಳೂರು ಗ್ರಾಮದ ರೈತ ಹನುಮಂತು ಬೇಸರ ವ್ಯಕ್ತಪಡಿಸಿದರು.

'ಸೊಳ್ಳೆರೋಗದಿಂದ ಇಳುವರಿ ಕುಸಿತ ನಿಶ್ಚಿತ. ಗದ್ದೆ ಒಣಗಿಸಿನೀರು ಕೊಡಬೇಕು. ಕಡಿಮೆನಿಟ್ಟೂರು ಗ್ರಾಮದ ಹೊರವಲಯದ ಭತ್ತದ ಗದ್ದೆಯಲ್ಲಿ ಸೊಳೆರೋಗ ನಿಯಂತ್ರಿಸಲು ಕ್ರಿಮಿನಾಶಕ ಸಿಂಪಡಣೆ ಮಾಡುತ್ತಿರುವ ಕೃಷಿ ಕಾರ್ಮಿಕರುನೀರು ಬಳಸಬೇಕು, ಕಡಿಮೆ ಪ್ರಮಾಣದ ಔಷಧೋಪಚಾರ ಮಾಡಬೇಕು'

ಎನ್ನುತ್ತಾರೆ ಅನುಭವಿ ರೈತ ನಂದಿತಾವರೆ ಗ್ರಾಮದ ಪೂಜಾರ ಗದ್ದಿಗೆಪ್ಪ,

'ಬೆಳೆ ಪರಿವರ್ತನೆಯಿಂದ ರೋಗ ನಿಯಂತ್ರಿಸಲು ಸಾಧ್ಯ' ಎನ್ನುತ್ತಾರೆ ಕುಂಬಳೂರಿನ ಶರಣ ಮುದ್ದಣ ಸಾವಯವ ಕೃಷಿಕರ ಬಳಗದ ಸಂಚಾಲಕ ಎನ್. ಆಂಜನೇಯ.

ಬೆಳೆ ಉಳಿಸಿಕೊಳ್ಳಲು ಕೃಷಿಕರು ಹಲವಾರು ಬಗೆಯ ಕ್ರಿಮಿನಾಶಕ ಬಳಸು-ತ್ತಿದ್ದಾರೆ. ಯಾಂತ್ರೀಕೃತ ಸಿಂಪಡಣೆ ದೃಶ್ಯ ಸಾಮಾನ್ಯವಾಗಿದೆ. ಔಷಧಿ ಸಿಂಪಡಣೆ ಮಾಡುವ ಕೃಷಿ ಕಾರ್ಮಿಕರಿಗೂ, ಯಂತ್ರಗಳಿಗೂ ಬೇಡಿಕೆ ಹೆಚ್ಚಾಗಿದೆ.

### ಸೊಳ್ಳೆರೋಗ ಎಂದರೇನು?

ನಾಟಿ ಮಾಡಿದ ಭತ್ತ ಕಾಳು ಕಟ್ಟುವ ಹಂತದಲ್ಲಿ ಹಸಿರು ಇರುವ ಬೆಳೆ ಕಂದು ಬಣ್ಣಕ್ಕೆ ತಿರುಗುವುದು ಇದನ್ನೇ ರೈತರು ಆಡುಭಾಷೆಯಲ್ಲಿ 'ಸೊಳ್ಳೆರೋಗ' ಎಂದು ಕರೆಯುವವರು. ಇದಕ್ಕೆ ಬಿಪಿಎಚ್ (ಭತ್ತಕ್ಕೆ ಕಂದು ಜಿಗಿಹುಳು) ಎಂದು ಕರೆಯುವವರು. ಈ ರೋಗ ಬಂದರೆ ತೆನೆ ಚನ್ನಾಗಿ ಕಂಡರೂ ಕಾಳುಗಟ್ಟುವುದಿಲ್ಲ. ಜೊಳ್ಳೆಜಾಸ್ತಿ ಆಗುವುದು.

**ಸಂಪೂರ್ಣ ರೋಗ ನಿಯಂತ್ರಣ ಕಷ್ಟ. ಬೆಳೆ ಪರಿವರ್ತನೆ, ಆಳ ಉಳುಮೆ, ಸಸಿ ತಯಾರಿ ವೇಳೆ ಬೀಜೋಪಚಾರ, ಕಡಿಮೆ ನೀರು, ಗೊಬ್ಬರ ಬಳಕೆ ಮಾಡುವುದರಿಂದ ರೋಗ ನಿಯಂತ್ರಿಸಬಹುದು.**

**ಹೇಮಂತ್, ಪ್ರಭಾರ ಸಹಾಯಕ ಕೃಷಿ ಅಧಿಕಾರಿ, ಮಲೇಬೆನ್ನೂರು**

# ಸೈನಿಕರ ಮಕ್ಕಳಿಗೆ ಶಿಷ್ಯವೇತನಕ್ಕೆ ಅರ್ಜಿ ಆಹ್ವಾನ

**ಹಾಸನ :** ವೃತ್ತಿಪರ ಪದವಿಗಳಾದ BE, BE (Lateral entry), B Tec, BDS, MBBS, BBA, BCA, B Sc(AG), B Pharma, MBA, MCA, B Ed, LLB ಇತ್ಯಾದಿ ಕೋರ್ಸುಗಳಲ್ಲಿ 2025-26ನೇ ಸಾಲಿಗಾಗಿ ಪ್ರಸಕ್ತ ವರ್ಷ ಪ್ರವೇಶ ಪಡೆದು ವ್ಯಾಸಂಗ ಮಾಡುತ್ತಿರುವ ಮಾಜಿ ಸೈನಿಕರ ಮಕ್ಕಳಿಗೆ ಪ್ರಧಾನ ಮಂತ್ರಿಗಳ ಶಿಷ್ಯವೇತನಕ್ಕಾಗಿ ಅರ್ಜಿಗಳನ್ನು ವೆಬ್ ಸೈಟ್ https://ksb.gov.in/index.htm ರಲ್ಲಿ ಆನ್‌ಲೈನ್ ಮೂಲಕ ಅರ್ಜಿಗಳನ್ನು ಆಹ್ವಾನಿಸಿದ್ದು ಅರ್ಹ ಅಭ್ಯರ್ಥಿಗಳು ಅರ್ಜಿಸಲ್ಲಿಸಿ ದಾಖಲಾತಿಗಳ ನೈಜತೆಯನ್ನು ಉಪ ನಿರ್ದೇಶಕರ ಕಾರ್ಯಾಲಯ, ಸೈನಿಕ ಕಲ್ಯಾಣ ಮತ್ತು ಪುನರ್ವಸತಿ ಇಲಾಖೆ, ಶಂಕರಿಪುರಂ, ಹಾಸನ ಇವರಲ್ಲಿ ಪರಿಶೀಲನೆಗಾಗಿ ಸಲ್ಲಿಸುವಂತೆ ಸೂಚಿಸಲಾಗಿದೆ. ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ ಡಿ.31 ಆಗಿರುತ್ತದೆ ಎಂದು ಸೈನಿಕ ಕಲ್ಯಾಣ ಮತ್ತು ಪುನರ್ವಸತಿ ಇಲಾಖೆಯ ಉಪ ನಿರ್ದೇಶಕರು ತಿಳಿಸಿದ್ದಾರೆ.

## ರಾಷ್ಟ್ರಮಟ್ಟದ ಸ್ಕೇಟಿಂಗ್ ಪಂದ್ಯಕ್ಕೆ ಆಯ್ಕೆ ಪ್ರಕ್ರಿಯೆ

**ಶಿವಮೊಗ್ಗ :-** ಜಿಲ್ಲಾ ರೋಲರ್ ಸ್ಕೇಟಿಂಗ್ ಅಸೋಸಿಯೇಷನ್ ನಿಂದ ಡಿಸೆಂಬರ್ 6 ಮತ್ತು 7 ರಂದು ರಾಜ್ಯಮಟ್ಟದ ಸ್ಕೇಟಿಂಗ್ ಪಟುಗಳನ್ನು ರಾಷ್ಟ್ರ ಮಟ್ಟದ ಸ್ಕೇಟಿಂಗ್ ಪಂದ್ಯಾವಳಿಗೆ ಆಯ್ಕೆ ಪ್ರಕ್ರಿಯೆಯನ್ನು ನಗರದ ಗೋಪಾಳದಲ್ಲಿರುವ ಕ್ರೀಡಾ ಸಂಕೀರ್ಣದಲ್ಲಿ ನಡೆಸಲಾಗುತ್ತಿದೆ.ಕರ್ನಾಟಕ ಸ್ಪೀಡ್ ಸ್ಕೇಟಿಂಗ್ ಅಸೋಸಿಯೇಷನ್ ಅವರು ರಾಜ್ಯಮಟ್ಟದ ಟೆನಾಸಿಟಿ, ಫ್ಯಾನ್ಸಿ ಇನ್‌ಲೈನ್, ಕ್ವಾಡ್, ಇನ್‌ಲೈನ್ ಸ್ಕೇಟಿಂಗ್ ಪಟುಗಳನ್ನು ಆಯ್ಕೆ ಮಾಡಿ ರಾಷ್ಟ್ರೀಯ ಮಟ್ಟದಲ್ಲಿ ಸ್ಕೇಟಿಂಗ್ ಕ್ರೀಡೆಗಳನ್ನು ನಡೆಸಲು ಉದ್ದೇಶಿಸಿದ್ದು, ಅದಕ್ಕೆ ಕ್ರೀಡಾಸಕ್ತರು ಭಾಗವಹಿಸಿ ಇದರ ಸದುಪಯೋಗ ಪಡೆಯಲು ಅಧ್ಯಕ್ಷ ಗಿರೀಶ್ ಮತ್ತು ಕಾರ್ಯದರ್ಶಿ ಕೆ.ಎಂ. ಶೇಖರ್ (ಬಾಬು) ಕೋರಿದ್ದಾರೆ. ಮಾಹಿತಿಗೆ ಮೊ. 7483885457, 9480294366 ರಲ್ಲಿ ಸಂಪರ್ಕಿಸಿ.

# ಶಾಲೆ, ಆಸ್ಪತ್ರೆ, ಬಸ್ ನಿಲ್ದಾಣ ಬಳಿಯ ಬೀದಿ ನಾಯಿಗಳ ಸ್ಥಳಾಂತರಕ್ಕೆ ಸುಪ್ರೀಂ ಆದೇಶ

**ನವದೆಹಲಿ:** ಶಿಕ್ಷಣ ಸಂಸ್ಥೆಗಳು, ಬಸ್ , ರೈಲು ನಿಲ್ದಾಣಗಳು ಮತ್ತು ಕ್ರೀಡಾ ಸೌಲಭ್ಯಗಳ ಬಳಿ ಇರುವ ಬೀದಿ ನಾಯಿಗಳನ್ನು ಸಂಪೂರ್ಣವಾಗಿ ತೆಗೆದುಹಾಕುವಂತೆ ಸುಪ್ರೀಂ ಕೋರ್ಟ್ ಮಹತ್ವದ ಆದೇಶ ನೀಡಿದೆ.



ಪ್ರಾಣಿಗಳ ಜನನ ನಿಯಂತ್ರಣ ನಿಯಮಗಳಿಗೆ ಅನುಸಾರವಾಗಿ ಲಸಿಕೆ ಮತ್ತು ಸಂತಾನಹರಣ ಶಸ್ತ್ರಚಿಕಿತ್ಸೆಯ ನಂತರ ಅವುಗಳನ್ನು ಆಶ್ರಯ ತಾಣಗಳಿಗೆ ಸ್ಥಳಾಂತರಿಸುವಂತೆ ನಿರ್ದೇಶ ನೀಡಿದೆ. ಸುಪ್ರೀಂಕೋರ್ಟ್ ನ್ಯಾಯಮೂರ್ತಿಗಳಾದ ವಿಕ್ರಮ್ ನಾಥ್, ಸಂದೀಪ್ ಮೆಹ್ತಾ ಮತ್ತು ಎನ್.ವಿ. ಅಂಜಾರಿಯಾ ಅವರಿದ್ದ ವಿಭಾಗೀಯ ಪೀಠವು,ಪ್ರಾಣಿಗಳನ್ನು ಸೆರೆಹಿಡಿದ ಸ್ಥಳಗಳಿಗೆ ಹಿಂತಿರುಗಿಸಬಾರದು.ಇದಕ್ಕೆ ಅವಕಾಶ ನೀಡುವುದರಿಂದ ಅಂತಹ ಸಂಸ್ಥೆಗಳನ್ನು ಬೀದಿ ನಾಯಿಗಳ ಉಪಟಳದಿಂದ ಮುಕ್ತಗೊಳಿಸುವ ಉದ್ದೇಶವೇ ವಿಫಲವಾಗುತ್ತದೆ ಎಂದು ಆದೇಶಿಸಿತು.

ಕಳೆದ ಜುಲೈ 28 ರಂದು ದಾಖಲಾಗಿದ್ದ ಸ್ವಯಂಪ್ರೇರಿತ ದೂರಿಗೆ ಸಂಭಂಧಿಸಿದಂತೆ ಬೀದಿ ನಾಯಿಗಳ ಹಾವಳಿ ಹೆಚ್ಚುತ್ತಿದ್ದು, ಇದರಲ್ಲಿ ಮಕ್ಕಳ ಕಚ್ಚುವಿಕೆ ಮತ್ತು ರೇಬೀಸ್ ಪ್ರಕರಣಗಳು ಮತ್ತು ಸಾವುಗಳ ಹೆಚ್ಚಳವೂ ಸೇರಿದೆ ಎಂದು ಮಾಧ್ಯಮ ವರದಿಯೊಂದು ತಿಳಿಸಿತ್ತು. ಎಲ್ಲಾ ರಾಜ್ಯಗಳು ಮತ್ತು ಕೇಂದ್ರಾಡಳಿತ ಪ್ರದೇಶಗಳು ತಮ್ಮ ವ್ಯಾಪ್ತಿಯಲ್ಲಿರುವ ಸಾರ್ವಜನಿಕ, ಖಾಸಗಿ ಶಿಕ್ಷಣ ಸಂಸ್ಥೆಗಳು, ಕ್ರೀಡಾ ಸಂಕೀರ್ಣಗಳನ್ನು ಗುರುತಿಸುವಂತೆ ಸುಪ್ರೀಂ ಕೋರ್ಟ್ ಸೂಚಿಸಿದೆ, ಆದರೆ ಎಲ್ಲಾ ಶಾಲೆಗಳು, ಕಾಲೇಜುಗಳು, ಆಸ್ಪತ್ರೆಗಳು, ಕ್ರೀಡಾ ಸೌಲಭ್ಯಗಳು ಮತ್ತು ಸರ್ಕಾರಿ ಸಂಸ್ಥೆಗಳಿಗೆ ಬೀದಿ ನಾಯಿಗಳು ಪ್ರವೇಶಿಸುವುದನ್ನು ತಡೆಯಲು ಸರಿಯಾಗಿ ಬೇಲಿ ಹಾಕಲಾಗಿದೆಯೆ ಎಂದು ಖಚಿತಪಡಿಸಿಕೊಳ್ಳಲು ಜಿಲ್ಲಾ ಮ್ಯಾಜಿಸ್ಟ್ರೇಗಳಿಗೆ (ಡಿಎಂ) ಸೂಚಿಸಲಾಗಿದೆ.ಜೊತೆಗೆ ಈ ಆವರಣದಲ್ಲಿ ಬೀದಿ ನಾಯಿಗಳು ಓಡಾಡುತ್ತಿಲ್ಲ ಎಂದು ಖಚಿತಪಡಿಸಿಕೊಳ್ಳಲು ನಿಯಮಿತವಾಗಿ ತಪಾಸಣೆ ನಡೆಸಬೇಕು ಎಂದು ನ್ಯಾಯಾಲಯ ಹೇಳಿದೆ.ಬಸ್ ನಿಲ್ದಾಣಗಳು ಸೇರಿದಂತೆ ಅಂತಹ ಸ್ಥಳಗಳಲ್ಲಿ ಕಂಡುಬರುವ ಯಾವುದೇ ಬೀದಿ ನಾಯಿಗಳನ್ನು ತೆಗೆದುಹಾಕಿ ಆಶ್ರಯ ತಾಣಗಳಿಗೆ ಸ್ಥಳಾಂತರಿಸಬೇಕು; ಅವುಗಳನ್ನು ಸೆರೆಹಿಡಿದ ಅದೇ ಸ್ಥಳಕ್ಕೆ ಹಿಂತಿರುಗಿಸಬಾರದು ಎಂದು ಅದು ಹೇಳಿದೆ. ಕಳೆದ ತಿಂಗಳು, ಇದೇ ಮೂವರು ನ್ಯಾಯಾಧೀಶರ ಪೀಠವು ಪಶ್ಚಿಮ ಬಂಗಾಳ ಮತ್ತು ತೆಲಂಗಾಣ ಹೊರತುಪಡಿಸಿ ರಾಜ್ಯಗಳು ಮತ್ತು ಕೇಂದ್ರಾಡಳಿತ ಪ್ರದೇಶಗಳನ್ನು ಬೀದಿ ನಾಯಿಗಳ ಹಾವಳಿಯ ಬಗ್ಗೆ ಕ್ರಮ ಕೈಗೊಳ್ಳದಿದ್ದಕ್ಕಾಗಿ ತೀವ್ರವಾಗಿ ತರಾಟೆಗೆ ತೆಗೆದುಕೊಂಡಿತ್ತು. ಪ್ರಾಣಿಗಳ ಜನನ ನಿಯಂತ್ರಣ (ಎಬಿಸಿ) ನಿಯಮಗಳನ್ನು ಜಾರಿಗೆ ತರಲು ತೆಗೆದುಕೊಂಡ ಕ್ರಮಗಳ ಕುರಿತು ಅನುಸರಣಾ ಅಫಿಡವಿಗಳನ್ನು ಸಲ್ಲಿಸಲು ವಿಫಲವಾದ ಮುಖ್ಯ ಕಾರ್ಯದರ್ಶಿಗಳಿಗೆ ಸಮನ್ಸ್ ಜಾರಿ ಮಾಡಿತುನಿಯಮಗಳನ್ನು ಪಾಲಿಸದಿರುವ ಬಗ್ಗೆ ತೀವ್ರ ಅಸಮಾಧಾನ ವ್ಯಕ್ತಪಡಿಸಿದ ಸುಪ್ರೀಂ ಕೋರ್ಟ್, ಬೀದಿ ನಾಯಿಗಳ ದಾಳಿಯ ಘಟನೆಗಳು "ವಿದೇಶಿ ರಾಷ್ಟ್ರಗಳ ಮುಂದೆ ದೇಶವನ್ನು ಕೆಟ್ಟದಾಗಿ ತೋರಿಸುತ್ತಿವೆ" ಎಂದು ಪರೋಕ್ಷವಾಗಿ ಅಸಮಾಧಾನ ಹೊರಹಾಕಿತ್ತು.

# ಮಾ/ಮಧು ಎಂ.ಆರ್.ಗೆ ಹೊಯ್ಸಳ ಶೌರ್ಯ ಪ್ರಶಸ್ತಿ




**ಶಿವಮೊಗ್ಗ:** 2025-26 ನೇ ಸಾಲಿನಲ್ಲಿ ಹೊಯ್ಸಳ ಮತ್ತು ಕೆಳದಿ ಚೆನ್ನಮ್ಮ ಶೌರ್ಯ ಪ್ರಶಸ್ತಿ ಯೋಜನೆಯಡಿ 6 ರಿಂದ 18 ವರ್ಷದೊಳಗಿನ ಮಕ್ಕಳು ತಮ್ಮ ಪ್ರಾಣದ ಹಂಗನ್ನು ತೊರೆದು ಹಾಗೂ ಸಮಯ ಪ್ರಜ್ಞೆಯಿಂದ ಇತರರ ಪ್ರಾಣದ ರಕ್ಷಣೆಗಾಗಿ ಧೈರ್ಯ

ಸಾಹಸ ಪ್ರದರ್ಶಿಸಿದ ಬಾಲಕರಿಗೆ "ಹೊಯ್ಸಳ" ಶೌರ್ಯ ಪ್ರಶಸ್ತಿಗೆ ಶಿವಮೊಗ್ಗ ನಗರದ ಸಾಗರ ತಾಲೂಕಿನ ಆನಂದಪುರ, ಯಡೆಹಳ್ಳಿಯ ಮಾ॥ ಮಧು ಎಂ.ಆರ್. ಇವನಿಗೆ ನ. 28 ರಂದು ಬೆಂಗಳೂರಿನಲ್ಲಿ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯಿಂದ

ನಡೆದ ಐ.ಸಿ.ಡಿ.ಎಸ್. ಯೋಜನೆಯ ಸುವರ್ಣ ಮಹೋತ್ಸವ ಹಾಗೂ ಮಕ್ಕಳ ದಿನಾಚರಣೆ ಕಾರ್ಯಕ್ರಮದಲ್ಲಿ ರಾಜ್ಯ ಮಟ್ಟದ ಹೊಯ್ಸಳ ಪ್ರಶಸ್ತಿ ನೀಡಿ ಗೌರವಿಸಿ ಸನ್ಮಾನಿಸಲಾಗಿದೆ ಎಂದು ಇಲಾಖೆಯ ಉಪ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿರುತ್ತಾರೆ.

# ರೈತ ಸುರಕ್ಷಾ ಪ್ರಧಾನ ಮಂತ್ರಿ ಫಸಲ್ ಭಿಮಾ ಯೋಜನೆ ಅನುಷ್ಠಾನ

**ಚಿಕ್ಕಮಗಳೂರು:** ಸರ್ಕಾರವು 2025-26ರ ಹಿಂಗಾರು ಹಂಗಾಮಿಗೆ ಸರ್ಕಾರದ ಆದೇಶದಂತೆ ಜಿಲ್ಲೆಯಲ್ಲಿ ಕರ್ನಾಟಕ ರೈತ ಸುರಕ್ಷಾ ಪ್ರಧಾನ ಮಂತ್ರಿ ಫಸಲ್ ಭೀಮಾ (ವಿಮಾ) ಯೋಜನೆಯಡಿ ಆಯ್ದ ಬೆಳೆಗಳನ್ನು ಹೋಬಳಿ ಮಟ್ಟಕ್ಕೆ ಅಳವಡಿಸಿ ಅನುಷ್ಠಾನಗೊಳಿಸಲು ಮಂಜೂರಾತಿ ನೀಡಲಾಗಿದೆ.

ಚಿಕ್ಕಮಗಳೂರು ತಾಲೂಕಿನ ಅಂಬಳೆ ಹೋಬಳಿ ಮತ್ತು ಕಡೂರು ತಾಲ್ಲೂಕಿನ ಕಸಬಾ ಮತ್ತು ಬೀರೂರು ಹೋಬಳಿಗಳಲ್ಲಿ ಟೊಮ್ಯಾಟೊ ಬೆಳೆಯನ್ನು ಅಧಿಸೂಚಿಸಲಾಗಿದ್ದು, ಈ ಯೋಜನೆಯಡಿ ಬೆಳೆಗಳ ಬಿತ್ತನೆಯಿಂದ ಕಟಾವು ಹಂತದವರೆಗೆ ಸಂಭವಿಸುವ ಬೆಳೆ ನಷ್ಟಗಳಿಗೆ ಪರಿಹಾರ ಒದಗಿಸಲು ಅವಕಾಶ ಕಲ್ಪಿಸಲಾಗಿದೆ.

ಬೆಳೆ ಸಾಲ ಪಡೆದ ರೈತರು ಕಡ್ಡಾಯವಾಗಿ ವಿಮಾ ಯೋಜನೆಗೆ ಒಳಪಡುತ್ತಾರೆ. ಒಂದು ವೇಳೆ ಬೆಳೆ ಸಾಲ ಪಡೆದ ರೈತರಿಗೆ ವಿಮಾ ಯೋಜನೆಯಡಿ ಒಳಪಡಲು ಇಚ್ಛೆ ಇಲ್ಲದಿದ್ದಲ್ಲಿ, ಈ ಬೆಳೆಯ ವಿಮಾ ನೋಂದಣಿ ಕೊನೆಯ ದಿನಾಂಕಕ್ಕಿಂತ 7 ದಿನಗಳ ಮುಂಚಿತವಾಗಿ ರೈತರು ಸಂಬಂಧಿಸಿದ ಬ್ಯಾಂಕ್ ವ್ಯವಸ್ಥಾಪಕರಿಗೆ ವಿಮಾ ಯೋಜನೆಯಿಂದ ಕೈಬಿಡುವಂತೆ ಮನವಿ ಸಲ್ಲಿಸಬೇಕು.

ಬೆಳೆ ಸಾಲ ಪಡೆಯದ ರೈತರು ಅರ್ಜಿಯೊಂದಿಗೆ ಪ್ರಸಕ್ತ ಸಾಲಿನ ಪಹಣಿ, ಖಾತೆ ಪುಸ್ತಕ, ಕಂದಾಯ ರಶೀದಿ, ಆಧಾರ್ ಜೋಡಣೆಯಾಗಿರುವ ಬ್ಯಾಂಕ್ ಪಾಸ್ ಪುಸ್ತಕ,

ಆಧಾರ್ ಕಾರ್ಡ್ ಮತ್ತು ಎಫ್‌ಐಡಿ ಸಂಖ್ಯೆಯೊಂದಿಗೆ ಬ್ಯಾಂಕ್, ಡಿಜಿಟಲ್ ಸೇವಾ ಕೇಂದ್ರ, ಸಾಮಾನ್ಯ ಸೇವಾ ಕೇಂದ್ರ ಅಥವಾ ಗ್ರಾಮ ಒನ್ ಕೇಂದ್ರಗಳಲ್ಲಿ ವಿಮಾ ಯೋಜನೆಗೆ ಡಿಸೆಂಬರ್ 1 ರೊಳಗೆ ನೋಂದಣಿ ಮಾಡಿಕೊಳ್ಳಬಹುದು.

2025ನೇ ಸಾಲಿನ ಹಿಂಗಾರು ಕರ್ನಾಟಕ ರೈತ ಸುರಕ್ಷಾ ಪ್ರಧಾನ ಮಂತ್ರಿ ಫಸಲ್ ಭಿಮಾ (ವಿಮಾ) ಯೋಜನೆಯಡಿ ಬೆಳೆವಾರು ವಿಮಾ ಮೊತ್ತ ಹಾಗೂ ವಿಮಾ ಕಂತಿನ ವಿವರ ಇಂತಿವೆ; ಟೊಮ್ಯಾಟೋ ಅಧಿಸೂಚಿತ ಬೆಳೆಯಾಗಿದ್ದು, ಪ್ರತೀ ಹೆಕ್ಟೇರ್‌ಗೆ ವಿಮಾ ಮೊತ್ತ ರೂ.1,41,500 ಆಗಿದೆ.2025ನೇ ಸಾಲಿನ ಹಿಂಗಾರು ಕರ್ನಾಟಕ ರೈತ ಸುರಕ್ಷಾ ಪ್ರಧಾನ ಮಂತ್ರಿ ಫಸಲ್ ಭಿಮಾ (ವಿಮಾ) ಯೋಜನೆಯಡಿ ಬೆಳೆವಾರು ವಿಮಾ ಮೊತ್ತ ಹಾಗೂ ವಿಮಾ ಕಂತಿನ ವಿವರ ಇಂತಿವೆ; ಟೊಮ್ಯಾಟೋ ಅಧಿಸೂಚಿತ ಬೆಳೆಯಾಗಿದ್ದು, ಪ್ರತೀ ಹೆಕ್ಟೇರ್‌ಗೆ ವಿಮಾ ಮೊತ್ತ ರೂ.1,41,500 ಆಗಿದೆ.

# ಸುಗಮ ಸದನಕ್ಕೆ ಮಲ್ಲಿಕಾರ್ಜುನ ಖರ್ಗೆ ಭರವಸೆ

**ನವದೆಹಲಿ :** ರಾಜ್ಯಸಭೆಯ ವಿರೋಧ ಪಕ್ಷದ ನಾಯಕ ಮಲ್ಲಿಕಾರ್ಜುನ ಖರ್ಗೆ ಅವರು ಇಂದು ಸದನದ ಸುಗಮ ನಡವಳಿಕೆಗೆ ಕಾಂಗ್ರೆಸ್ ಪಕ್ಷದಿಂದ ಸಹಕಾರ ನೀಡುವುದಾಗಿ ಅಧ್ಯಕ್ಷ ಸಿ.ಪಿ. ರಾಧಾ ಕೃಷ್ಣನ್ ಅವರಿಗೆ ಭರವಸೆ ನೀಡಿ–ದರು.

ರಾಜ್ಯಸಭೆಯ ಸದಸ್ಯರು, ಮೇಲ್ಮನೆಯ ಅಧ್ಯಕ್ಷರೂ ಆಗಿರುವ ಉಪಾಧ್ಯಕ್ಷರನ್ನು ಸಭಾಪತಿಯ ಮೊದಲ ದಿನದಂದು ಸನ್ಮಾನಿಸುತ್ತಿದ್ದಂತೆ, ಖರ್ಗೆ ಅವರು ರಾಧಾಕೃಷ್ಣನ್ ಅವರ ಪೂರ್ವವರ್ತಿ, ಮಾಜಿ ಉಪ ರಾಷ್ಟ್ರಪತಿ ಜಗದೀಪ್ ಧನ್‌ಖರ್ ಅವರನ್ನು ಸಹ ನೆನಪಿಸಿಕೊಂಡರು.

ವಿರೋಧ ಪಕ್ಷಗಳ ಪರವಾಗಿ ಅಧ್ಯಕ್ಷರನ್ನು ಸ್ವಾಗತಿಸಿದ ಖರ್ಗೆ, ಕಾಂಗ್ರೆಸ್ ಸಾಂವಿಧಾನಿಕ ಮೌಲ್ಯಗಳು ಮತ್ತು ಕಾಲೋಚಿತ ಸಂಸದೀಯ ಸಂಪ್ರದಾಯಗಳಿಗೆ ದೃಢವಾಗಿ ನಿಲ್ಲುತ್ತದೆ.ಕಲಾಪಗಳನ್ನು ನಡೆಸುವಲ್ಲಿ ನಮ್ಮ ಸಹಕಾರವನ್ನು ಖಚಿತಪಡಿಸಿಕೊಳ್ಳಿ ಎಂದು ಹೇಳಿದರು.

ನ್ಯಾಯಯುತ ಮತ್ತು ನಿಷ್ಪಕ್ಷಪಾತ ಕಲಾಪಗಳನ್ನು ನಡೆಸುವುದು, ಪ್ರತಿ ಪಕ್ಷದ ಸದಸ್ಯರಿಗೆ ನ್ಯಾಯಯುತ ಅವಕಾಶವನ್ನು ಒದಗಿಸುವುದು, ಈ ಕಚೇರಿಯ ವಿಶ್ವಾಸಾರ್ಹತೆಗೆ ಅತ್ಯಗತ್ಯ ಎಂದು ಖರ್ಗೆ ಹೇಳಿದರು. ಆರೋಗ್ಯ ಸಮಸ್ಯೆಗಳಿಂದಾಗಿ ಜುಲೈ 21 ರಂದು ಉಪ ರಾಷ್ಟ್ರಪತಿ ಸ್ಥಾನಕ್ಕೆ ರಾಜೀನಾಮೆ ನೀಡಿದ ಧನ್‌ಖರ್ ಅವರನ್ನು ಅವರು ಉಲ್ಲೇಖಿಸಿದರು. ನಿಮ್ಮ ಹಿಂದಿನವರು ಅನಿರೀಕ್ಷಿತವಾಗಿ ಮತ್ತು ಹಠಾತ್ತನೆ ಅಧ್ಯಕ್ಷರಾಗಿ ರಾಜ್ಯಸಭೆಯಿಂದ ನಿರ್ಗಮಿಸಿದ ಬಗ್ಗೆ ಉಲ್ಲೇಖಿಸಲೇಬೇಕಾಗಿದೆ. ಈ ಸದನಕ್ಕೆ ಅವರಿಗೆ ವಿದಾಯ ಹೇಳಲು ಅವಕಾಶ ಸಿಗದಿದ್ದಕ್ಕೆ ನಾನು ನಿರಾಶೆಗೊಂಡಿದ್ದೇನೆ ಎಂದು ಅವರು ಹೇಳಿದರು, ಇದು ಖಜಾನೆ ಪೀಠಗಳಿಂದ ಪ್ರತಿಭಟನೆಗೆ ಕಾರಣವಾಯಿತು.

ಖಜಾನೆ ಮತ್ತು ವಿರೋಧ ಪಕ್ಷದ ಪಕ್ಷಗಳ ನಡುವೆ ಸಮತೋಲನವನ್ನು ಖಚಿತಪಡಿಸಿಕೊಳ್ಳುವಂತೆ ಖರ್ಗೆ ಅಧ್ಯಕ್ಷರನ್ನು ಒತ್ತಾಯಿಸಿದರು.ನೀವು ಎರಡೂ ಕಡೆಯ ನಡುವೆ ಸಮತೋಲನವನ್ನು ಕಾಯ್ದುಕೊಳ್ಳುವುದು ಉತ್ತಮ. ನಿಮ್ಮ ಅವಧಿ ಯಶಸ್ವಿಯಾಗಲಿ ಎಂದು ನಾನು ಬಯಸುತ್ತೇನೆ ಎಂದು ಅವರು ಹೇಳಿದರು.

ಗಂಭೀರ ಸಂದರ್ಭದಲ್ಲಿ ಧನಖರ್ ಅವರ ರಾಜೀನಾಮೆಯನ್ನು ಪ್ರಸ್ತಾಪಿಸಿದ್ದಕ್ಕಾಗಿ ಸಂಸದೀಯ ವ್ಯವಹಾರಗಳ ಸಚಿವ ಕಿರಣ್ ರಿಜಿಜು ವಿರೋಧ ಪಕ್ಷದ ನಾಯಕರನ್ನು ತರಾಟೆಗೆ ತೆಗೆದುಕೊಂಡರು.ಈ ಸಮಯದಲ್ಲಿ ಎತ್ತುವ ಅಗತ್ಯವಿಲ್ಲದ ಪ್ರಕರಣವನ್ನು ಗೌರವಾನ್ವಿತ ವಿರೋಧ ಪಕ್ಷದ ನಾಯಕರು ಏಕೆ ಉಲ್ಲೇಖಿಸಿದರು

# ಕೆಓಎಫ್ ಗೋದಾಮು ಕಟ್ಟಡ ಉದ್ಘಾಟಿಸಿದ ಸಂಸದೆ ಡಾ.ಪ್ರಭಾ ಮಲ್ಲಿಕಾರ್ಜುನ್

**ದಾವಣಗೆರೆ :** ಕರ್ನಾಟಕ ಸಹಕಾರ ಎಣ್ಣೆಬೀಜ ಬೆಳೆಗಾರರ ಮಹಾಮಂಡಳ ನಿಯಮಿತ (ಕೆಓಎಫ್) ವತಿಯಿಂದ ಕೇಂದ್ರ ಸರ್ಕಾರದ ಅನುದಾನದಡಿ ದಾವಣಗೆರೆಯಲ್ಲಿ ನೂತನವಾಗಿ ನಿರ್ಮಾಣಗೊಂಡ ಗೋದಾಮು ಕಟ್ಟಡ ಹಾಗೂ ಸಾರ್ಟೆಕ್ಸ್ ಯಂತ್ರದ ಉದ್ಘಾಟನೆಯನ್ನು ಸಂಸದರಾದ ಡಾ.ಪ್ರಭಾ ಮಲ್ಲಿಕಾರ್ಜುನ್ ನೆರವೇರಿಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ಅವರು ಕರ್ನಾಟಕ ಸಹಕಾರ ಎಣ್ಣೆಬೀಜ ಬೆಳೆಗಾರರ ಮಹಾಮಂಡಳ ನಿಯಮಿತವು ರಾಷ್ಟ್ರೀಯ ಹೈನುಗಾರಿಕಾ ಅಭಿವೃದ್ಧಿ ಮಂಡಳಿಯ ಕಲ್ಪನೆಯಂತೆ ಕರ್ನಾಟಕ ಸಹಕಾರಿ ಸಂಘಗಳ ಕಾಯ್ದೆ 1959ರ ಅಡಿಯಲ್ಲಿ 26 ಅಕ್ಟೋಬರ್ 1984ರಂದು ನೋಂದಾಯಿಸಲ್ಪಟ್ಟಿದ್ದು, ಕಳೆದ ನಾಲ್ಕು ದಶಕಗಳಿಂದ ರೈತರ ಹಿತಕಾಂಕ್ಷೆಯೊಂದಿಗೆ ಕಾರ್ಯನಿರ್ವಹಿಸುತ್ತಿದೆ.

ಸಂಸ್ಥೆಯು ಕಳೆದ 40 ವರ್ಷಗಳಿಂದ 'ಸಫಲ್' ಬ್ರಾಂಡ್ ಹೆಸರಿನಲ್ಲಿ ಉನ್ನತ ಗುಣಮಟ್ಟದ ವಿವಿಧ ಖಾದ್ಯ ತೈಲಗಳು ಹಾಗೂ ಬಿತ್ತನೆ ಬೀಜಗಳನ್ನು ಉತ್ಪಾದಿಸಿ ಮಾರುಕಟ್ಟೆಗೆ ಸರಬರಾಜು ಮಾಡುತ್ತಿದೆ. ಕಳೆದ ಐದು ವರ್ಷಗಳಿಂದ ಕೃಷಿ ಉತ್ಪನ್ನಗಳ ಮಾರಾಟದಲ್ಲಿಯೂ ಯಶಸ್ವಿಯಾಗಿದೆ. ಬೆಂಗಳೂರಿನ ವಿವಿಧ ಪ್ರದೇಶಗಳಲ್ಲಿ



ಸಂಸ್ಥೆಯು ಸ್ವಂತ ಮಾರಾಟ ಮಳಿಗೆಗಳನ್ನು ತೆರೆದು, 'ಸಫಲ್' ಬ್ರಾಂಡ್ ಖಾದ್ಯ ತೈಲಗಳು ಹಾಗೂ ಕೃಷಿ ಉತ್ಪನ್ನಗಳನ್ನು ಗ್ರಾಹಕರಿಗೆ ಕಡಿಮೆ ದರದಲ್ಲಿ ಲಭ್ಯವಾಗುವಂತೆ ಮಾಡಿದೆ ಎಂದರು. ಕೆ.ಓ.ಎಫ್ ಸಂಸ್ಥೆಯು ನಂಬಿಕೆಗೆ ಅರ್ಹವಾಗಿದ್ದು, ಕಲಬೆರಕೆ ರಹಿತ ಉತ್ಪನ್ನಗಳನ್ನು ಪೂರೈಸುವ ಮೂಲಕ ಸಾರ್ವಜನಿಕ ಆರೋಗ್ಯಕ್ಕೆ ಮಹತ್ವದ ಕೊಡುಗೆ ನೀಡುತ್ತಿದೆ. ಗುಣಮಟ್ಟದ ಸಂಸ್ಕರಣೆ, ಆಧುನಿಕ ತಂತ್ರಜ್ಞಾನಗಳ ಬಳಕೆ ಹಾಗೂ ಕಟ್ಟುನಿಟ್ಟಿನ ಸ್ವಚ್ಛತಾ ಮಾನದಂಡಗಳನ್ನು ಪಾಲಿಸುವ ಮೂಲಕ ಗ್ರಾಹಕರ ವಿಶ್ವಾಸವನ್ನು ಗಳಿಸಿದೆ.

ಗ್ರಾಮೀಣ ಆರ್ಥಿಕತೆಯನ್ನು ಬಲಪಡಿಸುವಲ್ಲಿ ಸಂಸ್ಥೆಯು ಪ್ರಮುಖ ಪಾತ್ರ ವಹಿಸಿದ್ದು, ರೈತ ಮಹಿಳೆಯರು ಹಾಗೂ ಸ್ವಸಹಾಯ ಸಂಘಗಳಿಗೆ ಉದ್ಯೋಗಾವಕಾಶಗಳನ್ನು ಕಲ್ಪಿಸುವ ಮೂಲಕ ಸಾಮಾಜಿಕ ಹಾಗೂ ಆರ್ಥಿಕ ಸಬಲೀಕರಣಕ್ಕೆ ಸಹಕರಿಸುತ್ತಿದೆ ಎಂದರು.

ಈ ಸಂದರ್ಭದಲ್ಲಿ ಮಾಜಿ ಸಚಿವರು ಹಾಗೂ ಕೆಓಎಫ್ ಅಧ್ಯಕ್ಷರಾದ ವೆಂಕಟರಾವ್ ನಾಡಗೌಡರ್,ಉಪಾಧ್ಯಕ್ಷರಾದ ಎಸ್ ಸುಗನಗೌಡ,ಕೆಓಎಫ್ ವ್ಯವಸ್ಥಾಪಕ ನಿರ್ದೇಶಕರಾದ ಜಿ.ಸಿ ರೆಡ್ಡಿ ಹಾಗೂ ಅಧಿಕಾರಿ ವರ್ಗದವರು ಉಪಸ್ಥಿತರಿದ್ದರು.

# ಎಚ್.ಐ.ವಿ ಸೋಂಕು ಹರಡುವಿಕೆ ತಡೆಗಟ್ಟಲು ಜಾಗೃತಿ ಮೂಡಿಸಿ: ನ್ಯಾ. ರಾಮಲಿಂಗೇಗೌಡ

**ಚಿಕ್ಕಬಳ್ಳಾಪು :** ಎಚ್‌ಐವಿ ಸೋಂಕು ಹಾಗೂ ಏಡ್ಸ್ ಕಾಯಿಲೆಯನ್ನು ತಡೆಗಟ್ಟಲು ಜನಸಾಮಾನ್ಯರಲ್ಲಿ ಹಾಗೂ ಸಮಾಜದಲ್ಲಿ ಜಾಗೃತಿ ಮೂಡಿಸುವುದು ಮುಖ್ಯವಾಗಿದೆ ಎಂದು ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ಅಧ್ಯಕ್ಷ ಟಿ.ಪಿ ಪಿ.ರಾಮಲಿಂಗೇಗೌಡ ಅವರು ತಿಳಿಸಿದರು.

ಅವರು ಸೋಮವಾರ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ಮತ್ತು ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಜಿಲ್ಲಾ ಪೋಲೀಸ್ ಇಲಾಖೆ, ನಂದಿ ವೈದ್ಯಕೀಯ ಮಹಾವಿದ್ಯಾಲಯ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಚಿಕ್ಕಬಳ್ಳಾಪುರ ಜಿಲ್ಲೆ ಹಾಗೂ ಜಿಲ್ಲಾ ಏಡ್ಸ್ ತಡೆಗಟ್ಟುವ ಮತ್ತು ನಿಯಂತ್ರಣ ಘಟಕ, ಜಿಲ್ಲಾ ಕ್ಷಯರೋಗ ನಿರ್ಮೂಲನಾ ಕೇಂದ್ರ, ಭಾರತೀಯ ರೆಡ್ ಕ್ರಾಸ್ ಸಂಸ್ಥೆ, ರೆಡ್ ರಿಬ್ಬನ್ ಕ್ಲಬ್, ಸ್ವಯಂ ಸೇವಾ ಸಂಘ ಸಂಸ್ಥೆಗಳ ಸಂಯುಕ್ತ ಆಶ್ರಯದಲ್ಲಿ ಅಂಬೇಡ್ಕರ್ ಭವನದಲ್ಲಿ ನಡೆದ ವಿಶ್ವ



ಏಡ್ಸ್ ದಿನಾಚರಣೆಗೆ ಚಾಲನೆ ನೀಡಿ ಮಾತನಾಡಿದರು.

ಆರೋಗ್ಯವೇ ಭಾಗ್ಯ ಎಂದು ಕರೆಯಲಾಗುತ್ತದೆ,ಏಕೆಂದರೆ ಆರೋಗ್ಯವಿದ್ದರೆ ಏನನ್ನಾದರೂ ಸಾಧಿಸ ಬಹುದು. ಆರೋಗ್ಯವಿಲ್ಲದಿದ್ದರೆ ಏನೇ ಸಾಧಿಸಿದರು ಪ್ರಯೋಜನವಿಲ್ಲ ಅದ್ದರಿಂದ ಸಮಾಜದಲ್ಲಿ ಪ್ರತಿಯೊಬ್ಬರ ಆರೋಗ್ಯವನ್ನು ಕಾಪಾಡುವುದು ಆಡಳಿತಾಂಗದ ಮುಖ್ಯ ಕಾರ್ಯವಾಗಿರುತ್ತದೆ ಅದ್ದರಿಂದ ವಿಶ್ವ ಏಡ್ಸ್ ದಿನಾಚರಣೆಯ ಅಂಗವಾಗಿ ಜಾಗೃತಿ ಮೂಡಿಸುವ ಕೆಲಸವನ್ನು ಪ್ರತಿ ವರ್ಷ ವಿಶ್ವಾದ್ಯಂತ ಮಾಡಲಾಗುತ್ತದೆ "ಎಚ್.ಐ.ವಿ ಸೋಂಕು ಹಾಗೂ ಏಡ್ಸ್ ಹರಡುವಿಕೆಯನ್ನು ನಿಯಂತ್ರಿಸಲು ಇರುವ ಅಡೆತಡೆಗಳನ್ನು ಕೊನೆಗಾಣಿಸುವುದು" ಈ ವರ್ಷದ ಘೋಷವಾಕ್ಯವಾಗಿದೆ ಅಡೆತಡೆಗಳನ್ನು ನಿಯಂತ್ರಿಸಲು ಜನಸಾಮಾನ್ಯರಲ್ಲಿ ಅರಿವು ಮೂಡಿಸುವುದು ಬಹಳ ಅಗತ್ಯವಾಗಿದೆ. ಒಳ್ಳೆಯ ಆರೋಗ್ಯ ಹೊಂದಿರಬೇಕು ಎಂದರೆ ಕೆಟ್ಟ ಹವ್ಯಾಸಗಳನ್ನು ಬಿಟ್ಟು ಒಳ್ಳೆಯ ದಾರಿಯಲ್ಲಿ ನಡೆಯಬೇಕು ಎಂದು ತಿಳಿಸಿದರು.

ಜಿಲ್ಲಾ ಅರೋಗ್ಯ ಮತ್ತು ಕುಟುಂಬ ಕಲ್ಯಾಣಧಿಕಾರಿ ಡಾ. ಮಹೇಶ್ ಕುಮಾರ್ ಅವರು ಮಾತನಾಡಿ ಏಡ್ಸ್ ರೋಗವು ಜಿಲ್ಲೆಯ ಬಾಗೇಪಲ್ಲಿ, ಗೌರಿಬಿದನೂರು ಮತ್ತು ಚಿಂತಾಮಣಿ ತಾಲೂಕಿನ ಗಡಿಭಾಗದಲ್ಲಿ ಹೆಚ್ಚು ಪ್ರಕರಣಗಳು ದಾಖಲಾಗಿವೆ. ಜಿಲ್ಲೆಯ್ಲಲಿ 2025 ಏಪ್ರಿಲ್ ನಿಂದ ಅಕ್ಟೋಬರ್ ವರೆಗೆ 223 ಎಚ್.ಐ.ವಿ ಸೊಂಕಿತ ಪ್ರಕರಣಗಳು ದಾಖಲಾಗಿವೆ. ಜಿಲ್ಲೆಯಲ್ಲಿ ಕಳೆದ 2009 ವರ್ಷ ದಿಂದ 2025 ಅಕ್ಟೋಬರ್ ಅಂತ್ಯದವರೆಗೂ ಬರೋಬ್ಬರಿ 7,603 ಮಂದಿ ಎಚ್ ಐವಿ ಸೋಂಕಿತರು ಪತ್ತೆ ಆಗಿದ್ದಾರೆ. 3,627 ಮಂದಿ ಪ್ರಸ್ತುತವೂ ಚಿಕಿತ್ಸೆ ಪಡೆಯುತ್ತಿದ್ದಾರೆ. 2,314 ಮಂದಿ ಮರಣ ಹೊಂದಿದ್ದರೆ, 689 ರೋಗಿಗಳು ಹೊರ ಜಿಲ್ಲೆಗಳಲ್ಲಿ ಚಿಕಿತ್ಸೆ ಪಡೆಯುತ್ತಿದ್ದಾ–ರೆ. 18 ರಿಂದ 45ರ ವಯಸ್ಕರಲ್ಲಿ ಹೆಚ್ಚು ಎಚ್ ಐವಿ ಸೋಂಕು ದೃಢಪಟ್ಟಿದೆ .

# ನಿಗದಿತ ಅವಧಿಗಿಂತ ಹೆಚ್ಚು ಕಾಲ ವಾಹನ ನಿಲುಗಡೆಗೆ ಕಡಿವಾಣ ಹಾಕಲು ಆಗ್ರಹ



**ಚಿಕ್ಕಮಗಳೂರು:** ನಗರದ ರಸ್ತೆಗಳಲ್ಲಿ ನಿಗದಿತ ಅವಧಿಗಿಂತ ಹೆಚ್ಚು ಕಾಲ ವಾಹನಗಳನ್ನು ನಿಲುಗಡೆ ಮಾಡುತ್ತಿರುವ ಕ್ರಮಕ್ಕೆ ಕಡಿವಾಣ ಹಾಕುವಂತೆ ಕರ್ನಾಟಕ ಮಾಹಿತಿ ಹಕ್ಕು ಕಾರ್ಯಕರ್ತರ ಸಂಘಟನೆ ನಗರಸಭೆಯನ್ನು ಒತ್ತಾಯಿಸಿದೆ.

ಸಂಘಟನೆಯ ರಾಜ್ಯಾಧ್ಯಕ್ಷ ಸೋಮುನಾಯಕ್ ಅವರ ನೇತೃತ್ವದಲ್ಲಿ ನಗರಸಭೆ ಅಧ್ಯಕ್ಷೆ ಶೀಲಾದಿನೇಶ್ ಮತ್ತು ಉಪಾಧ್ಯಕ್ಷೆ ಲಲಿತಾರವಿನಾಯ್ಕ್ ಅವರನ್ನು ಭೇಟಿಮಾಡಿದ ಪದಾಧಿಕಾರಿಗಳು, ಈ ಸಂಬಂಧ ಮನವಿ ಸಲ್ಲಿಸಿದರು.

ಇತ್ತೀಚಿನ ವರ್ಷಗಳಲ್ಲಿ ದಿನೇ ದಿನೇ ಜಿಲ್ಲೆಯಲ್ಲಿ ಪ್ರವಾಸಿಗರ ಸಂಖ್ಯೆ ಹೆಚ್ಚುತ್ತಿದ್ದು, ನಗರದ ರಸ್ತೆಗಳು ಸದಾಕಾಲ ಪ್ರವಾಸಿಗರ ವಾಹನಗಳಿಂದ ತುಂಬಿರುತ್ತವೆ, ಇದರ ನಡುವೆ ಆ ರಸ್ತೆಗಳ ಕೆಲ ಸ್ಥಳೀಯರು ತಮ್ಮ ವಾಹನಗಳನ್ನು ರಸ್ತೆಬದಿಯಲ್ಲಿ ಖಾಯಂ ಆಗಿ ನಿಲ್ಲಿಸುವುದರಿಂದ ಉಳಿದ ವಾಹನಗಳಿಗೆ ನಿಲುಗಡೆಗೆ ಸ್ಥಳ ಸಿಗದೆ ಪರದಾಡುವಂತಾಗಿದೆ ಎಂದು ಆರೋಪಿಸಿದರು.

ಸ್ಥಳೀಯರು ತಮ್ಮ ವಾಹನಗಳನ್ನು ತಮ್ಮ ಖಾಸಗಿ ಜಾಗದಲ್ಲಿ ನಿಲ್ಲಿಸಿದರೆ ನಗರದ ಮುಖ್ಯ ರಸ್ತೆಗಳಲ್ಲಿ ವಾಹನ ಸಂಚಾರಕ್ಕೆ ಹಾಗೂ ನಿಲುಗಡೆಗೆ ಸ್ಥಳ ದೊರೆಯುತ್ತದೆ ಎಂದ ಪದಾಧಿಕಾರಿಗಳು, ಈ ಹಿನ್ನೆಲೆಯಲ್ಲಿ ಯಾವುದೇ ವ್ಯಕ್ತಿ ಏಳು ದಿನಗಳ ಕಾಲ ರಸ್ತೆಯಲ್ಲಿ ವಾಹನವನ್ನು ನಿಲ್ಲಿಸಿದರೆ ಅಂತಹವರ ವಿರುದ್ಧ ಕಾನೂನು ಕ್ರಮ ಕೈಗೊಳ್ಳಬೇಕು ಆಗ್ರಹಿಸಿದರು. ನಗರದ ರಸ್ತೆಬದಿಗಳಲ್ಲಿ ಮತ್ತು ಪಾದಾಚಾರಿಗಳಿಗೆ ಮೀಸಲಿಟ್ಟ ರಸ್ತೆಗಳ ಮೇಲೆ ವ್ಯಾಪಾರಿಗಳು ವ್ಯಾಪಾರ ಮಾಡುತ್ತಿರುವುದನ್ನು ತಡೆಗಟ್ಟುವಂತೆ ಒತ್ತಾಯಿಸಿದರು.

ಕರ್ನಾಟಕ ಮಾಹಿತಿ ಹಕ್ಕು ಕಾರ್ಯಕರ್ತರ ಸಂಘಟನೆಯ ಪದಾಧಿಕಾರಿಗಳಾದ ಎಂಡಿಎನ್ ಭಾಷಾ, ಮಾಕೇನಹಳ್ಳಿ ಸುಕೇಶ್, ಖಲಂದರ್, ರೂಪೇಶ್ ಹಾಜರಿದ್ದರು.

# ವಿಶ್ವ ಏಡ್ಸ್ ಜಾಗೃತಿ ದಿನಾಚರಣೆ ಪ್ರಯುಕ್ತ ಜನಜಾಗೃತಿ ಜಾಥಾ–2025

**ಗದಗ :** ವಿಶ್ವ ಏಡ್ಸ್ ಜಾಗೃತಿ ದಿನಾಚರಣೆ ಪ್ರಯುಕ್ತ ಜನಜಾಗೃತಿ ಜಾಥಾ ಕಾರ್ಯಕ್ರಮಕ್ಕೆ ಸೋಮವಾರ ನಗರದ ದುಂಡಪ್ಪ ಮಾನ್ವಿ ಹೆರಿಗೆ ಆಸ್ಪತ್ರೆ ಆವರಣದಲ್ಲಿ ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಸಿ.ಎಸ್. ಶಿವನಗೌಡ್ರ ಅವರು ಹಸಿರು ನಿಶಾನೆ ತೋರಿಸುವ ಮೂಲಕ ಚಾಲನೆ ನೀಡಿ ಮಾತನಾಡಿದರು.

ನಂತರ ಅವರು ಮಾತನಾಡಿ ಹೆಚ್‌ಐವಿ ಏಡ್ಸ್ ನಿಯಂತ್ರಣದಲ್ಲಿ ಯುವಕರ ಪಾತ್ರ ಮುಖ್ಯವಾಗಿದ್ದು, ಯುವಕರು ಕಾಲೇಜ ವಿದ್ಯಾರ್ಥಿಗಳು, ಗ್ರಾಮೀಣ ಜನತೆಗೆ ತಿಳುವಳಿಕೆ ಮೂಡಿಸಿ, ಹೆಚ್‌ಐವಿ ಮುಕ್ತ ಸಮಾಜ ನಿರ್ಮಾಣ ಮಾಡಲು ಕೈಜೋಡಿಸಬೇಕೆಂದು ಕರೆ ನೀಡಿ–ದರು.

ಸಮಾಜದಲ್ಲಿ ಹೆಚ್‌ಐವಿ ಸೋಂಕಿತರಿಗೆ ಮತ್ತು ಬಾಧಿತರರಿಗೆ ಆಗುವ ಅಸಮಾನತೆಯನ್ನು ತೋಲಗಿಸಲು ಮುಂದಾಗಬೇಕು. ನೊಂದವರಿಗೆ ಸೌಲಭ್ಯ ನೀಡುವ ನಿಟ್ಟಿನಲ್ಲಿ ಕಾರ್ಯಪ್ರೌವೃತ್ತರಾಗಬೇಕೆಂದು ತಿಳಿಸಿ ಸಂಸತ್ತಿನಲ್ಲಿ ಹೆಚ್.ಐ.ವಿ. ಏಡ್ಸ್ ಮಸೂದೆ–2017



ಪಾಸಾಗಿದ್ದು, ಸೋಂಕಿತರಿಗೆ ಬಾಧಿತರಿಗೆ ತಾರತಮ್ಯ ಮಾಡಿದರೆ ಕೀಳಾಗಿ ನೋಡಿ–ದರೆ ಹೆಚ್.ಐ.ವಿ. ಏಡ್ಸ್ ಮಸೂದೆಯಲ್ಲಿ ಅಂತಹವರಿಗೆ ಶಿಕ್ಷೆಯಾಗಿ ಒಂದು ಲಕ್ಷದವರೆಗೆ ದಂಡವನ್ನು ಹಾಗೂ ಎರಡು ವರ್ಷಗಳವರೆಗೆ ಜೈಲು ಶಿಕ್ಷೆ ವಿಧಿಸಬಹುದು ಎಂದು ತಿಳಿಸಿದರು.

ಹೆಚ್.ಐ.ವಿ. ಬಗ್ಗೆ ಮಾಹಿತಿಯನ್ನು ಪದೇ ಪದೇ ಸಮುದಾಯಕ್ಕೆ ತಿಳಿಸುವುದರೊಂದಿಗೆ ಸಮುದಾಯವನ್ನು ಬದಲಾವಣೆ ಮಾಡಲು ಸಾಧ್ಯವೆಂದು ತಿಳಿಸಿದರು. ಸಮುದಾಯ ಅವರೊಂದಿಗೆ ಕೈ ಜೋಡಿಸಿದರೆ ಸೋಂಕು ಮುಕ್ತ ನಾಡನ್ನು ಕಟ್ಟಬಹುದೆಂದು ತಿಳಿಸಿದರು.

ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿ ಡಾ. ಎಸ್.ಎಸ್. ನೀಲಗುಂದ ಮಾತನಾಡಿ ಜಿಲ್ಲೆಯಲ್ಲಿ 8 ಐಸಿಟಿಸಿ ಕೇಂದ್ರಗಳು ಕಾರ್ಯ ನಿರ್ವಹಿಸುತ್ತಿದ್ದು, ಜಿಲ್ಲೆಯ ಸ್ಥಿತಿಗತಿ 2004ರಲ್ಲಿ 1.01 ರಷ್ಟು ಪ್ರತಿಶತ ಇದ್ದು, 2024–25ರಲ್ಲಿ 0.19ಗೆ ಇಳಿದಿದ್ದು, ಗರ್ಭಿಣೀ ಸ್ತ್ರೀಯರಲ್ಲಿ 0.02ಗೆ ಇಳಿದಿದೆ. ಇನ್ನು ಹೆಚ್ಚಿನ ತಪಾಸಣೆ ಕೈಗೊಳ್ಳಲು ಸಂತೆಯಲ್ಲಿ ಮತ್ತು ಜಾತ್ರೆಗಳಲ್ಲಿ ಸಮುದಾಯ ಆಧಾರಿತ ತಪಾಸಣೆ ಕೈಗೊಳ್ಳುತ್ತಿದ್ದು, ಹಾಗೂ ಜಾನಪದ ಕಲೆ ಮೂಲಕ ರೆಡ್ ರಿಬ್ಬನ್ ಕಾಲೇಜುಗಳ ಮುಖಾಂತರ ಅರಿವು ಕಾರ್ಯಕ್ರಮ ಹಾಗೂ ಎಲ್ಲರಿಗೂ ಇಲಾಖೆ ವತಿಯಿಂದ ಉಚಿತ ಪರೀಕ್ಷೆ ಹಾಗು ಔಷಧೋಪಚಾರವನ್ನು ನೀಡಲಾಗುತ್ತಿದೆ ಎಂದರು.

ಜಾಥಾ ಕಾರ್ಯಕ್ರಮದಲ್ಲಿ ಜೈ ಕಿಸಾನ ಕಲಾ ತಂಡದವರು ಹೆಚ್.ಐ.ವಿ ಏಡ್ಸ ಕುರಿತು ಜಾನಪದ ಹಾಡುಗಳಿಂದ ಜಾಥಾ ಉದ್ದಕ್ಕೂ ಅರಿವು ಮೂಡಿಸುವ ಕಾರ್ಯ ನಿರ್ವಹಿಸಿದರು.

ಈ ಸಂದರ್ಭದಲ್ಲಿ ಡ್ಯಾಪ್ಕೂ ಅಧಿಕಾರಿ ಡಾ. ಅರುಂಧತಿ ಕೆ, ತಾಲೂಕಾ ಆರೋಗ್ಯಾಧಿಕಾರಿ, ಪುಷ್ಪಾ ಪಾಟೀಲ, ಸಿದ್ದಪ್ಪ ಲಿಂಗದಾಳ, ರಾಜೇಂದ್ರ ಗಡಾದ, ಮಂಜುನಾಥ ಸಜ್ಜನರ ಹಾಗೂ ಇತರರು ಹಾಜರಿದ್ದರು.

## ಜವಳಿ ಕ್ಷೇತ್ರದ ಘಟಕಗಳ ಸ್ಥಾಪನೆಗೆ ಸಹಾಯಧನ

**ಚಿಕ್ಕಮಗಳೂರು:** 2025–26ನೇ ಸಾಲಿಗೆ ರಾಜ್ಯ ಜವಳಿ ಉದ್ದಿಮೆಯಲ್ಲಿ ವೈಯಕ್ತಿಕ ಫಲಾನುಭವಿ, ಪಾಲುದಾರಿಕೆ ಸಂಸ್ಥೆ, ಕಂಪನಿ, ಜವಳಿ ಸಹಕಾರ ಸಂಘ, ಸಂಸ್ಥೆಯ ವತಿಯಿಂದ ಅತಿ ಸಣ್ಣ(ಎಸ್‌ಎಂಇ) ಘಟಕಗಳನ್ನು ಪ್ರಾರಂಭಿಸಲು ಉತ್ತೇಜಿಸುವ ಸಲುವಾಗಿ ನೇಕಾರರ ಪ್ಯಾಕೇಜ್ ಯೋಜನೆಯಡಿ ಜವಳಿ ಕ್ಷೇತ್ರಕ್ಕೆ ಸಂಬಂಧಿಸಿದಂತೆ ಸಣ್ಣ ಮತ್ತು ಅತಿ ಸಣ್ಣ ಘಟಕಗಳ ಸ್ಥಾಪನೆಗೆ ಸಹಾಯಧನ ಯೋಜನೆಯಡಿ ಹೊಸ ಘಟಕಗಳ ಪ್ರಸ್ತಾವನೆಯನ್ನು ಸಲ್ಲಿಸುವಂತೆ ಜವಳಿ ಅಭಿವೃದ್ಧಿ ಆಯುಕ್ತರು ಹಾಗೂ ನಿರ್ದೇಶಕರು ಸೂಚಿಸಿದ್ದಾರೆ. ಯೋಜನೆಯಡಿ ಘಟಕ ಸ್ಥಾಪಿಸಲು ಉದ್ದೇಶಿಸಿರುವ ಅಭ್ಯರ್ಥಿಗಳು ಹೆಚ್ಚಿನ ವಿವರಕ್ಕೆ ಕೈಮಗ್ಗ ಮತ್ತು ಜವಳಿ ಇಲಾಖೆಯ ಸಹಾಯಕ ನಿರ್ದೇಶಕರ ಕಚೇರಿ ಅಥವಾ (ದೂರವಾಣಿ ಸಂಖ್ಯೆ: 08262–295880) ಯನ್ನು ಸಂಪರ್ಕಿಸುವಂತೆ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಡಿ.6 ರಂದು ಪ್ರತಿಭಾ ಕಾರಂಜಿ

**ಚಿಕ್ಕಮಗಳೂರು:** ಜಿಲ್ಲಾ ಹಂತದ ಪ್ರತಿಭಾ ಕಾರಂಜಿ ಕಾರ್ಯಕ್ರಮವನ್ನು ಡಿಸೆಂಬರ್ 6 ರಂದು ಕಡೂರು ತಾಲ್ಲೂಕು ಗಿರಿಯಾಪುರದ ಶ್ರೀ ಗುರುಕೃಪ ಪ್ರೌಢಶಾಲೆಯಲ್ಲಿ ಆಯೋಜಿಸಲಾಗಿದ್ದು, ಜಿಲ್ಲೆಯ ವಿವಿಧ ತಾಲ್ಲೂಕಿನಲ್ಲಿ ಪ್ರತಿಭಾ ಕಾರಂಜಿ ಕಾರ್ಯಕ್ರಮದ ವಿವಿಧ ಸ್ಪರ್ಧೆಗಳಲ್ಲಿ ಪ್ರಥಮ ಸ್ಥಾನದಲ್ಲಿ ವಿಜೇತರಾದ ವಿದ್ಯಾರ್ಥಿಗಳು ಜಿಲ್ಲಾ ಮಟ್ಟದ ಈ ಸ್ಪರ್ಧೆಗಳಲ್ಲಿ ಭಾಗವಹಿಸಲು ಅರ್ಹರಾಗಿದ್ದಾರೆ.

ಮೂಡಿಗೆರೆ, ಕೊಪ್ಪ, ಶೃಂಗೇರಿ ಮತ್ತು ನರಸಿಂಹರಾಜಪುರ ತಾಲ್ಲೂಕುಗಳಿಂದ ಸ್ಪರ್ಧೆಗಳಲ್ಲಿ ಭಾಗವಹಿಸಲು ಆಗಮಿಸುವ ವಿದ್ಯಾರ್ಥಿಗಳಿಗೆ ಹಾಗೂ ಮಾರ್ಗದರ್ಶಿ ಶಿಕ್ಷಕರಿಗೆ ಡಿಸೆಂಬರ್ 5 ಶುಕ್ರವಾರ ರಾತ್ರಿ ತಂಗಲು ಮತ್ತು ಲಘು ಉಪಾಹಾರದ ವ್ಯವಸ್ಥೆಯನ್ನು ಶ್ರೀ ಗುರುಕೃಪ ಪ್ರೌಢಶಾಲೆಯಲ್ಲಿ ವ್ಯವಸ್ಥೆ ಮಾಡಲಾಗಿದೆ. ಎಂದು ಶಾಶಿಇ (ಆಡಳಿತ) ಉಪನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಜನಸಂಪರ್ಕ ಸಭೆ

**ಚಿಕ್ಕಮಗಳೂರು, ಡಿ. 1:** ಮೆಸ್ಕಾಂನ ಕಳಸ ಉಪವಿಭಾಗದ ಜನಸಂಪರ್ಕ ಸಭೆಯನ್ನು ಡಿಸೆಂಬರ್ 2 ರಂದು ಬೆಳಿಗ್ಗೆ 11 ಗಂಟೆಗೆ ಕಳಸ ಮೆಸ್ಕಾಂ ಉಪವಿಭಾಗ ಕಚೇರಿಯಲ್ಲಿ ಚಿಕ್ಕಮಗಳೂರು ವೃತ್ತದ ಅಧೀಕ್ಷಕರ ಇಂಜಿನಿಯರ್ ಅವರ ಅಧ್ಯಕ್ಷತೆಯಲ್ಲಿ ನಡೆಸಲಾಗುವುದು. ಸಭೆಯಲ್ಲಿ ಸಾರ್ವಜನಿಕರು ಭಾಗವಹಿಸಿ ತಮ್ಮ ಅಹವಾಲುಗಳನ್ನು ಸಲ್ಲಿಸಬಹುದು ಎಂದು ಮೆಸ್ಕಾಂ ಕಾರ್ಯ ಮತ್ತು ಪಾಲನಾ ಉಪವಿಭಾಗದ ಸಹಾಯಕ ಕಾರ್ಯ ನಿರ್ವಾಹಕ ಇಂಜಿನಿಯರ್ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಬಿಡಾಡಿ ದನಗಳ ನಿಯಂತ್ರಣಕ್ಕೆ ನಗರಸಭೆ ಸೂಚನೆ

**ಚಿಕ್ಕಮಗಳೂರು, ಡಿ.1:** ಬಿಡಾಡಿ ದನಗಳ ಉಪದ್ರವ ಉಂಟಾಗುತ್ತಿರುವ ಬಗ್ಗೆ ಮಾನ್ಯ ಸರ್ವೋಚ್ಚ ನ್ಯಾಯಾಲಯವು ನೀಡಿರುವ ಅಂಶಗಳ ಆದೇಶದಂತೆ ಸಾರ್ವಜನಿಕರಿಂದ ಸಾಕಷ್ಟು ದೂರುಗಳು ಬರುತ್ತಿದ್ದು, ಬಿಡಾಡಿ ದನಗಳಿಂದ ರಸ್ತೆ ಅಪಘಾತಗಳು ಹೆಚ್ಚಾಗುತ್ತಿರುವ ಹಿನ್ನೆಲೆಯಲ್ಲಿ ನಗರಸಭೆ ವ್ಯಾಪ್ತಿಯಲ್ಲಿ ದನಗಳ ಮಾಲೀಕರು ಯಾರಾದರೂ ಇದ್ದಲ್ಲಿ ತಮ್ಮ ದನಗಳನ್ನು 3 ದಿನದ ಒಳಗಾಗಿ ಹಿಡಿದು ರಸ್ತೆಗೆ ಬಿಡದೇ ತಮ್ಮ ಮನೆಯಲ್ಲೇ ಸಾಕಿಕೊಳ್ಳಬೇಕು. ತಪ್ಪಿದ್ದಲ್ಲಿ ಸಾರ್ವಜನಿಕರ ಆರೋಗ್ಯ ಮತ್ತು ಸುರಕ್ಷತೆ ಹಿತ ದೃಷ್ಟಿಯಿಂದ ನಗರಸಭಾ ವತಿಯಿಂದ ದನಗಳನ್ನು ಹಿಡಿದು ಗೋಶಾಲೆಗೆ ಸಾಗಿಸಲು ಕ್ರಮ ಕೈಗೊಳ್ಳಲಾಗುವುದು. ದನಗಳ ಮಾಲೀಕರು ಈ ಸಮಯದಲ್ಲಿ ದನ ಹಿಡಿಯುವವರಿಗೆ ಅಡ್ಡಿ ಆತಂಕ ಉಂಟು ಮಾಡಿದಲ್ಲಿ ದನಗಳ ಮಾಲೀಕರುಗಳಿಗೆ ರೂ. 5000 ದವರೆಗೆ ದಂಡ ವಿಧಿಸುವುದಲ್ಲದೇ ಅಂತಹವರ ವಿರುದ್ಧ ನಿಯಮಾನುಸಾರ ಕ್ರಿಮಿನಲ್ ಮೊಕದ್ದಮೆ ದಾಖಲಿಸಲಾಗುವುದೆಂದು ಪೌರಾಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಈ ಬಾರಿ ಶುಕ್ರವಾರ ಸಂತೆ

**ಚಿಕ್ಕಮಗಳೂರು, ಡಿ.1:** ದತ್ತ ಜಯಂತಿ ಕಾರ್ಯಕ್ರಮವು ಡಿಸೆಂಬರ್ 2 ರಿಂದ 4 ರವರೆಗೆ ನಡೆಯಲಿರುವುದರಿಂದ ಜಿಲ್ಲಾ ದಂಡಾಧಿಕಾರಿಗಳು ಹಾಗೂ ಜಿಲ್ಲಾಧಿಕಾರಿಗಳ ಆದೇಶದಂತೆ ನಗರಸಭೆ ವ್ಯಾಪ್ತಿಯಲ್ಲಿ ಸಾರ್ವಜನಿಕರ ಶಾಂತಿ ಹಾಗೂ ಕಾನೂನು ಸುವ್ಯವಸ್ಥೆಗೆ ಧಕ್ಕೆಯಾಗದಂತೆ ಮುಂಜಾಗ್ರತಾ ಕ್ರಮ ವಹಿಸುವ ಸಲುವಾಗಿ ಡಿಸೆಂಬರ್ 3ರ ಬುಧವಾರ ನಡೆಯಬೇಕಿದ್ದ ವಾರದ ಸಂತೆಯನ್ನು ಮುಂದೂಡಲಾಗಿದ್ದು, ಡಿಸೆಂಬರ್ 5ರ ಶುಕ್ರವಾರಕ್ಕೆ ನಿಗದಿಪಡಿಸಲಾಗಿದೆ. ಸಾರ್ವಜನಿಕರು ಸಹಕರಿಸಲು ಕೋರಲಾಗಿದೆ.

### ತಾಲ್ಲೂಕು ಮಟ್ಟದ ಪ್ರತಿಭಾ ಕಾರಂಜಿ ಕಾರ್ಯಕ್ರಮಕ್ಕೆ ಚಾಲನೆ

# ಮಕ್ಕಳ ಪ್ರತಿಭೆ ಅನಾವರಣಕ್ಕೆ ಪ್ರತಿಭಾ ಕಾರಂಜಿ ಅಗತ್ಯ : ಶಾಸಕ ಚನ್ನಬಸಪ್ಪ



**ಶಿವಮೊಗ್ಗ :** ಮಕ್ಕಳ ಪ್ರತಿಭೆ ಅನಾವರಣಕ್ಕೆ ಪ್ರತಿಭಾ ಕಾರಂಜಿಯಂತಹ ಕಾರ್ಯಕ್ರಮಗಳು ಅತ್ಯವಶ್ಯಕ ಎಂದು ಶಾಸಕ ಎಸ್. ಎನ್.ಚನ್ನಬಸಪ್ಪ ಹೇಳಿದರು.

ಅವರು ಶ್ರೀ ಆದಿಚುಂಚನಗಿರಿ ಶಿಕ್ಷಣ ಟ್ರಸ್ಟ್ ಶಿವಮೊಗ್ಗ ಶಾಖೆಯ ಗುರುಪುರದ ಬಿಜಿಎಸ್ ಆಂಗ್ಲ ಮಾಧ್ಯಮ ಪ್ರೌಢಶಾಲೆ,ಗುರುಪುರ, ಶಿವಮೊಗ್ಗ ಹಾಗೂ ಶಾಲಾ ಶಿಕ್ಷಣ ಇಲಾಖೆ, ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಛೇರಿ, ಶಿವಮೊಗ್ಗ ಇವರ ಸಂಯುಕ್ತ ಆಶ್ರಯದಲ್ಲಿ ನಡೆದ ತಾಲ್ಲೂಕು ಮಟ್ಟದ ಪ್ರತಿಭಾ ಕಾರಂಜಿ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡುತ್ತಾ, ಪ್ರತಿಭೆ ಎಲ್ಲಾ ಮಕ್ಕಳಲ್ಲಿ ಅಡಗಿರುತ್ತದೆ. ಅದನ್ನು ಹೊರ ತೆಗೆಯುವುದಕ್ಕಾಗಿಯೇ ಪ್ರತಿಭಾ ಕಾರಂಜಿ ಯಂತಹ ಕಾರ್ಯಕ್ರಮವನ್ನು ಆಯೋಜಿಸಲಾಗುತ್ತಿದೆ. ಮಕ್ಕಳು ಪಠ್ಯೇತರ ಚಟುವಟಿಗಳ ಜೊತೆಗೆ ಸಹಪಠ್ಯ ಚಟುವಟಿಕೆಗಳು ಶಿಕ್ಷಣದ ಒಂದು ಭಾಗವಾಗಿವೆ. ವಿದ್ಯಾರ್ಥಿಗಳು ಇದರ ಸದುಪಯೋಗ ಪಡೆದುಕೊಳ್ಳಬೇಕೆಂದು ತಿಳಿಸಿದರು.

ಶ್ರೀ ಆದಿಚುಂಚನಗಿರಿ ಶಾಖಾ ಮಠ, ಶಿವಮೊಗ್ಗ ಶಾಖೆಯ, ಶ್ರೀ ನಾದಮಯಾನಂದನಾಥ ಸ್ವಾಮೀಜಿ ದಿವ್ಯ ಸಾನಿಧ್ಯ ವಹಿಸಿ ಆಶೀರ್ವಚನ ನೀಡುತ್ತಾ, ದೀಪದ ಲೋಹ ಯಾವುದೇ ಆಗಿರಲಿ ಉರಿಯುತ್ತಿರುವ ದೀಪ ಬೆಳಕನ್ನು ನೀಡುತ್ತದೆ. ಸತತ ಪರಿಶ್ರಮದಿಂದ ಜ್ಞಾನ ವೃದ್ಧಿಯಾಗಲು ಸಾಧ್ಯ. ನಮ್ಮ ಭಾರತೀಯ ಸಂಸ್ಕೃತಿ, ಕಲೆಗೆ ಹೆಚ್ಚು ಮಹತ್ವ ನೀಡಿದೆ, ನಮ್ಮ ಗ್ರಾಮೀಣ ಜನಪದ ಕಲೆಗಳ ಸೊಗಡು ತುಂಬಾ ಅಭೂತ ಪೂರ್ವವಾದದು. ಪ್ರತಿಯೊಂದು ಮಗುವಿನಲ್ಲಿಯೂ ಪ್ರತಿಭೆ ಎನ್ನುವುದು ಬೂದಿ ಮುಚ್ಚಿದ ಕೆಂಡದಂತಿರುತ್ತದೆ ಎಂದರು.

ಪ್ರತಿಯೊಬ್ಬ ವಿದ್ಯಾರ್ಥಿಯು ಆತ್ಮ ಸಾಕ್ಷಿಯಾಗಿ ತಮ್ಮಲ್ಲಿರುವ ಕಲೆಯನ್ನು ಪ್ರದರ್ಶಿಸಬೇಕು ಎಂದ ಅವರು, ನಿಮ್ಮ ಪ್ರತಿಭೆಯನ್ನು ಗುರುತಿಸಿ ಪ್ರೋತ್ಸಾಹಿಸುವುದು ಶಿಕ್ಷಕರ ಹಾಗೂ ಪೋಷಕರ ಆದ್ಯ ಕರ್ತವ್ಯವಾಗಿದೆ. ಈ ಹಿನ್ನೆಲೆಯಲ್ಲಿ ತಾಲ್ಲೂಕು, ಜಿಲ್ಲೆ ಹಾಗೂ ರಾಜ್ಯ ಮಟ್ಟದ ಪ್ರತಿಭಾ ಕಾರಂಜಿಯನ್ನು ನಡೆಸಲಾಗುತ್ತಿದೆ ಎಂದು ಹೇಳಿದರು.

ಕೌಶಲ್ಯವನ್ನು ಹೊರ ತೆಗೆಯುವುದಕ್ಕಾಗಿ ಶಿಕ್ಷಣ ಇಲಾಖೆ ಇಂತಹ ಕಾರ್ಯಕ್ರಮಗಳನ್ನು ಆಯೋಜಿಸಿಕೊಂಡು ಬರುತ್ತಿದೆ ಎಂದ ಅವರು, ಹಿಂಜರಿಕೆ ನಿಮ್ಮ ಶತ್ರು, ಅದನ್ನು ತೊಡೆದು ಹಾಕಿ ಧೈರ್ಯದಿಂದ ಹಾಗೂ ಆತ್ಮವಿಶ್ವಾಸದಿಂದ ನಿಮ್ಮಲ್ಲಿರುವ ಪ್ರತಿಭೆ ಹಾಗೂ ಕೌಶಲ್ಯವನ್ನು ಪ್ರದರ್ಶಿಸಿ ಎಂದು ಕರೆ ನೀಡಿದರು.

ಮುಖ್ಯ ಅತಿಥಿಗಳಾಗಿ ಆಗಮಿಸಿದ್ದ ವಿಧಾನಪರಿಷತ್ ಸದಸ್ಯ ಡಾ. ಧನಂಜಯ್ ಸರ್ಜಿ ಮಾತನಾಡುತ್ತಾ, ನಮ್ಮ ಮಕ್ಕಳಿಗೆ ಹಾಗೂ ಸಮಾಜಕ್ಕೆ ಬೇಕಾಗುವ ಒಂದು ಒಳ್ಳೆಯ ಸಂಸ್ಕೃತಿ, ಸಂಸ್ಕಾರ, ಆತ್ಮವಿಶ್ವಾಸ ಅದನ್ನು ನಿರಂತರವಾಗಿ ಸಮಾಜಕ್ಕೆ ಕೊಡುಗೆಯಾಗಿ ಕೊಡುತ್ತಾ ಬಂದಿದೆ. ಓದು ವಕ್ಕಾಲು, ಬುದ್ಧಿ ಮುಕ್ಕಾಲು ಅಂದರೆ ಓದು ಏನು ಮಾಡುತ್ತದೆ ಅಂದರೆ ಕೆಲಸ ಮಾಡುತ್ತದೆ. ಬುದ್ಧಿ ಏನನ್ನು ಮಾಡುತ್ತದೆ ಅಂದರೆ ದೇಶ ಆಳುತ್ತದೆ. ಅಂ–ದರೆ ಓದಿನ ಜೊತೆ ಜೊತೆಗೆ ಪಠ್ಯೇತರ ಚಟುವಟಿಕೆ ಗಳಲ್ಲಿಯೂ ಭಾಗವಹಿಸಬೇಕು.

ಮಕ್ಕಳ ಮನಸ್ಸು ಮೊಗ್ಗಿನಂತೆ, ಅವರ ಅಂತರಾಳವನ್ನು ಅರಿತು ಶಿಕ್ಷಕರು ಮತ್ತು ಪೋಷಕರು ಮಕ್ಕಳಲ್ಲಿರುವ ನಕಾರಾತ್ಮಕ ವಿಚಾರಗಳನ್ನು ತೊಡೆದು ಹಾಕಿ ಒಳ್ಳೆಯ ಸಂಸ್ಕಾರಯುತ ಶಿಕ್ಷಣವನ್ನು ಕೊಟ್ಟಾಗ ಮಾತ್ರ ಸಮಾಜದಲ್ಲಿ ಉತ್ತಮ ಪ್ರಜೆಗಳಾಗಲು ಸಾಧ್ಯ ಎಂದರು.

ಕಾರ್ಯಕ್ರಮದಲ್ಲಿ ವಿಧಾನ ಪರಿಷತ್ ಸದಸ್ಯೆ ಬಲ್ಕಿಸ್ ಬಾನು, ಶಿವಮೊಗ್ಗ ತಾಲೂಕು ಗ್ಯಾರಂಟಿ ಯೋಜನೆಗಳ ಅನುಷ್ಠಾನ ಅಧ್ಯಕ್ಷ, ಮಧು ಎಚ್. ಎಂ., ಕ್ಷೇತ್ರ ಶಿಕ್ಷಣಾಧಿಕಾರಿ ರಮೇಶ್, ಸಂಸ್ಥೆಯ ನಿರ್ದೇಶಕ ರವೀಶ್ ಎಚ್. ಎನ್., ಗುರುಕುಲ ಶಾಲಾ ಕಾಲೇಜಿನ ಪ್ರಾಂಶುಪಾಲ ಸುರೇಶ್ ಎಸ್.ಎಚ್., ಶಿವಮೊಗ್ಗ ತಾಲೂಕಿನ ವಿವಿಧ ಶಿಕ್ಷಕರ ಸಂಘದ ಅಧ್ಯಕ್ಷರು ಮತ್ತು ಕಾರ್ಯದರ್ಶಿಗಳು ಇನ್ನು ಮುಂತಾದವರು ಉಪಸ್ಥಿತರಿದ್ದರು.

# ಬಳ್ಳಾರಿ: ಸಿರುಗುಪ್ಪದ ಮುದ್ದೇನೂರು ಬಳಿ ಅಪರೂಪದ ಸೂರ್ಯ, ಬ್ರಹ್ಮ ವಿಗ್ರಹ ಪತ್ತೆ

**ಬಳ್ಳಾರಿ :** ಬಳ್ಳಾರಿ ಜಿಲ್ಲೆಯ ಸಿರುಗುಪ್ಪ ತಾಲ್ಲೂಕಿನ



ಮುದ್ದೇನೂರು ಗ್ರಾಮದ ಬಳಿ 'ವಿಜಯನಗರ ಹೆರಿಟೇಜ್ ಎಕ್ಸ್‌ಪ್ಲೋರೇಷನ್ ಗ್ರೂಪ್'ನ ಸಂಶೋಧನಾ ತಂಡವು ಸೂರ್ಯ (ಸೂರ್ಯ ದೇವರು)ನ ಅಸಾಧಾರಣ ಕಪ್ಪು ಶಿಲೆಯ ಶಿಲ್ಪ ಮತ್ತು ಬ್ರಹ್ಮನ ಅಪರೂಪದ ವಿಗ್ರಹವನ್ನು ಪತ್ತೆಮಾಡಿದೆ. ಗ್ರಾಮಕ್ಕೆ ಹೋಗುವ ರಸ್ತೆಯ ಬಳಿ ಇರುವ ಮೌನೇಶ್ ಎಂಬವವರಿಗೆ ಸೇರಿದ ಹೊಲದ ಅಂಚಿನಲ್ಲಿ ಈ ವಿಗ್ರಹಗಳು ಪತ್ತೆಯಾಗಿವೆ. ಸೂಕ್ಷ್ಮವಾದ ಕಪ್ಪು ಕಲ್ಲಿನಿಂದ ಕೆತ್ತಿದ ಈ ಶಿಲ್ಪಗಳನ್ನು ಸ್ಥಳೀಯ ನಿವಾಸಿಗಳಾದ ಬಲ್ಲುಂಡಿ ಗ್ರಾಮದ ಹನುಮಂತಪ್ಪ, ಜಡೇಶ್ ಮತ್ತು ಕುಬೇರಪ್ಪ ಅವರ ನೆರವಿನಿಂದಾಗಿ ಗುರುತಿಸಲಾಗಿದೆ. ವಿಜಯನಗರ ಶ್ರೀ ಕೃಷ್ಣದೇವರಾಯ ವಿಶ್ವವಿದ್ಯಾಲಯದ ವಿಜಯನಗರ ಪರಿಶೋಧನಾ ಗುಂಪಿನ ಅಧ್ಯಕ್ಷ ಟಿಎಚ್‌ಎಂ ಬಸವರಾಜ್ ಮತ್ತು ಕನ್ನಡ ವಿಶ್ವವಿದ್ಯಾಲಯದ ಸಹಾಯಕ ಪ್ರಾಧ್ಯಾಪಕ ಗೋವಿಂದ ನೇತೃತ್ವದ ತಂಡವು ಈ ವಿಗ್ರಹಗಳ ಪತ್ತೆಮಾಡಿದೆ.

ಪೂರ್ವಕ್ಕೆ ಮುಖ ಮಾಡಿರುವ ರೀತಿಯಲ್ಲಿರುವ ಸೂರ್ಯ ವಿಗ್ರಹವು 51 ಸೆಂ.ಮೀ ಅಗಲ ಮತ್ತು 83 ಸೆಂ.ಮೀ ಎತ್ತರವಿದೆ. ಇದರ ಪಾದಗಳು 13 ಸೆಂ.ಮೀ ಅಳತೆಯನ್ನು ಹೊಂದಿವೆ. ಎರಡೂ ಕೈಗಳಲ್ಲಿ ಕಮಲದ ಹೂವುಗಳನ್ನು ಹಿಡಿದಿರುವ ರೀತಿಯಲ್ಲಿ ಈ ವಿಗ್ರಹ ಇದೆ. ತಲೆಯ ಹಿಂದೆ ವೃತ್ತಾಕಾರದ ಪ್ರಭಾವಲಯವನ್ನು ಕೆತ್ತಲಾಗಿದೆ ಎಂದು ಸಂಶೋಧನಾ ತಂಡದ ಸದಸ್ಯರಲ್ಲಿ ಒಬ್ಬರಾದ ಗೋವಿಂದ್ ತಿಳಿಸಿದ್ದಾರೆ.

**11ನೇ ಶತಮಾನದ ವಿಗ್ರಹ:** ಶಿಲ್ಪಕಲೆಯ ಶೈಲಿಯ ಆಧಾರದಲ್ಲಿ, ಈ ವಿಗ್ರಹವು 11ನೇ ಶತಮಾನಕ್ಕೆ ಸೇರಿದ್ದಾಗಿರಬಹುದು ಎಂದು ಅಂದಾಜು ಮಾಡಲಾಗಿದೆ. ಕುರುಗೋಡು ಸಿಂದರ ಆಡಳಿತದ ಅಡಿಯಲ್ಲಿ ಬಲ್ಲುಂಡೆ ರಾಜಧಾನಿಯಾಗಿ ಸೇವೆ ಸಲ್ಲಿಸಿದ್ದ ಅವಧಿ ಇದು ಎನ್ನಲಾಗಿದೆ. ಬಲ್ಲುಂಡೆ ಅಪಾರ ಐತಿಹಾಸಿಕ ಮತ್ತು ಪೌರಾಣಿಕ ಮಹತ್ವವನ್ನು ಹೊಂದಿದೆ. ಗ್ರಾಮ ದೇವತೆ ಬನ್ನಿ ಮಹಾಂಕಾಳಿ ದೇವಾಲಯದ ಮುಂದೆ ಇರುವ ಕಪ್ಪು ಕಲ್ಲಿನ ಬ್ರಹ್ಮ ವಿಗ್ರಹವು ಅಗಲವಾದ ಎದೆ ಮತ್ತು ಎತ್ತಿದ ಕೈಗಳನ್ನು ಹೊಂದಿರುವ ಪ್ರಭಾವಶಾಲಿ ಶಿಲ್ಪವಾಗಿದೆ ಎಂದು ಅವರು ತಿಳಿಸಿದ್ದಾರೆ.

ಇಂದು ಹಳ್ಳಿಗಳಲ್ಲಿ ಬ್ರಹ್ಮ ಪೂಜೆ ವಿರಳವಾಗಿ ನಡೆ–ಯುತ್ತಿದ್ದರೂ ಆಗಾಗ್ಗೆ ಕಪ್ಪು ಕಲ್ಲುಗಳನ್ನು ದೇವತೆಯ ಪ್ರತಿನಿಧಿಗಳಾಗಿ ಗುರುತಿಸಲಾಗುತ್ತದೆ. ಬಲ್ಲುಂಡೆಯಲ್ಲಿರುವ ವಿಗ್ರಹವು ಒಂದು ಅದ್ಭುತವಾದ ಕೆತ್ತನೆ. ಸ್ಥಳೀಯರು ಇದನ್ನು 'ಮೂರು ಮುಖದ ಅಮ್ಮ' ಎಂದು ಕರೆ–ಯುತ್ತಾರೆ. ಜತೆಗೆ ಹಗರಿ ನದಿಯ ದಡದಲ್ಲಿ ವಿರೂಪಗೊಂಡ ದೇವತೆಯ ಶಿಲ್ಪ, ನಾಗಾ ಕಲ್ಲು ಮತ್ತು ನಂದಿ ವಿಗ್ರಹದ ಅವಶೇಷಗಳ ಇರುವುದನ್ನೂ ಸಂಶೋಧಕರ ತಂಡ ಪತ್ತೆ ಮಾಡಿದೆ.

ಪತ್ತೆಯಾಗಿರುವ ಸೂರ್ಯ ವಿಗ್ರಹದ ಕಾಲುಗಳು ಮುರಿದಿರುವ ಸ್ಥಿತಿಯಲ್ಲಿದೆ. ಐತಿಹಾಸಿಕವಾಗಿ ಮಹತ್ವದ ಇಂತಹ ಕಲಾಕೃತಿಗಳನ್ನು ಸಂರಕ್ಷಿಸಲು ಜಿಲ್ಲಾಡಳಿತ ತಕ್ಷಣ ಕ್ರಮಗಳನ್ನು ತೆಗೆದುಕೊಳ್ಳಬೇಕೆಂದು ತಜ್ಞರು ಒತ್ತಾಯಿಸಿರುವುದಾಗಿಯೂ ವರದಿ ಉಲ್ಲೇಖಿಸಿದೆ.

Published and Owned by : **PRATHIBHA M.S.**, Published at : No. 900/A2, Opp-Banashankri Temple Arch, Main Road, Shakti Nagara, Davanagere, Karnataka-577004. Printed by : **MALLIKARJUNAPPA H.G.** Printed at : SHIVA MEDIA HOUSE, No.900/A2, Opp-Banashankari Temple Arch, Main Road, Davanagere, Karnataka-577004. Editor: **MALLIKARJUNAPPA H.G.**